ಬೆಂಗಳೂರು ಸಂಪುಟ: 16 ಸಂಚಿಕೆ: 56 ಪುಟ: 06 ಬುಧವಾರ 22-01-2025 ₹ 3 Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB) Executive Editor: L P Babu Honourary Editor: Venkatesh



ಕಂಬ್ಯಾಕ್ ಸುಳಿವು ನೀಡಿದ ಎಬಿಡಿ

'ಬೆಡ್ ಶೀರ್'; ನಟಿ ಟಬು ಕೆಂಡಾಮಂಡಲ

ಯಾವ ಪಾತ್ರಕ್ಕೂ 'ಸೈ' ಪುಟ 6

# ಮುನಿದ ಜವರಾಯ

## ಪ್ರತ್ಯೇಕ ಅಪಘಾತ; 14 ಮಂದಿ ದುರ್ಮರಣ







**ಬೆಂಗಳೂರು:** ರಾಜ್ಯದಲ್ಲಿ ಇಂದು ಮುಂಜಾನೆ ಸಂಭವಿಸಿದ ಎರಡು ಭೀಕರ ರಸ್ತೆ ಅಪಘಾತಗಳಲ್ಲಿ ಮೂವರು ವಿದ್ಯಾರ್ಥಿಗಳು ಸೇರಿದಂತೆ 14 ಮಂದಿ ಮೃತಪಟ್ಟಿದ್ದಾರೆ.

ಉತ್ತರ ಕನ್ನಡ ಜಿಲ್ಲೆಯ ಯಲ್ಲಾಪುರ ತಾಲ್ಲೂಕಿನ ರಾಷ್ಟ್ರೀಯ ಹೆದ್ದಾರಿ 63 ರ ಬಳಿ ತರಕಾರಿ ತುಂಬಿದ್ದ ಲಾರಿ ಪಲ್ಟಿಯಾದ ಪರಿಣಾಮ 10 ಮಂದಿ ಸಾವನ್ನಪ್ಪಿರುವ ದಾರುಣ ಘಟನೆ ಮುಂಜಾನೆ 4.30 ರ ಸುಮಾರಿನಲ್ಲಿ ಸಂಭವಿಸಿದೆ.

ಮೃತರೆಲ್ಲರೂ ಹಾವೇರಿ ಜಿಲ್ಲೆಯ ಸವಣೂರು ಪಟ್ಟಣದವರೆಂದು ಗುರುತಿಸಲಾಗಿದ್ದು, 15ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದು, ಹುಬ್ಬಳ್ಳಿಯ ಕಿಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಮೃತಪಟ್ಟವರನ್ನು ಫಯಾಜ್ ಜಮಖಂಡಿ (45), ವಾಸಿಂ ಮುಡಗೇರಿ (35), ಹಿಜಾಜ್‌ಮುಲ್ಲಾ (20), ಸಾಧಿಕ್ ಭಾಷ (30), ಗುಲಾಂ ಹುಸೇನ್ ಜವಳಿ (40), ಇಮ್ತಿಯಾಜ್ (36), ಅಲ್ಫಾಜ್ ಜಾಫರ್ (25), ಜಿಲಾನಿ ಅಬ್ದುಲ್ (28), ಅಸ್ಲಂ (24) ಹಾಗೂ ಮತ್ತೊಬ್ಬರು ಆಸ್ಪತ್ರೆಯಲ್ಲಿ ಮೃತಪಟ್ಟಿದ್ದು, ಇವರ ಹೆಸರು ಸದ್ಯಕ್ಕೆ ತಿಳಿದುಬಂದಿಲ್ಲ. ಸವಣೂರಿನಿಂದ ಸುಮಾರು 30 ಮಂದಿ ತರಕಾರಿ ಹಾಗೂ ಹಣ್ಣುಗಳನ್ನು ಪುಟ 2

## ತಲಾ 3 ಲಕ್ಷ ಪರಿಹಾರ: ಸಿಎಂ

ಬೆಂಗಳೂರು: ಪ್ರತ್ಯೇಕ ಅಪಘಾತದಲ್ಲಿ ಮೃತಪಟ್ಟ 14 ಮಂದಿಯ ಕುಟುಂಬಗಳಿಗೆ ತಲಾ 3 ಲಕ್ಷ ರೂ. ಪರಿಹಾರ ನೀಡುವುದಾಗಿ ಸಿಎಂ ಸಿದ್ದರಾಮಯ್ಯ ಘೋಷಣೆ ಮಾಡಿದ್ದಾರೆ.



ಈ ಕುರಿತು ಟ್ವೀಟ್ ಮಾಡಿರುವ ಸಿಎಂ ಸಿದ್ದರಾಮಯ್ಯ, ಉತ್ತರ ಕನ್ನಡ ಜಿಲ್ಲೆಯ ಯಲ್ಲಾಪುರ ಹಾಗೂ ರಾಯಚೂರು ಜಿಲ್ಲೆಯ ಸಿಂಧನೂರಿನಲ್ಲಿ ಸಂಭವಿಸಿದ ಎರಡು ಪ್ರತ್ಯೇಕ ಅಪಘಾತಗಳಲ್ಲಿ ಒಟ್ಟು 14 ಜನ ಸಾವನ್ನಪ್ಪಿರುವ ಸುದ್ದಿ ತಿಳಿದು ಸಂಕಟವಾಯಿತು. ಮೃತರ ಆತ್ಮಗಳಿಗೆ ಚಿರಶಾಂತಿ ಕೋರುತ್ತೇನೆ. ಈ ದುರ್ಘಟನೆಗಳಲ್ಲಿ ತಮ್ಮವರನ್ನು ಕಳೆದುಕೊಂಡು ದುಃಖದಲ್ಲಿರುವ ನೊಂದ ಜನರಿಗೆ ನನ್ನ ಸಂತಾಪಗಳು. ಪುಟ 2



ಬೃಹತ್ ಕೈಗಾರಿಕೆ ಸಚಿವ ಎಂ.ಬಿ.ಪಾಟೀಲ ಅವರ ನೇತೃತ್ವದ ನಿಯೋಗ ಬುಧವಾರ ನವದೆಹಲಿಯಲ್ಲಿ ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವರಾದ ಎಚ್.ಡಿ.ಕುಮಾರಸ್ವಾಮಿ ಅವರನ್ನು ಉಕ್ಕು ಸಚಿವಾಲಯದ ಕಚೇರಿಯಲ್ಲಿ ಭೇಟಿಯಾಗಿ ಬೆಂಗಳೂರಿನಲ್ಲಿ ಫೆ.11ರಿಂದ 14ರವರೆಗೆ ನಡೆಯಲಿರುವ ಜಾಗತಿಕ ಹೂಡಿಕೆದಾರರ ಸಮಾವೇಶದಲ್ಲಿ ಭಾಗಿಯಾಗುವಂತೆ ಆಹ್ವಾನ ನೀಡಿದರು. ಈ ಸಂದರ್ಭದಲ್ಲಿ ಕೈಗಾರಿಕಾ ಇಲಾಖೆ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್ , ಆಯುಕ್ತರಾದ ಗುಂಜನ್ ಕೃಷ್ಣ ಮತ್ತಿತರರು ಇದ್ದರು.

## ಯಾವ ಅರ್ಥದಲ್ಲಿ ಹೇಳಿದ್ದಾರೋ ಗೊತ್ತಿಲ್ಲ

**ತುಮಕೂರು:** ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ತ್ಯಾಗ ಮಾಡುವ ಮನೋಭಾವದ ಬಗ್ಗೆ ಹೇಳಿರುವ ಮಾತು ಅರ್ಥ ಆಗಿಲ್ಲ. ಅವರು ಯಾವ ಅರ್ಥದಲ್ಲಿ ಹೇಳಿದ್ದಾರೋ ಗೊತ್ತಿಲ್ಲ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಇಂದಿಲ್ಲಿ ಪ್ರತಿಕ್ರಿಯಿಸಿದರು.

ನಗರದ ಸಿದ್ದಗಂಗಾ ಮಠಕ್ಕೆ ಭೇಟಿ ನೀಡಿ ಲಿಂಗೈಕ್ಯ ಡಾ. ಶ್ರೀ ಶಿವಕುಮಾರ ಸ್ವಾಮೀಜಿಯವರ ಗದ್ದುಗೆ ದರ್ಶನ ಪಡೆದು, ಮಠಾಧ್ಯಕ್ಷರಾದ ಶ್ರೀ ಸಿದ್ದಲಿಂಗ ಸ್ವಾಮೀಜಿಯವರ ಆಶೀರ್ವಾದ ಪಡೆದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಸ್ತುತ ಕಾಂಗ್ರೆಸ್ ಪಕ್ಷದಲ್ಲಿ ಮಾತ್ರ ತ್ಯಾಗ ಕಡಿಮೆಯಾಗಿಲ್ಲ, ಇಡೀ ಸಮಾಜದಲ್ಲಿ ತ್ಯಾಗದ ಮನೋಭಾವನೆ ಕಡಿಮೆಯಾಗಿದೆ. ಹಾಗೆಯೇ ಸ್ವಾಭಾವಿಕವಾಗಿ ಕಾಂಗ್ರೆಸ್‌ನಲ್ಲೂ ತ್ಯಾಗ ಮನೋಭಾವ ಕಡಿಮೆಯಾಗಿದೆ ಎಂದು ಹೇಳಿದರು.

ಕಾಂಗ್ರೆಸ್‌ನವರು ಸ್ವಾತಂತ್ರ್ಯ ಹೋರಾಟದಲ್ಲಿ ತ್ಯಾಗ ಮಾಡಿದ್ದಾರೆ. ಅಂತಹ ತ್ಯಾಗ, ಬಲಿದಾನ ಈಗಿನ ಆಧುನಿಕ ಸಮಾಜದಲ್ಲಿ ಕಡಿಮೆಯಾಗಿದೆ ಎಂಬ ಅರ್ಥದಲ್ಲಿ ತ್ಯಾಗದ



ಮಾತು ಹೇಳಿರಬಹುದು ಎಂದರು.

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಮುಂದಿನ ಅವಕಾಶಕ್ಕಾಗಿ ಕಾಯುತ್ತಿದ್ದೇನೆ ಎಂದು ಹೇಳಿಕೆ ನೀಡಿರುವ ವಿಚಾರದ ಬಗ್ಗೆ ಪತ್ರಕರ್ತರು ಪ್ರಸ್ತಾಪಿಸಿದಾಗ, ಶ್ರೀಮಠದಲ್ಲಿ ಯಾವುದೇ ರಾಜಕೀಯ ಮಾತನಾಡಲ್ಲ ಎಂದರು. ನಿನ್ನೆ ನಡೆದಾಡುವ ದೇವರು ಲಿಂಗೈಕ್ಯ ಡಾ. ಶ್ರೀ ಶಿವಕುಮಾರ ಸ್ವಾಮೀಜಿಯವರ 6ನೇ ಪುಣ್ಯ ಸಂಸ್ಮರಣೋತ್ಸವ ಸಮಾರಂಭದಲ್ಲಿ ಪಾಲ್ಗೊಳ್ಳಲು ಸಾಧ್ಯವಾಗಲಿಲ್ಲ. ಹಾಗಾಗಿ ಇಂದು ಗದ್ದುಗೆ ಪೂಜೆ ಮಾಡಿ ಆಶೀರ್ವಾದ ಪಡೆದಿದ್ದೇನೆ ಎಂದರು.

ಡಾ. ಶಿವಕುಮಾರ ಶ್ರೀಗಳ ಸಾಧನೆ ಇಡೀ ಜಗತ್ತಿಗೆ ಗೊತ್ತಿದೆ. ಅವರನ್ನು ನಾವು ಯಾವತ್ತೂ ಸ್ಮರಿಸಬೇಕು ಎಂದು ಅವರು ತಿಳಿಸಿದರು.

**ಸಿಎಂ ಜತೆ ಚರ್ಚೆ:** ಶ್ರೀಗಳ ಪುಣ್ಯ ಸ್ಮರಣೆ ದಿನವನ್ನು ದಾಸೋಹ ದಿನವನ್ನು ಅರ್ಥಪೂರ್ಣವಾಗಿ ಆಚರಣೆ ಮಾಡಲು ಸರ್ಕಾರದ ಹಂತದಲ್ಲಿ ಚರ್ಚೆ ನಡೆಸುತ್ತೇನೆ. ಈ ಸಂಬಂಧ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ಕ್ರಮ ಕೈಗೊಳ್ಳುವುದಾಗಿ ಅವರು ಹೇಳಿದರು.

ಶ್ರೀಗಳ ಹುಟ್ಟೂರು ವೀರಾಪುರದಲ್ಲಿ ಪ್ರತಿಮೆ ನಿರ್ಮಾಣ ಕಾರ್ಯ ನನೆಗುದಿಗೆ ಬಿದ್ದಿರುವ ವಿಚಾರ ನನ್ನ ಗಮನಕ್ಕೆ ಬಂದಿಲ್ಲ. ಈ ಬಗ್ಗೆಯೂ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ಬಜೆಟ್‌ನಲ್ಲಿ ಹಣ ಪುಟ 2

## 5 ಕೋಟಿ ಮೌಲ್ಯದ ಅಂಬರ್‌ಗ್ರೀಸ್ ವಶ; ಬಂಧನ

**ಥಾಣೆ:** 5 ಕೋಟಿ ರೂಪಾಯಿ ಮೌಲ್ಯದ ಅಂಬರ್‌ಗ್ರೀಸ್ ಅಥವಾ ತಿಮಿಂಗಿಲ ವಾಂತಿಯನ್ನು ಪೊಲೀಸರು ವಶಪಡಿಸಿಕೊಂಡು, ಓರ್ವ ವ್ಯಕ್ತಿಯನ್ನು ಬಂಧಿಸಿದ್ದಾರೆ. ಅಂಬರ್‌ಗ್ರೀಸ್ ವೀರ್ಯ ತಿಮಿಂಗಿಲಗಳ ಜೀರ್ಣಾಂಗ ವ್ಯವಸ್ಥೆಯಲ್ಲಿ ಉತ್ಪತ್ತಿಯಾಗುವ ಮೇಣದಂಥ ವಸ್ತುವಾಗಿದೆ ಮತ್ತು ಅದರ ವ್ಯಾಪಾರವು ಕಾನೂನುಬಾಹಿರವಾಗಿದೆ. ಐಷಾರಾಮಿ ಸುಗಂಧ ದ್ರವ್ಯಗಳಲ್ಲಿ ಅದರ ಬಳಕೆಗಾಗಿ ಅಂತರಾಷ್ಟ್ರೀಯ ಮಾರುಕಟ್ಟೆಗಳಲ್ಲಿ ಇದನ್ನು ಸಾಮಾನ್ಯವಾಗಿ ತೇಲುವ ಚಿನ್ನ ಎಂದು ಕರೆಯಲಾಗುತ್ತದೆ. ಖಚಿತ ಸುಳಿವಿನ ಮೇರೆಗೆ ಅಪರಾಧ ವಿಭಾಗದ ತಂಡವು ರಾಬೋಡಿ ಪ್ರದೇಶದಲ್ಲಿ ಕಟ್ಟೆಚ್ಚರ ವಹಿಸಿದೆ ಮತ್ತು 53 ವರ್ಷದ ವ್ಯಕ್ತಿಯನ್ನು ಪುಟ 2

## ಖೋಟಾ ನೋಟು ಪ್ರಿಂಟ್: ಬಂಧನ

**ಮೈಸೂರು:** ಜಿಲ್ಲೆಯ ಮಾದಾಪುರ ಬಳಿ ದನದ ಕೊಟ್ಟಿಗೆಯಲ್ಲಿ ಖೋಟಾ ನೋಟು ಪ್ರಿಂಟ್ ಮಾಡುತ್ತಿದ್ದ ಖಚಿತ ಮಾಹಿತಿಯ ಮೇರೆಗೆ ಟಿ. ನರಸೀಪುರ ಪೊಲೀಸರು ದಾಳಿ ಮಾಡಿ ಕೃತ್ಯದಲ್ಲಿ ತೊಡಗಿದ್ದ ತಂದೆ ಮತ್ತು ಮಗನನ್ನು ಬಂಧಿಸಿರುವ ಘಟನೆ ಟಿ. ನರಸೀಪುರ ತಾಲ್ಲೂಕಿನ ಹಿರಿಯೂರು ಗ್ರಾಮದಲ್ಲಿ ನಡೆದಿದೆ. ಕೊಟ್ಟಿಗೆಯಲ್ಲಿದ್ದ ನೋಟು ಪ್ರಿಂಟ್ ಮಾಡಲು ಬಳಸುತ್ತಿದ್ದ ಸಾಮಗ್ರಿಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. ಹಿರಿಯೂರು ಗ್ರಾಮದ ನಾಗೇಶ್ (25) ಹಾಗೂ ಶಿವಪ್ರಸಾದ್ (48) ಬಂಧಿತ ಆರೋಪಿಗಳು. ಪುಟ 2

## ಕಾಡಾನೆ ದಾಳಿಗೆ ಮತ್ತೋರ್ವ ಬಲಿ

**ಹಾಸನ:** ಕಾಡಾನೆ ದಾಳಿಗೆ ವಯೋವೃದ್ಧರೊಬ್ಬರು ಬಲಿಯಾಗಿರುವ ಘಟನೆ ಹಾಸನ ಜಿಲ್ಲೆಯ ಆಲೂರು ತಾಲೂಕಿನ ಅಡಿಬೈಲು ಗ್ರಾಮದಲ್ಲಿ ಈ ಘಟನೆ ನಡೆದಿದೆ.

ಪುಟ್ಟಯ್ಯ (78) ಕಾಡಾನೆ ದಾಳಿಗೆ ಬಲಿಯಾದ ವಯೋವೃದ್ಧ. ನಿನ್ನೆ ಸಂಜೆ ಮಗ್ಗೆ ಗ್ರಾಮದಿಂದ ಅಡಿಬೈಲು ಗ್ರಾಮಕ್ಕೆ ನಡೆದುಕೊಂಡು ಹೋಗುತ್ತಿದ್ದ ವೇಳೆ ಏಕಾಏಕಿ ಆನೆ ದಾಳಿ ನಡೆಸಿದೆ. ದಾಳಿಯಿಂದ ತಪ್ಪಿಸಿಕೊಳ್ಳಲು ಓಡಲು ಪ್ರಯತ್ನ ಪಟ್ಟರೂ ಕಾಡಾನೆ ತನ್ನ ಕಾಲಿನಿಂದ ತುಳಿದು ಮರಕ್ಕೆ ಅಪ್ಪಳಿಸಿ ಬಿಸಾಡಿದೆ. ಇದರಿಂದ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.

ಪುಟ್ಟಯ್ಯ ಮನೆಗೆ ಬಾರದ ಕಾರಣ ಕುಟುಂಬಸ್ಥರು ಹುಡುಕಾಡಿದ್ದರು. ಆದರೆ ಪತ್ತೆಯಿರಲಿಲ್ಲ. ಇಂದು ಬೆಳಗ್ಗೆ ಎಂದಿನಂತೆ ಗ್ರಾಮಸ್ಥರು ಕಾಫಿ ತೋಟಕ್ಕೆ ಹೋದ ವೇಳೆ ಪುಟ್ಟಯ್ಯನ ಶವ ಪತ್ತೆಯಾಗಿದೆ.

ನಿನ್ನೆ ರಾತ್ರಿ ಆಲೂರು ಭಾಗದ ಕಾಫಿ ತೋಟದಲ್ಲಿ ಘೀಳಿಡುತ್ತಿದ್ದ ಕಾಡಾನೆಯನ್ನು ಓಡಿಸಲು ಅರಣ್ಯ ಇಲಾಖೆಯ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದರು. ಆದರೆ ಕಾಡಾನೆ ಪುಟ 2

## ಶಾಹಿ ಈದ್ಗಾ ಮಸೀದಿ : ಸುಪ್ರೀಂ ಕೋರ್ಟ್ ತಡೆಯಾಜ್ಞೆ ವಿಸ್ತರಣೆ

**ನವದೆಹಲಿ:** ಮಥುರಾದ ಶಾಹಿ ಈದ್ಗಾ ಮಸೀದಿ ಸಂಕೀರ್ಣದ ನ್ಯಾಯಾಲಯದ ಮೇಲ್ವಿಚಾರಣೆಯಲ್ಲಿ ಸಮೀಕ್ಷೆಗೆ ಅನುಮತಿ ನೀಡಿದ ಅಲಹಾಬಾದ್ ಹೈಕೋರ್ಟ್ ಆದೇಶದ ಮೇಲಿನ ತಡೆಯಾಜ್ಞೆಯನ್ನು ಸುಪ್ರೀಂ ಕೋರ್ಟ್ ಬುಧವಾರ ವಿಸ್ತರಿಸಿದೆ.


ಹಿಂದೂಗಳ ಮಹತ್ವದ ಧಾರ್ಮಿಕ ಪ್ರಾಮುಖ್ಯತೆಯ ಸ್ಥಳವಾದ ಕೃಷ್ಣ ಜನ್ಮಭೂಮಿ ದೇವಾಲಯದ ಪಕ್ಕದಲ್ಲಿ ಈ ಮಸೀದಿಯಿದೆ. ಏಪ್ರಿಲ್ 1 ರಿಂದ ಆ ವಾರದಲ್ಲಿ ಮಸೀದಿ ಸಂಕೀರ್ಣದ ನ್ಯಾಯಾಲಯದ ಮೇಲ್ವಿಚಾರಣೆಯಲ್ಲಿ ನಡೆಸಲಾಗುತ್ತಿರುವ ಸಮೀಕ್ಷೆಯ ವಿರುದ್ಧ ಟ್ರಸ್ಟ್ ಶಾಹಿ ಮಸೀದಿ ಈದ್ಗಾದ ನಿರ್ವಹಣಾ ಸಮಿತಿ ಸಲ್ಲಿಸಿರುವ ಅರ್ಜಿಯ ವಿಚಾರಣೆ ನಡೆಸುವುದಾಗಿ




ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ಮತ್ತು ನ್ಯಾಯಮೂರ್ತಿಗಳಾದ ಸಂಜಯ್ ಕುಮಾರ್ ಮತ್ತು ಕೆ.ವಿ. ವಿಶ್ವನಾಥನ್ ಅವರನ್ನೊಳಗೊಂಡ ಪೀಠ ಹೇಳಿದೆ.

ಸುಪ್ರೀಂ ಕೋರ್ಟ್‌ನಲ್ಲಿ ಈಗ ಮೂರು ಪ್ರಕರಣಗಳು ಬಾಕಿ ಉಳಿದಿವೆ. ಅವು ನ್ಯಾಯಾಲಯದೊಳಗಿನ ಪುಟ 2

## ಡಿಕೆಶಿ ಸಿಎಂ: ತಪ್ಪಿಸಲು ಸಾಧ್ಯವಿಲ್ಲ



**ಬೆಂಗಳೂರು:** ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗುವುದನ್ನು ಯಾರಿಂದಲೂ ತಪ್ಪಿಸಲು ಆಗುವುದಿಲ್ಲ ಎಂದು ಬಿಜೆಪಿಯ ವಿಧಾನಪರಿಷತ್ ಸದಸ್ಯ ಎಚ್.ವಿಶ್ವನಾಥ್‌ಹೇಳಿದ್ದಾರೆ.

ಕೆಪಿಸಿಸಿ ಅಧ್ಯಕ್ಷ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ರವರ ಸದಾಶಿವನಗರದ ನಿವಾಸಕ್ಕೆ ಭೇಟಿ ನೀಡಿದ ಅವರು ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದರು. ಸಿದ್ದರಾಮಯ್ಯನವರೇ 5 ವರ್ಷ ಮುಖ್ಯಮಂತ್ರಿ ಎಂದು ಹೇಳುತ್ತಿದ್ದಾರೆ. ಅದು ಮುಠ್ಠಾಳತನಎಂದು ಕಿಡಿಕಾರಿದ್ದಾರೆ. ರಾಜ್ಯದಲ್ಲಿ ಕಾಂಗ್ರೆಸ್ 136 ಸ್ಥಾನ ಗೆಲ್ಲಲು ಡಿ.ಕೆ.ಶಿವಕುಮಾರ್ ಅವರ ಕೊಡುಗೆ ಬಹಳಷ್ಟಿದೆ. ಅವರದು ಸಾಕಷ್ಟು ಖರ್ಚಾಗಿದೆ. ಚುನಾವಣಾ ಸಂದರ್ಭದಲ್ಲಿ ಮುಖ್ಯಮಂತ್ರಿ ಹುದ್ದೆಯ ಬಗ್ಗೆ ಮಾತುಕತೆಯಾಗಿತ್ತು. ಹೀಗಾಗಿ ಮುಂದೆ ಪುಟ 2

## ಎಲ್ಲ ಶಾಸಕರ ಜೊತೆ ಮಾತುಕತೆ ನಡೆಸಿದ ರಾಧಾಮೋಹನ್

**ಬೆಂಗಳೂರು :** ರಾಜ್ಯ ಬಿಜೆಪಿಯಲ್ಲಿನ ಬಣ ಬಡಿದಾಟಕ್ಕೆ ಅಂತ್ಯ ಹಾಡಲು ಮುಂದಾಗಿರುವ ಹೈಕಮಾಂಡ್, ಬಿಜೆಪಿಯ ಎಲ್ಲಾ ನಾಯಕರನ್ನು ಮತ್ತೆ ಒಗ್ಗೂಡಿಸುವ ಪ್ರಯತ್ನ ನಡೆಸಿದೆ. ಬೆಂಗಳೂರಿನ ಬಿಜೆಪಿ ಕಚೇರಿಯಲ್ಲಿ ಶಾಸಕರ ಜೊತೆ ರಾಜ್ಯ ಉಸ್ತುವಾರಿ ರಾಧಾಮೋಹನ್ ದಾಸ್ ಅಗರವಾಲ್ ಅವರು ಮಾತುಕತೆ ನಡೆಸಿದರು.

ಪ್ರತಿ ಶಾಸಕರ ಜೊತೆ ರಾಧಾಮೋಹನ್ ದಾಸ್ ಪ್ರತ್ಯೇಕ ಚರ್ಚೆ ನಡೆಸಿದ್ದು, ಯಾವುದೇ ಬಣದಲ್ಲಿ ಗುರುತಿಸಿಕೊಳ್ಳದೆ ತಟಸ್ಥ ನಿಲುವು ಹೊಂದಿರುವ ಶಾಸಕರು ಅಗರವಾಲ್ ಅವರನ್ನು ಭೇಟಿ ಮಾಡಿದರು. ಪಕ್ಷದ ಈಗಿನ ಸ್ಥಿತಿ ಉತ್ತಮವಾಗಿಲ್ಲ. ದಯವಿಟ್ಟು ಇದನ್ನು ಮೊದಲು ಸರಿಪಡಿಸಬೇಕಿದೆ ಎಂದು ಮನವಿ ಮಾಡಿದ್ದಾರೆ.

ಸದ್ಯ ಪಕ್ಷದ ರಾಜ್ಯಾಧ್ಯಕ್ಷರಾಗಿರುವ ಬಿ. ವೈ. ವಿಜಯೇಂದ್ರ ಪ್ರೊಬೆಷನರಿ ಪೀರಿಯಡ್‌ನಲ್ಲಿದ್ದಾರೆ. ಅವರಿಗೂ ಸ್ವಲ್ಪ ಅವಕಾಶ ಕೊಡಬೇಕೆಂಬುದು ಬಹುತೇಕ ಮುಖಂಡರ ಅಭಿಪ್ರಾಯ. ಪಕ್ಷಕ್ಕೆ ಶಕ್ತಿ ಇದ್ದರೆ ಈಗಿನ ಪರಿಸ್ಥಿತಿಯನ್ನು ಸರಿಪಡಿಸಿ ಎಂದು ರಾಧಾ ಮೋಹನ್ ದಾಸ್ ಅಗರವಾಲ್ ಅವರಿಗೆ ಬಿಜೆಪಿ ಶಾಸಕರು ಮನವಿ ಮಾಡಿದ್ದಾರೆ ಎಂದು ವರದಿಯಾಗಿದೆ.

ಯತ್ನಾಳ್ ವಿಚಾರ ಪ್ರಸ್ತಾಪಕ್ಕೆ ಸಿಟ್ಟು : ಬಿಜೆಪಿಯ ರೆಬಲ್ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವಿಚಾರವನ್ನು ವಿಜಯೇಂದ್ರ ಬಣದ ಕೆಲವು ಶಾಸಕರು ಪ್ರಸ್ತಾಪಿಸುತ್ತಿದ್ದಂತೆ ರಾಜ್ಯ ಉಸ್ತುವಾರಿ ಅಗರವಾಲ್ ಸಿಟ್ಟಾಗಿದ್ದಾರೆ ಎನ್ನಲಾಗಿದೆ. "ಯತ್ನಾಳ್ ಮಾಡುತ್ತಿರುವುದು ತಪ್ಪು ಎಂಬುದು ನಿಜ. ಅದನ್ನು ನೋಡಿಕೊಳ್ಳಲು ಪಕ್ಷ ಇದೆ. ನೀವು ಮಾಡುತ್ತಿರುವುದೇನು?. ಎಲ್ಲವೂ ಹೈಕಮಾಂಡ್ ಗಮನದಲ್ಲಿದೆ. ಎಲ್ಲವೂ



ಸರಿ ಹೋಗುತ್ತದೆ. ಗುಂಪುಗಾರಿಕೆಯನ್ನು ಮೊದಲು ಬಿಡಿ ಎಂದು ತಾಕೀತು ಮಾಡಿದ್ದಾಗಿ ತಿಳಿದುಬಂದಿದೆ.

ಎಲೆಕ್ಷನ್ನಾ, ಸಹಮತವಾ? ರಾಜ್ಯ ಬಿಜೆಪಿ ಅಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಡೆಯಬೇಕೇ?, ಬೇಡವೇ? ಎಂಬುದರ ಕುರಿತು ಕೂಡ ಸ್ಪಷ್ಟತೆ ಸಿಗುವ ನಿರೀಕ್ಷೆಯಿದೆ. ವಿಜಯೇಂದ್ರ ಪರವಾಗಿರುವ ಬಣ ಸಹಮತದ ಮೂಲಕ ರಾಜ್ಯಾಧ್ಯಕ್ಷರನ್ನು ಆಯ್ಕೆ ಮಾಡಬೇಕೆಂದು ಒತ್ತಾಯಿಸುತ್ತಿದೆ. ಯತ್ನಾಳ್ ಬಣ ಚುನಾವಣೆ ಮಾಡಿ ರಾಜ್ಯಾಧ್ಯಕ್ಷರನ್ನು ಆಯ್ಕೆ ಮಾಡಬೇಕೆಂದು ಆಗ್ರಹಿಸಿದೆ.

ಚುನಾಯಿತ ಪ್ರತಿನಿಧಿಗಳ ಸಭೆಯ ನಂತರ ಮಾತಡಿದ ಪ್ರತಿಪಕ್ಷದ ನಾಯಕ ಅರ್. ಅಶೋಕ್ ಅವರು, ಪಕ್ಷ ಸಂಘಟನೆ, ಜಿಲ್ಲಾಧ್ಯಕ್ಷರು ಮತ್ತು ತಾಲ್ಲೂಕು ಮಟ್ಟದ ಪದಾಧಿಕಾರಿಗಳ ಚುನಾವಣೆಗೆ ಸಂಬಂಧಿಸಿದಂತೆ ಮಾತ್ರ ಚರ್ಚೆ ನಡೆಯಿತು. ರಾಜ್ಯಾಧ್ಯಕ್ಷರ ನೇಮಕಾತಿ ಅಥವಾ ಬದಲಾವಣೆಗೆ ಸಂಬಂಧಿಸಿದಂತೆ ಚರ್ಚೆ ನಡೆದಿಲ್ಲ ಎಂದು ಹೇಳಿದರು.

ರಾಜ್ಯಾಧ್ಯಕ್ಷರ ಚುನಾವಣೆಗಾಗಿ ದೆಹಲಿ ವರಿಷ್ಠರು ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರನ್ನು ಉಸ್ತುವಾರಿಯಾಗಿ ನೇಮಿಸಿದ್ದಾರೆ. ಅವರು ಬಂದ ಮೇಲೆ ಪ್ರಕ್ರಿಯೆ ಆರಂಭವಾಗುತ್ತದೆ ಎಂದರು.

ಪಕ್ಷಕ್ಕಾಗಿ ಧ್ವನಿ ಎತ್ತಿದ್ದೇವೆ : ರಾಜ್ಯ ಕಾರ್ಯಾಲಯದಲ್ಲಿ ನಡೆದ 'ಸಂಘಟನಾ ಪರ್ವ'ದ ಸಭೆಯ ಕುರಿತು ಮಾಧ್ಯಮಗಳಿಗೆ ಮಾಹಿತಿ ಹಂಚಿಕೊಂಡ ರಾಜ್ಯ ಬಿಜೆಪಿ ಪ್ರಧಾನ ಕಾರ್ಯದರ್ಶಿ ಪ್ರೀತಂ ಗೌಡ, ಇಂದಿನ ಸಭೆಯಲ್ಲಿ ಕಾರ್ಯಕರ್ತರ ಪರವಾಗಿ, ಕಾರ್ಯಕರ್ತರ ಧ್ವನಿಯಾಗಿ ಶಾಸಕರು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಅದು ಕೇಂದ್ರದ ನಾಯಕರಿಗೆ ತಲುಪಿದೆ ಎಂದರು.

ಕೆಲವರು ಬಹಿರಂಗವಾಗಿ ಮಾತನಾಡುತ್ತಿರುವುದರಿಂದ ಪಕ್ಷದ ವರ್ಚಸ್ಸಿಗೆ ಧಕ್ಕೆ ಆಗುತ್ತಿದೆ. ಕಾರ್ಯಕರ್ತರ ಮನಸ್ಸಿಗೂ ನೋವು ಉಂಟಾಗುತ್ತಿದೆ. ಇದಕ್ಕೆ ತಾರ್ಕಿಕ ಅಂತ್ಯ ಹಾಡಬೇಕಿದೆ. 50 ಶಾಸಕರು ಬಂದಿದ್ದು, ಹಾದಿಬೀದಿಯಲ್ಲಿ ಪುಟ 2

## ಮೊದಲ ಪುಟದಿಂದ

### ಮುನಿದ ಜವರಾಯ

ಲಾರಿಯಲ್ಲಿ ತುಂಬಿಕೊಂಡು ಕುಮಟಾದಲ್ಲಿ ಇಂದು ನಡೆಯಲಿದ್ದ ಸಂತೆಗೆ ಹೋಗುತ್ತಿದ್ದು, ಗುಳ್ಳಾಪುರಘಟ್ಟ ಭಾಗದಲ್ಲಿ ಇಳಿಜಾರು ಪ್ರದೇಶವಾದ್ದರಿಂದ ಸುಮಾರು 50 ಮೀಟರ್ ಆಳದ ಕಣಿವೆಗೆ ನಿಯಂತ್ರಣ ತಪ್ಪಿ ಉರುಳಿಬಿದ್ದಿದೆ. ಪರಿಣಾಮ 8 ಮಂದಿ ಸ್ಥಳದಲ್ಲೇ ಸಾವನ್ನಪ್ಪಿದರೆ ಗಂಭೀರ ಗಾಯಗೊಂಡಿದ್ದ ಇನ್ನಿಬ್ಬರು ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದಾರೆ. ಗಾಯಗೊಂಡಿರುವ 15ಕ್ಕೂ ಹೆಚ್ಚು ಮಂದಿಯ ಪೈಕಿ ಮೂವರ ಸ್ಥಿತಿ ಚಿಂತಾಜನಕವಾಗಿದ್ದು, ಸಾವಿನ ಸಂಖ್ಯೆ ಹೆಚ್ಚುವ ಸಾಧ್ಯತೆಯಿದೆ ಎಂದು ಹೇಳಲಾಗುತ್ತಿದೆ.

ಸುದ್ದಿ ತಿಳಿಯುತ್ತಿದ್ದಂತೆ ಯಲ್ಲಾಪುರ ಠಾಣೆ ಪೊಲೀಸರು ಸ್ಥಳಕ್ಕೆ ಆಗಮಿಸಿ, ಪರಿಶೀಲಿಸಿ ಕ್ರೇನ್ ಸಹಾಯದಿಂದ ಲಾರಿಯನ್ನು ಮೇಲಕ್ಕೆತ್ತಿ ಮೃತದೇಹಗಳನ್ನು ಹೊರತೆಗೆದು ಸ್ಥಳೀಯರ ನೆರವಿನೊಂದಿಗೆ ಯಲ್ಲಾಪುರ ಸರ್ಕಾರಿ ಆಸ್ಪತ್ರೆಗೆ ರವಾನಿಸಿದ್ದಾರೆ.ಉತ್ತರ ಕನ್ನಡ ಪೊಲೀಸ್ ವರಿಷ್ಠಾಧಿಕಾರಿ ನಾರಾಯಣ್ ಅವರು ಸ್ಥಳಕ್ಕೆ ಆಗಮಿಸಿ, ಪರಿಶೀಲಿಸಿ ಮಾಹಿತಿ ಪಡೆದುಕೊಂಡಿದ್ದಾರೆ.

**ಮೂವರು ವಿದ್ಯಾರ್ಥಿಗಳು ಸೇರಿ ನಾಲ್ವರ ಸಾವು:**

ಮತ್ತೊಂದು ಪ್ರಕರಣದಲ್ಲಿ ಕ್ರೂಸರ್ ವಾಹನ ಪಲ್ಟಿಯಾಗಿ ಮೂವರು ವಿದ್ಯಾರ್ಥಿಗಳು ಸೇರಿದಂತೆ ನಾಲ್ವರು ಸಾವನ್ನಪ್ಪಿರುವ ಘಟನೆ ಸಿಂಧನೂರಿನ ಅರಗಿನಮರ ಬಳಿ ಸಂಭವಿಸಿದೆ.ಮೃತ ವಿದ್ಯಾರ್ಥಿಗಳನ್ನು ಆರ್ಯವಂದನ್ (18), ಸುಚೇಂದ್ರ (22) ಮತ್ತು ಅಭಿಲಾಷ್ (20) ಎಂದು ಗುರುತಿಸಲಾಗಿದೆ. ಅಪಘಾತದಲ್ಲಿ ಚಾಲಕ ಶಿವ (24) ಕೂಡ ಸಾವನ್ನಪ್ಪಿದ್ದಾರೆ. ಗಾಯಗೊಂಡ 10 ಜನರನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.ಮಂತ್ರಾಲಯ ಸಂಸ್ಕೃತ ಪಾಠಶಾಲೆಯ ವಿದ್ಯಾರ್ಥಿಗಳನ್ನು ನರಹರಿ ದೇವಸ್ಥಾನದಲ್ಲಿ ಪ್ರಾರ್ಥನೆ ಸಲ್ಲಿಸಲು ಹಂಪೆಗೆ ಕರೆದೊಯ್ಯಲಾಗುತ್ತಿದ್ದ ಸಂದರ್ಭದಲ್ಲಿ ಸಿಂಧನೂರಿನ ಅರಗಿನಮರ ಶಿಬಿರದ ಬಳಿ ಮುಂಜಾನೆ ವಾಹನ ಪಲ್ಟಿಯಾಗಿ ಈ ಅಪಘಾತ ಸಂಭವಿಸಿದೆ.

ಸುದ್ದಿ ತಿಳಿಯುತ್ತಿದ್ದಂತೆ ಸಿಂಧನೂರು ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲಿಸಿ ನಾಲ್ವರ ಮೃತದೇಹಗಳನ್ನು ಆಸ್ಪತ್ರೆಗೆ ರವಾನಿಸಿದ್ದಾರೆ. ಗಾಯಗೊಂಡ 10 ಮಂದಿಯನ್ನು ಆಸ್ಪತ್ರೆಯಲ್ಲಿ ಚಿಕಿತ್ಸೆಗೆ ದಾಖಲಿಸಲಾಗಿದೆ. ದಟ್ಟ ಮಂಜಿನ ನಡುವೆ ವೇಗವಾಗಿ ಚಲಿಸುತ್ತಿದ್ದ ವಾಹನದ ಆಕ್ಸಿಲ್ ಕಟ್‌ಆಗಿ ನಿಯಂತ್ರಣ ತಪ್ಪಿ ಅಪಘಾತ ಸಂಭವಿಸಿದೆ ಎಂದು ಶಂಕಿಸಲಾಗಿದೆ.

ಸಿಂಧನೂರು ಸಂಚಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರೆದಿದೆ. ಅಪಘಾತದ ಸುದ್ದಿ ತಿಳಿದು ಮಂತ್ರಾಲಯ ಶ್ರೀಗಳು ಸ್ಥಳಕ್ಕೆ ಆಗಮಿಸಿ ಮಾಹಿತಿ ಪಡೆದುಕೊಂಡಿದ್ದಾರೆ. ವಿದ್ಯಾರ್ಥಿಗಳ ಪೋಷಕರಿಗೆ ಅಪಘಾತದ ಸುದ್ದಿ ತಿಳಿಯುತ್ತಿದ್ದಂತೆ ಅವರ ಆಕ್ರಂದನ ಮುಗಿಲು ಮುಟ್ಟಿತ್ತು.

### ತಲಾ 3 ಲಕ್ಷ ಪರಿಹಾರ: ಸಿಎಂ

ಮೃತರ ಕುಟುಂಬಗಳಿಗೆ ಸರ್ಕಾರದಿಂದ ಸೂಕ್ತ ಪರಿಹಾರ ನೀಡಲಾಗುವುದು.ಉತ್ತರ ಕನ್ನಡ ಜಿಲ್ಲೆಯ ಯಲ್ಲಾಪುರ ಹಾಗೂ ರಾಯಚೂರು ಜಿಲ್ಲೆಯ ಸಿಂಧನೂರಿನಲ್ಲಿ ಸಂಭವಿಸಿದ ಎರಡು ಪ್ರತ್ಯೇಕ ಅಪಘಾತಗಳಲ್ಲಿ ಮೃತಪಟ್ಟವರ ಕುಟುಂಬಗಳಿಗೆ ರಾಜ್ಯ ಸರ್ಕಾರದ ವತಿಯಿಂದ ತಲಾ ರೂ.3 ಲಕ್ಷ ಪರಿಹಾರ ನೀಡಲಾಗುವುದು. ಜೊತೆಗೆ ಅಪಘಾತದಲ್ಲಿ ಗಾಯಗೊಂಡವರ ಉಚಿತ ಚಿಕಿತ್ಸೆಗೆ ವ್ಯವಸ್ಥೆ ಮಾಡಲಾಗುವುದು. ಅವಸರ, ಅತಿ ವೇಗದ ಚಾಲನೆ ಹಾಗೂ ಅಜಾಗರೂಕತೆ ಅಪಘಾತಕ್ಕೆ ಕಾರಣ. ಎಚ್ಚರಿಕೆಯಿಂದ ವಾಹನ ಚಲಾಯಿಸಿ, ಸುರಕ್ಷಿತರಾಗಿರಿ ಎಂದು ಮನವಿ ಮಾಡುತ್ತೇನೆ ಎಂದು ಸಿಎಂ ಸಿದ್ದರಾಮಯ್ಯ ಟ್ವಿಟ್ಟರ್ ನಲ್ಲಿ ತಿಳಿಸಿದ್ದಾರೆ.

### ಮತ್ತೋರ್ವ ಬಲಿ

ಪುಟ್ಟಯ್ಯರನ್ನು ಬಲಿ ತೆಗೆದುಕೊಂಡಿರುವುದು ಇಂದು ಬೆಳಗ್ಗೆ ಗೊತ್ತಾಗಿದೆ.

ಸ್ಥಳಕ್ಕೆ ಶಾಸಕ ಸಿಮೆಂಟ್ ಮಂಜು ಭೇಟಿ ನೀಡಿ ಮೃತ ಕುಟುಂಬಕ್ಕೆ ಸಾಂತ್ವಾನ ಹೇಳಿದ್ದಾರೆ. ಈ ಸಂಬಂಧ ಆಲೂರು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ.

### ಖೋಟಾ ನೋಟು ಪ್ರಿಂಟ್: ಬಂಧನ

ಖಚಿತ ಮಾಹಿತಿಯ ಮೇರೆಗೆ ಟಿ. ನರಸೀಪುರ ಪೊಲೀಸ್ ಠಾಣೆಯ ಸರ್ಕಲ್ ಇನ್‌ಸ್ಪೆಕ್ಟರ್ ನೇತೃತ್ವದ ತಂಡ ದಾಳಿ ನಡೆಸಿದಾಗ ಆರೋಪಿಗಳು ತಾವು ಮಲಗಲು ಹಾಸಿಕೊಂಡಿದ್ದ ಹಾಸಿಗೆ ಪಕ್ಕದಲ್ಲಿ ರಟ್ಟಿನ ಬಾಕ್ಸ್‌ನಲ್ಲಿ ಎಪ್ಸನ್ ಕಲರ್ ಪ್ರಿಂಟರ್ ಕಂಡುಬಂದಿದೆ. ಪೊಲೀಸರು ಇನ್ನಷ್ಟು ಪರಿಶೀಲನೆ ನಡೆಸಿದಾಗ ಈ ಕೃತ್ಯಕ್ಕೆ ಬಳಸುತ್ತಿದ್ದ ಎಲ್ಲ ವಸ್ತುಗಳನ್ನು ಪತ್ತೆ ಹಚ್ಚಲಾಗಿದೆ ಎಂದು ತಿಳಿಸಿದ್ದಾರೆ.

ಖೋಟಾ ನೋಟು ಪ್ರಿಂಟಿಂಗ್‌ಗೆ ಪಕ್ಕಾ ಪ್ಲಾನ್ ಮಾಡಿದ್ದ ಖದೀಮರು : ಪೊಲೀಸರು, ನೋಟು ಪ್ರಿಂಟ್ ಮಾಡಲು ಬಳಸುತ್ತಿದ್ದ ಒಂದು ಕಪ್ಪು ಬಣ್ಣದ ಎಪ್ಸನ್ ಪ್ರಿಂಟರ್, ಕಪ್ಪು ಬಣ್ಣದ ಪೇಪರ್ ಮೇಜರ್‌ಮೆಂಟ್ ಕಟಿಂಗ್ ಸ್ಕೇಲ್, ಒಂದು ಎ4 ಅಳತೆಯ ಗಾಂಧೀಜಿ ಭಾವಚಿತ್ರದ, ವಾಟರ್ ಮಾ▯▯9 ಮತ್ತು ನೋಟಿನ ಗೆರೆಯುಳ್ಳ ಬಿಳಿ ಬಣ್ಣದ ಹಾಳೆ, 4 ಕಲರ್ ಇಂಕ್ ಬಾಟಲ್‌ಗಳು, ಎ4 ಸೈಜ್ ಅಳತೆಯ ಬಿಳಿ ಹಾಳೆಗಳು ಸೇರಿದಂತೆ ಎಲ್ಲಾ ರೀತಿಯ ವಸ್ತುಗಳನ್ನು ಬಳಸಿಕೊಂಡು ನೋಟು ಪ್ರಿಂಟಿಂಗ್‌ಗೆ ಆರೋಪಿಗಳು ಪಕ್ಕ ಪ್ಲಾನ್ ಮಾಡಿದ್ದರು. 25,500 ರೂ. ಮೌಲ್ಯದ 51 ಖೋಟಾ ನೋಟುಗಳನ್ನು ಕೂಡ ಪ್ರಿಂಟ್ ಮಾಡಿದ್ದರು.

ಖೋಟಾ ನೋಟು, 2 ಮೊಬೈಲ್ ಮತ್ತು ಅಡಾಪ್ಟರ್, ಕಪ್ಪು ಬಣ್ಣದ 16 ಜಿಬಿ ಪೆನ್‌ಡ್ರೈವ್, ಎಟಿಎಂ ಕಾರ್ಡ್ ಸೇರಿದಂತೆ ಪ್ರಿಂಟಿಂಗ್‌ಗೆ ಬಳಸುತ್ತಿದ್ದ ಎಲ್ಲ ವಸ್ತುಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದು, ತನಿಖೆಯನ್ನು ನಡೆಸಲಾಗುತ್ತಿದೆ. ಈ ಸಂಬಂಧ ಟಿ. ನರಸೀಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಈ ಸಂಬಂಧ ಮೈಸೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಷ್ಣುವರ್ಧನ್ ಅವರನ್ನು ಸಂಪರ್ಕಿಸಿದಾಗ, "ಈ ಸಂಬಂಧ ಟಿ. ನರಸೀಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಇಬ್ಬರನ್ನು ಬಂಧಿಸಿ ವಿಚಾರಣೆ ನಡೆಸಿ, ನಕಲಿ ನೋಟು ತಯಾರಿಕೆಯಲ್ಲಿ ಬಳಸಲಾಗುತ್ತಿದ್ದ ಸಾಮಗ್ರಿಗಳನ್ನು ವಶಪಡಿಸಿಕೊಳ್ಳಲಾಗಿದೆ" ಎಂದು ಮಾಹಿತಿ ನೀಡಿದರು.

### ಯಾವ ಅರ್ಥದಲ್ಲಿ ಹೇಳಿದ್ದಾರೋ ಗೊತ್ತಿಲ್ಲ

ಮೀಸಲಿಡುವುದಾಗಿ ತಿಳಿಸಿದರು. ರಾಜ್ಯದಲ್ಲಿ ಮೈಕ್ರೋ ಫೈನಾನ್ಸ್‌ಗಳಿಂದ ಸಾರ್ವಜನಿಕರಿಗೆ ಕಿರುಕುಳ ಹೆಚ್ಚಾಗುತ್ತಿರುವ ಬಗ್ಗೆ ಪ್ರತಿಕ್ರಿಯಿಸಿದ ಸಚಿವ ಡಾ. ಜಿ. ಪರಮೇಶ್ವರ್ ಅವರು, ಯಾರು ಸಂತ್ರಸ್ತರು ಪುಟ 2

ಇದ್ದಾರೋ ಅವರು ಮೈಕ್ರೋ ಫೈನಾನ್ಸ್‌ಗಳ ವಿರುದ್ಧ ದೂರು ಕೊಟ್ಟರೆ ಸರ್ಕಾರ ಕ್ರಮ ಕೈಗೊಳ್ಳಲಿದೆ ಎಂದರು.

ಈಗಾಗಲೇ ಮೈಕ್ರೋ ಫೈನಾನ್ಸ್‌ಗಳ ಕಿರುಕುಳ ತಡೆಯಲು ಸಾಕಷ್ಟು ಕ್ರಮ ಕೈಗೊಂಡಿದ್ದೇವೆ. ಮೈಕ್ರೋ ಫೈನಾನ್ಸ್‌ನವರು ಗೈಡ್‌ಲೈನ್ಸ್ ಉಲ್ಲಂಘನೆ ಮಾಡಿ ತಪ್ಪು ಮಾಡುತ್ತಿದ್ದಾರೆ. ಪರವಾನಗಿ ಇಲ್ಲದವರ ಬಗ್ಗೆಯೂ ಹಣಕಾಸು ಇಲಾಖೆ ಸರ್ವೆ ಮಾಡಬೇಕಾಗಿದೆ. ಇಂತಹ ಸಂಸ್ಥೆಗಳ ವಿರುದ್ಧ ಸಂತ್ರಸ್ತರು ದೂರು ಕೊಟ್ಟರೆ ಕ್ರಮ ಖಚಿತ ಎಂದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಶುಭಕಲ್ಯಾಣ್, ಜಿ.ಪಂ. ಸಿಇಓ ಪ್ರಭು ಜಿ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ. ಅಶೋಕ್ ಮತ್ತಿತರರು ಉಪಸ್ಥಿತರಿದ್ದರು.

### ತಪ್ಪಿಸಲು ಸಾಧ್ಯವಿಲ್ಲ

ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗುವುದನ್ನು ಯಾರೂ ತಪ್ಪಿಸಲು ಸಾಧ್ಯವಿಲ್ಲ ಎಂದರು. ಸಿದ್ದರಾಮಯ್ಯನವರು ಕಾಂಗ್ರೆಸ್ ಪಕ್ಷವನ್ನು ಕಟ್ಟಿದವರಲ್ಲ. ಅವರಿಗೆ ಏನು ಆಗಬೇಕೊ ಅದು ಆಗಿ ಆಗಿದೆ. ಕಾಂಗ್ರೆಸ್ ಪಕ್ಷದ ಘನತೆ ಹಾಗೂ ಖ್ಯಾತಿಯನ್ನು ಕಟ್ಟಿಕೊಂಡು ಅವರಿಗೇನು ಆಗಬೇಕು. ಈ ಕಾರಣಕ್ಕಾಗಿಯೇ ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಎಂದು ಸುದ್ದಿ ಹಬ್ಬಿಸುತ್ತಿದ್ದಾರೆ. ಇದರ ಹಿಂದೆ ಸಿದ್ದರಾಮಯ್ಯನವರಿರುವುದು ಖಚಿತ. ಮಂತ್ರಿಗಳ ನೆಪಮಾತ್ರ ಎಂದು ಹೇಳಿದರು. ಮುಂದುವರೆದು ಅವರು ಸಿದ್ದರಾಮಯ್ಯನವರು ಮುಡಾ ಪ್ರಕರಣದಲ್ಲಿ ಮರ್ಯಾದೆ ಕಳೆದುಕೊಂಡಿದ್ದಾರೆ. ಮೈಸೂರು ಜನರಿಗೆ ಮನೆ ಕಟ್ಟಿಕೊಳ್ಳಲು ಒಂದು ಸೈಟ್ ಕೊಡುವುದಿಲ್ಲ. ಬದಲಾಗಿ ಮುಖ್ಯಮಂತ್ರಿ ಹಾಗೂ ಸಚಿವರು ತಮಷ್ಟಕ್ಕೆ ತಾವೇ ನಿವೇಶನಗಳನ್ನು ಬರೆಸಿಕೊಳ್ಳುತ್ತಿದ್ದಾರೆ ಎಂದರು.

# ರಾಮಲಲ್ಲಾ 'ಪ್ರಾಣ ಪ್ರತಿಷ್ಠೆ'ಗೆ ಒಂದು ವರ್ಷ

**ಅಯೋಧ್ಯೆ:** ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಮಹಾ ಕುಂಭಮೇಳದಲ್ಲಿ ದೇಶವೇ ಭಕ್ತಿಯ ಅಲೆಯಲ್ಲಿ ಮುಳುಗೇಳುತ್ತಿರುವುದರ ಮಧ್ಯೆ, ಅಯೋಧ್ಯೆಯಲ್ಲಿ ರಾಮಮಂದಿರ ನಿರ್ಮಾಣವಾಗಿ ಇಂದಿಗೆ ಒಂದು ವರ್ಷ ತುಂಬಿದೆ.

ಅಯೋಧ್ಯೆಯಲ್ಲಿ ರಾಮಲಲ್ಲಾ 'ಪ್ರಾಣ ಪ್ರತಿಷ್ಠೆ' ಸಮಾರಂಭ ಕಳೆದ ವರ್ಷ ಜನವರಿ 22, 2024 ರಲ್ಲಿ ನಡೆಸಲಾಯಿತು. ಇಡೀ ಅಯೋಧ್ಯೆ ನಗರದಲ್ಲಿ ಕಳೆದ ವರ್ಷ ಈ ದಿನ ಭಕ್ತಸಾಗರ ಸೇರಿತ್ತು.

ಅದಾಗಿ ಕಳೆದೊಂದು ವರ್ಷದಲ್ಲಿ ಅಯೋಧ್ಯೆಯಲ್ಲಿ ಪ್ರವಾಸಿಗರ ಸಂಖ್ಯೆ ಏರಿಕೆಯಾಗಿದೆ. ಶ್ರೀ ರಾಮ ಜನ್ಮಭೂಮಿ ತೀರ್ಥ ಕ್ಷೇತ್ರವು ಇತ್ತೀಚೆಗೆ 'ಪ್ರತಿಷ್ಠ ದ್ವಾದಶಿ ಮಹೋತ್ಸವ'ವನ್ನು ಆಚರಿಸಿತ್ತು,

ಇದು ರಾಮಲಲ್ಲಾನ 'ಪ್ರಾಣ ಪ್ರತಿಷ್ಠೆ'ಯ ಒಂದು ವರ್ಷ ಆಚರಣೆಯಾಗಿದೆ. ಪ್ರಧಾನಿ ನರೇಂದ್ರ ಮೋದಿ ಅವರು ಭವ್ಯವಾದ ರಾಮ ಮಂದಿರ ಉದ್ಘಾಟನಾ ಕಾರ್ಯಕ್ರಮದಲ್ಲಿ ಸಮಾರಂಭದ ಮುಖ್ಯ ವಿಧಿವಿಧಾನಗಳನ್ನು ನೆರವೇರಿಸಿದ್ದರು, ಇದರಲ್ಲಿ ವಿವಿಧ ಕ್ಷೇತ್ರಗಳ ಅನೇಕ ಜನಪ್ರಿಯ ಭಾಗವಹಿಸಿದ್ದರು.

ಅಯೋಧ್ಯೆಯಲ್ಲಿ ಬಾಲರಾಮನ ವಿಗ್ರಹದ ಐತಿಹಾಸಿಕ 'ಪ್ರಾಣ ಪ್ರತಿಷ್ಠೆ' ಸಮಾರಂಭದ ಒಂದು ವರ್ಷದ ನಂತರದ ಆಚರಣೆಗಳು ಹಿಂದೂ ಪಂಚಾಂಗವನ್ನು ಅನುಸರಿಸಿ ಜನವರಿ 11ಕ್ಕೆ ನಡೆಯಿತು. ಕಳೆದ ವರ್ಷ, ಈ ಪವಿತ್ರ ಕಾರ್ಯಕ್ರಮವನ್ನು ಹಿಂದೂ ಕ್ಯಾಲೆಂಡರ್‌ನ ಪೌಷ ಮಾಸದ ಶುಕ್ಲ ಪಕ್ಷದ ಸಮಯದಲ್ಲಿ ಕೂರ್ಮ ದ್ವಾದಶಿಯಂದು ಆಚರಿಸಲಾಯಿತು.

ಈ ವರ್ಷ, ಶುಕ್ಲ ಪಕ್ಷವು ಜನವರಿ 11 ರಂದು ಬಂದಿತು. ಈ ಸಂದರ್ಭದ ಸ್ಮರಣಾರ್ಥವಾಗಿ, ದೇವಾಲಯದ ಆವರಣದಲ್ಲಿ ವಿವಿಧ ಆಧ್ಯಾತ್ಮಿಕ ಕಾರ್ಯಕ್ರಮಗಳು ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು. ಪ್ರತಿಷ್ಠಾ ದ್ವಾದಶಿಯ ಸಂದರ್ಭದಲ್ಲಿ, ಪ್ರಭುವಿನ ಮಹಾ ಅಭಿಷೇಕವನ್ನು ನೆರವೇರಿಸಲಾಯಿತು,

ನಂತರ ಮಂಗಳ ದರ್ಶನ ಮಾಡಲಾಯಿತು ಎಂದು ಶ್ರೀ ರಾಮ ಜನ್ಮಭೂಮಿ ತೀರ್ಥ ಕ್ಷೇತ್ರವು ಶ್ರೀರಾಮನ ಮಹಾ ಅಭಿಷೇಕದ ಫೋಟೋಗಳನ್ನು ಹಂಚಿಕೊಂಡ ಎಕ್ಸ್ ಪೋಸ್ಟ್‌ನಲ್ಲಿ ತಿಳಿಸಿದೆ.



# ದೆಹಲಿ ಕಣದಲ್ಲಿ ೬೯೯ ಅಭ್ಯರ್ಥಿಗಳು

ನವದೆಹಲಿ: ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ಫೆ.5ರಂದು ನಡೆಯಲಿರುವ ಬಹುನಿರೀಕ್ಷಿತ ವಿಧಾನಸಭಾ ಚುನಾವಣೆಗೆ ಸಜ್ಜಾಗುತ್ತಿದ್ದು, 70 ಸ್ಥಾನಗಳಿಗಾಗಿ 699 ಅಭ್ಯರ್ಥಿಗಳು ಕಣದಲ್ಲಿದ್ದಾರೆ.

ಮುಖ್ಯ ಚುನಾವಣಾಧಿಕಾರಿಗಳು ನೀಡಿರುವ ಮಾಹಿತಿಗಳ ಪ್ರಕಾರ, ಹೊಸದಿಲ್ಲಿ ವಿಧಾನಸಭಾ ಕ್ಷೇತ್ರದಲ್ಲಿ 23 ಅಭ್ಯರ್ಥಿಗಳು ಕಣದಲ್ಲಿದ್ದು, ಕೇಜ್ರಿವಾಲ್ ಬಿಜೆಪಿಯ ಪರ್ವೇಶ ವರ್ಮಾ ಮತ್ತು ಕಾಂಗ್ರೆಸ್‌ನ ಸಂದೀಪ ದೀಕ್ಷಿತ್ ಅವರಿಂದ ತೀವ್ರ ಪೈಪೋಟಿಯನ್ನು ಎದುರಿಸುತ್ತಿದ್ದಾರೆ.

ನಂತರದ ಸ್ಥಾನದಲ್ಲಿರುವ ಜನಕಪುರಿಯಲ್ಲಿ 16 ಅಭ್ಯರ್ಥಿಗಳು ಸ್ಪರ್ಧಿಸಿದ್ದು,ರೋಹ್ತಾಸ್ ನಗರ, ಕಾರವಲ್ ನಗರ ಮತ್ತು ಲಕ್ಷ್ಮೀ ನಗರಗಳಲ್ಲಿ ತಲಾ 15 ಅಭ್ಯರ್ಥಿಗಳು ಕಣದಲ್ಲಿ ಉಳಿದಿದ್ದಾರೆ.

ಅತ್ತ ಪಟೇಲ್ ನಗರ ಮತ್ತು ಕಸ್ತೂರಬಾ ನಗರ ಕ್ಷೇತ್ರಗಳಲ್ಲಿ ಅತ್ಯಂತ ಕಡಿಮೆ ಸಂಖ್ಯೆಯ ಅಭ್ಯರ್ಥಿಗಳಿದ್ದಾರೆ. ಇವೆರಡೂ ಕ್ಷೇತ್ರಗಳಲ್ಲಿ ತಲಾ ಐವರು ಅಭ್ಯರ್ಥಿಗಳು ಕಣದಲ್ಲಿದ್ದಾರೆ.

ಆಪ್ ಮತ್ತು ಕಾಂಗ್ರೆಸ್ ಎಲ್ಲ 70 ಕ್ಷೇತ್ರಗಳಲ್ಲಿ ತಮ್ಮ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದ್ದರೆ, 68 ಸ್ಥಾನಗಳಿಗೆ ಸ್ಪರ್ಧಿಸಿರುವ ಬಿಜೆಪಿ ಎರಡು ಸ್ಥಾನಗಳನ್ನು ಮಿತ್ರಪಕ್ಷಗಳಾದ ಜೆಡಿಯು ಮತ್ತು ಲೋಕತಾಂತ್ರಿಕ ಜನಶಕ್ತಿ ಪಾರ್ಟಿಗೆ ಬಿಟ್ಟುಕೊಟ್ಟಿದೆ. ಬಿಎಸ್‌ಪಿ 69 ಕ್ಷೇತ್ರಗಳಲ್ಲಿ ತನ್ನ ಅಭ್ಯರ್ಥಿಗಳನ್ನು ಪ್ರಕಟಿಸಿದೆ.

# ಪೌರತ್ವ ಕುರಿತ ಟ್ರಂಪ್ ನೀತಿಗೆ ಭಾರತೀಯ–ಅಮೆರಿಕನ್ ಸಂಸದರ ವಿರೋಧ

**ವಾಷಿಂಗ್ಟನ್:** ಜನಸಿದ್ಧ ಪೌರತ್ವದಲ್ಲಿ ಬದಲಾವಣೆಗಳ ಕುರಿತು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಆದೇಶವನ್ನು ಭಾರತೀಯ–ಅಮೆರಿಕನ್ ಸಂಸದರು ವಿರೋಧಿಸಿದ್ದಾರೆ, ಇದು ವಿಶ್ವದಾದ್ಯಂತದ ಅಕ್ರಮ ವಲಸಿಗರಿಗೆ ಮಾತ್ರವಲ್ಲದೆ ಭಾರತದ ವಿದ್ಯಾರ್ಥಿಗಳು ಮತ್ತು ವತ್ತಿಪರರಿಗೂ ಹೊಡೆತ ನೀಡುವ ಸಾಧ್ಯತೆಯಿದೆ ಎಂದು ಅವರು ಎಚ್ಚರಿಸಿದ್ದಾರೆ.

ಅಧ್ಯಕ್ಷರಾಗಿ ಪ್ರಮಾಣ ವಚನ ಸ್ವಿ▯ಕರಿಸಿದ ಕೆಲವೇ ಗಂಟೆಗಳಲ್ಲಿ ಟ್ರಂಪ್ ಅವರು ದಾಖಲೆರಹಿತ ವಲಸಿಗರಿಗೆ ಹುಟ್ಟುವ ಭವಿಷ್ಯದ ಮಕ್ಕಳನ್ನು ಇನ್ನು ಮುಂದೆ ನಾಗರಿಕರಾಗಿ ಪರಿಗಣಿಸಲಾಗುವುದಿಲ್ಲ ಎಂದು ಘೋಷಿಸುವ ಆದೇಶಕ್ಕೆ ಸಹಿ ಹಾಕಿದ್ದರು. ಈ ಆದೇಶವು ದೇಶದ ಕೆಲವು ತಾಯಂದಿರ ಮಕ್ಕಳಿಗೆ ಕಾನೂನುಬದ್ಧವಾಗಿ ಆದರೆ ತಾತ್ಕಾಲಿಕವಾಗಿ, ಉದಾಹರಣೆಗೆ ವಿದೇಶಿ ವಿದ್ಯಾರ್ಥಿಗಳು ಅಥವಾ ಪ್ರವಾಸಿಗರಿಗೆ ಸಹ ವಿಸ್ತರಿಸುತ್ತದೆ.

ಟ್ರಂಪ್‌ರ ಕಾರ್ಯನಿರ್ವಾಹಕ ಆದೇಶವು ಅಂತಹ ನಾಗರಿಕರಲ್ಲದವರ ಮಕ್ಕಳು ಯುನೈಟೆಡ್ ಸ್ಟೇಟ್‌ನ ಅಧಿಕಾರಕ್ಕೆ ಒಳಪಟ್ಟಿಲ್ಲ ಎಂದು ಪ್ರತಿಪಾದಿಸುತ್ತದೆ ಮತ್ತು ಆದ್ದರಿಂದ 14 ನೇ ತಿದ್ದುಪಡಿಯ ದೀರ್ಘಾವಧಿಯ ಸಾಂವಿಧಾನಿಕ ಖಾತರಿಯಿಂದ ಒಳಗೊಳ್ಳುವುದಿಲ್ಲ.

ಕಾರ್ಯನಿರ್ವಾಹಕ ಆದೇಶದ ಮೂಲಕ ಮಾಡಲಾದ ಜನ ಹಕ್ಕಿನ ಪೌರತ್ವದಲ್ಲಿ ಬದಲಾವಣೆಗಳು ಅಕ್ರಮ ಮತ್ತು ದಾಖಲೆರಹಿತ ವಲಸಿಗರ ನವಜಾತ ಶಿಶುಗಳ ಮೇಲೆ ಪರಿಣಾಮ ಬೀರುತ್ತವೆ ಆದರೆ ಹೆಚ್‌ಒನ್‌ಬಿ ವೀಸಾದಲ್ಲಿ ಕಾನೂನುಬದ್ಧವಾಗಿ ಈ ದೇಶದಲ್ಲಿ ಉಳಿಯುವವರ ಮೇಲೂ ಪರಿಣಾಮ ಬೀರುತ್ತವೆ ಎಂದು ಭಾರತೀಯ–ಅಮೆರಿಕನ್ ಕಾಂಗ್ರೆಸ್ಸಿಗ ರೋ ಖನ್ನಾ ಹೇಳಿದ್ದಾರೆ.

ಹೆಚ್‌ಒನ್‌ಬಿ ವೀಸಾವು ವಲಸೆ ರಹಿತ ವೀಸಾ ಆಗಿದ್ದು, ಇದು ಅಮೆರಿಕ ಕಂಪನಿಗಳಿಗೆ ಸೈದ್ಧಾಂತಿಕ ಅಥವಾ ತಾಂತ್ರಿಕ ಪರಿಣತಿಯ ಅಗತ್ಯವಿರುವ ವಿಶೇಷ ಉದ್ಯೋಗಗಳಲ್ಲಿ ವಿದೇಶಿ ಉದ್ಯೋಗಿಗಳನ್ನು ನೇಮಿಸಿಕೊಳ್ಳಲು ಅನುವು ಮಾಡಿಕೊಡುತ್ತದೆ. ಭಾರತ ಮತ್ತು ಚೀನಾದಂತಹ ದೇಶಗಳಿಂದ ಪ್ರತಿ ವರ್ಷ ಹತ್ತು ಸಾವಿರ ಉದ್ಯೋಗಿಗಳನ್ನು ನೇಮಿಸಿಕೊಳ್ಳಲು ತಂತ್ರಜ್ಞಾನ ಕಂಪನಿಗಳು ಇದನ್ನು ಅವಲಂಬಿಸಿವೆ.

ಟ್ರಂಪ್‌ನ ಆದೇಶವು ಅಮೆರಿಕದಲ್ಲಿ ಜನಿಸಿದ ಮಕ್ಕಳಿಗೆ ಜನಸಿದ್ಧ ಪೌರತ್ವವನ್ನು ತೆಗೆದುಹಾಕುತ್ತದೆ ಕೇವಲ ದಾಖಲೆಗಳಿಲ್ಲದ ಪೋಷಕರಿಗೆ ಆದರೆ ತಾತ್ಕಾಲಿಕವಾಗಿ ವಿದ್ಯಾರ್ಥಿ ವೀಸಾ, ಹೆಚ್‌ಒನ್‌ಬಿ /ಹೆಚ್‌ಟೂ ಬಿ ವೀಸಾ ಅಥವಾ ವ್ಯಾಪಾರ ವೀಸಾದಲ್ಲಿರುವ ಕಾನೂನುಬದ್ಧ ವಲಸಿಗರಿಗೆ ಮಾರಕವಾಗಲಿದೆ ಎಂದು ಖನ್ನಾ ಹೇಳಿದರು.

## ಟಿಕ್ ಟಾಕ್‌ಗೆ 75 ದಿನ ಕಾಲಾವಕಾಶ

**ವಾಷಿಂಗ್ಟನ್:** ಅಮೆರಿಕಾದ ನೂತನ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ಮೊದಲ ದಿನವೇ ಹಲವು ಆದೇಶಗಳಿಗೆ ಸಹಿ ಹಾಕಿದ ಡೊನಾಲ್ಡ್ ಟ್ರಂಪ್ ಅವರು ರಾಷ್ಟ್ರೀಯ ಭದ್ರತೆ ನೆಪದಲ್ಲಿ ನಿಷೇಧಕ್ಕೆ ಒಳಗಾಗಿರುವ ಸಾಮಾಜಿಕ ವೇದಿಕೆ ಟಿಕ್ ಟಾಕ್‌ಗೆ 75 ದಿನಗಳ ಕಾಲ ಹೆಚ್ಚುವರಿ ಕಾಲಾವಕಾಶ ಜಾರಿ ಮಾಡಿದ್ದಾರೆ.

ಟಿಕ್‌ಟಾಕ್ ಅನ್ನು ಪರಿಣಾಮಕಾರಿ ಯಾಗಿ ನಿಷೇಧಿಸುವ ಕಾನೂನನ್ನು ಜಾರಿಗೊಳಿಸುವುದನ್ನು 75 ದಿನಗಳ ಕಾಲ ಸ್ಥಗಿತಗೊಳಿಸಲು ಆದೇಶಿಸಿದ್ದು ಈ ಅವಧಿಯ ವೇಳೆಗೆ ಚೀನಾದ ಟಿಕ್ ಟಾಕ್ ಸಂಸ್ಥೆ, ಅಮೆರಿಕಾದ ಪಾಲುದಾರಿಕೆ ಪಡೆಯುತ್ತದೆಯೋ ಇಲ್ಲವೇ ಎನ್ನುವುದು ತಿಳಿಯಲಿದೆ.

ಟಿಕ್ ಟಾಕ್ ಕಾರ್ಯನಿರ್ವಾಹಕ ಆದೇಶ ಜನವರಿ 19 ರಿಂದ ಜಾರಿಗೆ ಬಂದ ವಿದೇಶಿ ವಿರೋಧಿ ನಿಯಂತ್ರಿತ ಅಪ್ಲಿಕೇಶನ್ ಗಳಿಂದ ಅಮೆರಿಕನ್ನರನ್ನು ರಕ್ಷಿಸುವ ಕಾಯ್ದೆಯ ಅನುಷ್ಠಾನ ವಿಳಂಬಗೊಳಿಸಿದೆ. ಮತ್ತು ಇದು ಅಮೆರಿಕಾದಲ್ಲಿ ಟಿಕ್‌ಟಾಕ್ ವಿತರಣೆ ಮತ್ತು ನವೀಕರಣ ನಿಷೇಧಿಸುತ್ತದೆ.

ಅಮೆರಿಕಾ ಕಾಂಗ್ರೆಸ್ ಅಗಾಧವಾಗಿ ಅಂಗೀಕರಿಸಿದ ಮತ್ತು ಕಳೆದ ವರ್ಷ ಅಧ್ಯಕ್ಷ ಜೋ ಬೈಡೆನ್ ಸಹಿ ಮಾಡಿದ ಕಾನೂನಿನಿಂದ ಟಿಕ್‌ಟಾಕ್ ಅನ್ನು ರಕ್ಷಿಸಲು ಡೊನಾಲ್ಡ್ ಟ್ರಂಪ್ ವೇಗವಾಗಿ ಚಲಿಸುವುದಾಗಿ ಭರವಸೆ ನೀಡಿದ್ದರು.ಅದರಂತೆ ಮೊದಲ ದಿನವೇ ಆದೇಶಕ್ಕೆ ಸಹಿ ಹಾಕಿದ್ದಾರೆ

ಆದೇಶಕ್ಕೆ ಸಹಿ ಹಾಕಿದ ಬಳಿಕ ಪ್ರತಿಕ್ರಿಯೆ ನೀಡಿದ ಡೊನಾಲ್ಡ್ ಟ್ರಂಪ್, ಟಿಕ್‌ಟಾಕ್‌ಗೆ ನೀಡಿದ ಹೆಚ್ಚುವರಿ ಸಮಯಾವಾಕಾಶದಿಂದ ಟಿಕ್‌ಟಾಕ್‌ಗೆ ಅನುಕೂಲವಾಗಲಿದೆ ಎನ್ನುವ ವಿಶ್ವಾಸವಿದೆ ಎಂದಿದ್ದಾರೆ

ಚೀನಾ ಸರ್ಕಾರ ಅಮೆರಿಕನ್ನರ ಮೇಲೆ ಕಣ್ಣಿಡಲು ಅಥವಾ ಡೇಟಾ ಸಂಗ್ರಹಣೆ ಮತ್ತು ವಿಷಯ ಕುಶಲತೆಯ ಮೂಲಕ ಅಮೆರಿಕದ ಸಾರ್ವಜನಿಕ ಅಭಿಪ್ರಾಯದ ಮೇಲೆ ರಹಸ್ಯವಾಗಿ ಪ್ರಭಾವ ಬೀರಲು ಅಪ್ಲಿಕೇಶನ್ ಅನ್ನು ಬಳಸಿಕೊಳ್ಳಬಹುದು ಎಂಬ ಕಳವಳದಿಂದಾಗಿ ಟಿಕ್‌ಟಾಕ್ ನಿಷೇಧ ಕಾನೂನನ್ನು ಅಂಗೀಕರಿಸಲಾಗಿತ್ತು

# ಹಾದಿಬೀದಿಯಲ್ಲಿ ಮಾತನಾಡುವವರಿಗೆ ರಾಷ್ಟ್ರೀಯ ನಾಯಕರು ತಾಕೀತು ಮಾಡಲು ಮನವಿ

**ಬೆಂಗಳೂರು:** ಇಂದಿನ ಸಭೆಯಲ್ಲಿ ಕಾರ್ಯಕರ್ತರ ಪರವಾಗಿ, ಕಾರ್ಯಕರ್ತರ ಧ್ವನಿಯಾಗಿ ಶಾಸಕರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಆ ಅಭಿಪ್ರಾಯ ಕೇಂದ್ರದ ನಾಯಕರು ಮತ್ತು ಎಲ್ಲಿಗೆ ತಲುಪಬೇಕೋ ಅಲ್ಲಿಗೆ ತಲುಪಿದೆ ಎಂದು ರಾಜ್ಯ ಬಿಜೆಪಿ ಪ್ರಧಾನ ಕಾರ್ಯದರ್ಶಿ ಪ್ರೀತಂ ಗೌಡ ಅವರು ತಿಳಿಸಿದರು.

ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ನಡೆದ 'ಸಂಘಟನಾ ಪರ್ವ'ದ ಸಭೆಯ ಕುರಿತು ಅವರು ಮಾಧ್ಯಮಗಳಿಗೆ ಮಾಹಿತಿ ನೀಡಿದರು. ರಾಜ್ಯ ಉಸ್ತುವಾರಿ ಮತ್ತು ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ರಾಧಾಮೋಹನ್ ದಾಸ್ ಅಗರವಾಲ್ ಅವರ ಸಮ್ಮುಖದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರ ನೇತೃತ್ವದಲ್ಲಿ 'ಸಂಘಟನಾ ಪರ್ವ'ದ ವಿಚಾರವಾಗಿ ಸಭೆ ನಡೆದಿದೆ. ಬಹುತೇಕ ಎಲ್ಲ ಶಾಸಕರು, ವಿಧಾನಪರಿಷತ್ ಸದಸ್ಯರನ್ನು ಒಳಗೊಂಡಂತೆ ಪ್ರಸ್ತುತ ರಾಜಕೀಯ ಪರಿಸ್ಥಿತಿ ಬಗ್ಗೆ ಎಲ್ಲರ ಅಭಿಪ್ರಾಯ ಮತ್ತು ವಸ್ತುಸ್ಥಿತಿಯನ್ನು ಪಡೆಯಲಾಗಿದೆ ಎಂದು ವಿವರಿಸಿದರು.

ಈಚಿನ ದಿನಗಳಲ್ಲಿ ಕೆಲವರು ಮಾತನಾಡುತ್ತಿರುವುದರಿಂದ ಪಕ್ಷದ ಇಮೇಜ್‌ಗೆ ಧಕ್ಕೆ ಆಗುತ್ತಿದೆ; ಕಾರ್ಯಕರ್ತರ ಮನಸ್ಸಿಗೂ ನೋವು ಉಂಟಾಗುತ್ತಿದೆ. ಹಾಗಾಗಿ ಇದಕ್ಕೆ ತಾರ್ಕಿಕ ಅಂತ್ಯ ಆಗಬೇಕು ಎಂಬ ಆಶಯ ವ್ಯಕ್ತವಾಗಿದೆ. ಸುಮಾರು 50 ಶಾಸಕರು ಬಂದಿದ್ದು, ಹಾದಿಬೀದಿಯಲ್ಲಿ ಮಾತನಾಡುವವರಿಗೆ ರಾಷ್ಟ್ರೀಯ ನಾಯಕರು ತಾಕೀತು ಮಾಡಬೇಕೆಂದು ಮನವಿ ಮಾಡಿದ್ದಾರೆ ಎಂದು ತಿಳಿಸಿದರು.

ಪರಿಸ್ಥಿತಿ ತಿಳಿಯಾಗಿ ಅವರು ಕೂಡ, ಪಕ್ಷದ ಸಂಘಟನೆಯ ಜೊತೆ ನಿಂತು ಪಕ್ಷವನ್ನು ಬಲವರ್ಧನೆ ಮಾಡುವುದಲ್ಲದೆ, ರಾಜ್ಯಾಧ್ಯಕ್ಷರಿಗೆ ಶಕ್ತಿ ಕೊಡುವ ನಿಟ್ಟಿನಲ್ಲಿ ಎಲ್ಲರೂ ಕೂಡ ಒಟ್ಟಾಗಿ ಕೆಲಸ ಮಾಡಬೇಕೆಂಬುದು ಎಲ್ಲ ಜನಪ್ರತಿನಿಧಿಗಳ ಆಶಯವಾಗಿತ್ತು. ಸಂಘಟನಾ ಪರ್ವದಲ್ಲಿ ನಡೆಯುತ್ತಿರುವ ಸದಸ್ಯತ್ವ ಅಭಿಯಾನ, ಮಂಡಲ ಅಧ್ಯಕ್ಷರು, ಜಿಲ್ಲಾ ಅಧ್ಯಕ್ಷರ ನಿಯುಕ್ತಿಗೆ ಆಗುತ್ತಿರುವ ಎಲ್ಲ ಕ್ರಮಗಳು ಅಚ್ಚುಕಟ್ಟಾಗಿ ಆಗುತ್ತಿದೆ ಎಂದು ಹೇಳಿದರು. 2028ರಲ್ಲಿ ಪಕ್ಷವನ್ನು ಅಧಿಕಾರಕ್ಕೆ ತರಲು ಸಂಘಟಿತವಾಗಿ ಕೆಲಸ ಆಗಬೇಕೆಂಬ ಅಭಿಪ್ರಾಯವನ್ನು ರಾಧಾಮೋಹನ್ ದಾಸ್ ಅಗರವಾಲ್ ಅವರಿಗೆ ತಿಳಿಸಲಾಗಿದೆ. ಈ ಮೂಲಕ ಪಕ್ಷದಲ್ಲಿ ಗೊಂದಲ ಮಾಡುವ ಪ್ರಯತ್ನಕ್ಕೆ ತೆರೆ ಎಳೆಯುವ ವಿಶ್ವಾಸವನ್ನು ಎಲ್ಲ ಶಾಸಕರು ವ್ಯಕ್ತಪಡಿಸಿದ್ದಾರೆ.

ಶಾಸಕರು ಆಗ್ರಹಪೂರ್ವಕವಾಗಿ ಮಾತನಾಡಿದ್ದಾರೆ ಎಂದು ತಿಳಿಸಿದರು. ಬಿಜೆಪಿ ಇದರಲ್ಲಿ ಯಶಸ್ಸನ್ನು ಕಂಡು ಮುಂದಿನ ದಿನಗಳಲ್ಲಿ ಉತ್ತಮ ರೀತಿಯಲ್ಲಿ ಪಕ್ಷದ ಸಂಘಟನೆ ಆಗಲಿದೆ ಎಂದು ತಿಳಿಸಿದರು. ಶಾಸಕರ ಅಭಿಪ್ರಾಯವನ್ನು ರಾಜ್ಯದ ನಾಯಕರು ಮತ್ತು ಪಕ್ಷದ ಹಿರಿಯರು ಗಮನಿಸುವರೆಂದು ಅವರು ಪ್ರಶ್ನೆಗೆ ಉತ್ತರ ನೀಡಿದರು.

ಜನರು ಸರ್ಟಿಫಿಕೇಟ್ ಕೊಡಬೇಕು. ವೈಯಕ್ತಿಕವಾಗಿ ಯಾರಾದರೂ ಅವರ ಭಾವನೆ ವ್ಯಕ್ತಪಡಿಸಲು ಸ್ವತಂತ್ರರು ಎಂದು ಇನ್ನೊಂದು ಪ್ರಶ್ನೆಗೆ ಉತ್ತರಿಸಿದರು. ನಮ್ಮ ಪಕ್ಷವು ಸಂಘಟನೆ, ಅಭಿಪ್ರಾಯ ವ್ಯಕ್ತಪಡಿಸಲು ಮುಕ್ತ ಅವಕಾಶ ಕೊಡುತ್ತದೆ. ಅದು ಯಾವಾಗ ಅತಿರೇಕಕ್ಕೆ ಹೋಗುತ್ತದೋ ಆಗ ಅಂತ್ಯವನ್ನು ಹಾಡುತ್ತದೆ ಎಂದು ಮತ್ತೊಂದು ಪ್ರಶ್ನೆಗೆ ಉತ್ತರ ಕೊಟ್ಟರು.

## ಜನರಿಗೆ ಆರೋಗ್ಯದ ಗ್ಯಾರಂಟಿ ಕೊಡಿ

**ಬೆಂಗಳೂರು:** ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರೇ ಈಜುಕೊಳ ಬಿಟ್ಟು ಹೊರಬಂದು ರಾಜ್ಯದ ಜನರಿಗೆ ಆರೋಗ್ಯದ ಗ್ಯಾರಂಟಿ ಕೊಡಿ ಎಂದು ಜೆಡಿಎಸ್ ಆಗ್ರಹಿಸಿದೆ. ಈ ಸಂಬಂಧ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಜೆಡಿಎಸ್, ಕಳಪೆ ಗುಣಮಟ್ಟದ ಔಷಧಿಗಳಿಂದ ಸರ್ಕಾರಿ ಆಸ್ಪತ್ರೆಗಳಲ್ಲಿ ಬಾಣಂತಿಯರು ಮತ್ತು ನವಜಾತ ಶಿಶುಗಳ ಸರಣಿ ಸಾವು ಆಗುತ್ತಿದ್ದರೂ, ಭ್ರಷ್ಟ ಕಾಂಗ್ರೆಸ್ ಸರ್ಕಾರ ಬುದ್ಧಿ ಕಲಿತಿಲ್ಲ ಎಂದು ಆರೋಪಿಸಿದೆ. ನಕಲಿ ಔಷಧಿಗಳಿಗೆ ಕಡಿವಾಣ ಹಾಕಬೇಕಾದ ಕಾಂಗ್ರೆಸ್ ಸರ್ಕಾರ ಮತ್ತು ಅಧಿಕಾರಿಗಳು ಕಮಿಷನ್ ಹಣಕ್ಕಾಗಿ ಕಂಪನಿಗಳ ಜತೆ ಶಾಮೀಲಾಗಿರುವುದು ಮೇಲ್ನೋಟಕ್ಕೆ ಸ್ಪಷ್ಟವಾಗಿದೆ ಎಂದು ಆರೋಪಿಸಿರುವ ಜೆಡಿಎಸ್, ಶೇ.60ರಷ್ಟು ಮುಖ್ಯಮಂತ್ರಿ ಸಿದ್ದರಾಮಯ್ಯ ಸರ್ಕಾರಕ್ಕೆ ಬಡವರ ಪ್ರಾಣದ ಬಗ್ಗೆ ಚಿಂತೆಯಿಲ್ಲ ಎಂದು ಟೀಕಿಸಿದೆ.

## ಚೆಕ್ ಪೋಸ್ಟ್‌ನಲ್ಲಿ ತಪಾಸಣೆ

**ಮೈಸೂರು:** ಮೈಸೂರಿನಲ್ಲಿ ಕಳೆದ ಎರಡು ದಿನಗಳ ಹಿಂದೆ ನಡೆದಿದ್ದ ಕಾರು ಹಣ ದರೋಡೆ ಪ್ರಕರಣಕ್ಕೆ ಸಂಬಂಧಿಸಿದಂತೆ ಇನ್ನು ಆರೋಪಿಗಳು ಪತ್ತೆಯಾಗದ ಹಿನ್ನೆಲೆಯಲ್ಲಿ ಕರ್ನಾಟಕ ▯ ಕೇರಳ ಎರಡೂ ರಾಜ್ಯಗಳ ಪೊಲೀಸರ ಅಲರ್ಟ್ ಆಗಿದ್ದು ಬಾವಲಿ ಚೆಕ್ ಪೋಸ್ಟ್ ನಲ್ಲಿ ತೀವ್ರ ತಪಾಸಣೆ ನಡೆಸುತ್ತಿದ್ದಾರೆ.

ಮೈಸೂರು– ಕೇರಳ ಗಡಿ ಬಾವಲಿ ಚೆಕ್ ಪೋಸ್ಟ್ ನಲ್ಲಿ ಪೊಲೀಸರು ಹದ್ದಿನ ಕಣ್ಣಿಟ್ಟಿದ್ದು ಸಿಸಿಟಿವಿ ದೃಶ್ಯಗಳನ್ನ ಪರಿಶೀಲನೆ ನಡೆಸುತ್ತಿದ್ದಾರೆ. ಎರಡು ಮೂರು ದಿನಗಳ ವಿಡಿಯೋಗಳ ಪರಿಶೀಲನೆ ಕಾರ್ಯ ನಡೆಯುತ್ತಿದ್ದು, ನಿನ್ನೆ– ಮೊನ್ನೆ ಆ ಭಾಗದಲ್ಲಿ ವಾಹನಗಳು ಓಡಾಡಿರುವ ಕುರಿತು ಪೊಲೀಸರು ಮಾಹಿತಿ ಕಲೆ ಹಾಕಿದ್ದಾರೆ. ಯಾವುದೇ ಅನುಮಾನಸ್ಪದ ವಾಹನ ಕಂಡರೂ ತೀವ್ರ ತಪಾಸಣೆ ನಡೆಸುತ್ತಿದ್ದು ಎಲ್ಲಾ ವಾಹನಗಳ ಕುರಿತು ಇಂಚಿಂಚು ಮಾಹಿತಿ ಸಂಗ್ರಹಕ್ಕೆ ಎರಡೂ ರಾಜ್ಯದ ಪೊಲೀಸರು ಮುಂದಾಗಿದ್ದಾರೆ

ಪ್ರಕರಣದ ಬಗ್ಗೆ ಕಾರಿನಲ್ಲಿ ಕೋಟಿ ಕೋಟಿ ಹಣ ಇದ್ದ ಬಗ್ಗೆ ಅನುಮಾನ ವ್ಯಕ್ತವಾಗಿದೆ. ಸದ್ಯ 1.5 ಲಕ್ಷ ಹಣ ದರೋಡೆ ಬಗ್ಗೆ ಉದ್ಯಮಿಗಳು ದೂರು ನೀಡಿದ್ದು ಆದರೆ ಈ ಬಗ್ಗೆ ಪೊಲೀಸರಿಗೆ ಅನುಮಾನ ಕಾಡುತ್ತಿದೆ. 1.5 ಲಕ್ಷ ಹಣ ದೋಚಲು ಕಾರನ್ನು ತೆಗೆದುಕೊಂಡು ಹೋಗಿದ್ದು ಏಕೆ ? ಕಾರಿನಲ್ಲಿದ್ದ ಕೋಟ್ಯಾಂತರ ಹಣ ದರೋಡೆಕೋರರ ಟಾರ್ಗೆಟ್ ? ಈ ಬಗ್ಗೆ ಮೊದಲೆ ಮಾಹಿತಿ ಪಡೆದು ದರೋಡೆಗೆ ಮುಂದಾದರೇ? ಕಾರಿನಲ್ಲಿದ್ದ ಕೋಟಿ ಕೋಟಿ ಹಣಕ್ಕಾಗಿ ಕಾರಿನ ಸಮೇತ ಪರಾರಿಯಾಗಿದ್ದರಾ ಆರೋಪಿಗಳು ? ಎಂಬ ಪ್ರಶ್ನೆ ಉದ್ಭವಿಸಿದೆ.

ಹಾಗೆಯೇ ಇದೇ ಕಾರಣಕ್ಕೆ ಘಟನೆ ನಂತರ ಆರೋಪಿಗಳು ಕಾರು ಬಿಟ್ಟು ಪರಾರಿಯಾಗಿದ್ದು, ಉದ್ಯಮಿಗಳು ಸರಿಯಾದ ಮಾಹಿತಿ ನೀಡುತ್ತಿಲ್ಲವಾ ಎಂಬ ಬಗ್ಗೆ ಸಾಕಷ್ಟು ಅನುಮಾನವನ್ನುಂಟು ಮಾಡಿದೆ.

# ಇಂದಿನಿಂದ ಧಾರವಾಡ ಅಧಿಕೃತ ಮಹಾನಗರ ಪಾಲಿಕೆ

**ಧಾರವಾಡ:** ಹುಬ್ಬಳ್ಳಿ– ಧಾರವಾಡವನ್ನು ವಿಭಜಿಸಿ, ಪ್ರತ್ಯೇಕವಾಗಿ ಧಾರವಾಡ ಮಹಾನಗರ ಪಾಲಿಕೆ ರಚನೆಗೆ ಇತ್ತೀಚೆಗೆ ಸಚಿವ ಸಂಪುಟ ಸಭೆ ನಿರ್ಧಾರ ಮಾಡಿತ್ತು. ಇದೀಗ ಇಂದಿನಿಂದ ಅಧಿಕೃತವಾಗಿ ಧಾರವಾಡ ಮಹಾನಗರ ಪಾಲಿಕೆ ಎಂದು ಕರ್ನಾಟಕ ಸರ್ಕಾರದಿಂದ ಅಧಿಕೃತ ಗೆಜೆಟ್ ನೋಟಿಫಿಕೇಶನ್ ಹೊರಡಿಸಲಾಗಿದೆ. ಆ ಮೂಲಕ ಧಾರವಾಡಕ್ಕೆ ಪ್ರತ್ಯೇಕ ಪಾಲಿಕೆ ಆಗಬೇಕು ಅನ್ನೋದು ದಶಕಗಳ ಬೇಡಿಕೆ ಕೊನೆಗೂ ಈಡೇರಿದೆ.

ಹುಬ್ಬಳ್ಳಿ–ಧಾರವಾಡ ಮಹಾನಗರ ಬೇರ್ಪಡಿಸುವ ನಿರ್ಧಾರ ಯಾರೂ ತೆಗೆದುಕೊಂಡಿರಲೇ ಇಲ್ಲ. ಕೊನೆಗೂ ಸಚಿವ ಸಂಪುಟ ಸಭೆಯಲ್ಲಿ ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ ವಿಂಗಡಣೆಗೆ ಅಸ್ತು ಎನ್ನಲಾಗಿತ್ತು. ಆ ನಿಟ್ಟಿನಲ್ಲಿ ಧಾರವಾಡ ಪ್ರತ್ಯೇಕ ಪಾಲಿಕೆ ಹಾದಿ ಸುಗಮವಾಗಿತ್ತು.

ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ ಬೆಂಗಳೂರು ನಂತರದ ದೊಡ್ಡ ಪಾಲಿಕೆಯಾಗಿತ್ತು. ಆದರೆ ಅನುದಾನ ಹಂಚಿಕೆ, ಅಭಿವೃದ್ಧಿ, ಅಧಿಕಾರ ಹಂಚಿಕೆ ಎಲ್ಲದರಲ್ಲಿಯೂ ಧಾರವಾಡಕ್ಕೆ ತಾರತಮ್ಯ ಆಗುತ್ತಲೇ ಇತ್ತು. ಹೀಗಾಗಿ ಹುಬ್ಬಳ್ಳಿಯಿಂದ ಬೇರ್ಪಡಿಸಿ, ಧಾರವಾಡಕ್ಕೆ ಪ್ರತ್ಯೇಕ ಪಾಲಿಕೆ ಕೊಡಿ ಎನ್ನುವುದು ದಶಕಗಳ ಹೋರಾಟವಾಗಿತ್ತು.

ಇಂದಿನಿಂದ ಧಾರವಾಡ ಅಧಿಕೃತ ಮಹಾನಗರ ಪಾಲಿಕೆ ಎಂದು ಸರ್ಕಾರ ಈ ಅಧಿಸೂಚನೆಯನ್ನು ಸಾರ್ವಜನಿಕರ ಮಾಹಿತಿಗಾಗಿ ಹೊರಡಿಸಿದೆ. ಈ ಬಗ್ಗೆ ಯಾವುದೇ ಆಕ್ಷೇಪಣೆ, ಸಲಹೆಗಳನ್ನು ಸಲ್ಲಿಸಲು ಇಚ್ಛಿಸುವ ಸಾರ್ವಜನಿಕರು ಅದನ್ನು ಲಿಖಿತದಲ್ಲಿ ಕಾರಣ ಸಹಿತವಾಗಿ ಅಧಿಸೂಚನೆಯನ್ನು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆ ಹೊರಡಿಸಿದ ದಿನಾಂಕದಿಂದ ಮೂವತ್ತು ದಿನಗಳೊಳಗಾಗಿ ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, 9ನೇ ಮಹಡಿ, ವಿವಿ ಗೋಪುರ, ಬೆಂಗಳೂರಿಗೆ ಸಲ್ಲಿಸಬೇಕೆಂದು ಹಾಗೂ ಅಧಿಸೂಚನೆಯನ್ನು ಸದರಿ ಅವಧಿಯ ತರುವಾಯ ತೆಗೆದುಕೊಳ್ಳಲಾಗುವುದೆಂದು ತಿಳಿಸಲಾಗಿದೆ.

### ಮಾತುಕತೆ ನಡೆಸಿದ ರಾಧಾಮೋಹನ್

ಮಾತನಾಡುವವರಿಗೆ ರಾಷ್ಟ್ರೀಯ ನಾಯಕರು ತಾಕೀತು ಮಾಡಬೇಕೆಂದು ಅವರೆಲ್ಲರೂ ಮನವಿ ಮಾಡಿದ್ದಾರೆ ಎಂದು ತಿಳಿಸಿದರು. ಪಕ್ಷದ ಸಂಘಟನೆಯ ಜೊತೆ, ರಾಜ್ಯಾಧ್ಯಕ್ಷರಿಗೆ ಶಕ್ತಿ ಕೊಡುವ ನಿಟ್ಟಿನಲ್ಲಿ ಎಲ್ಲರೂ ಒಟ್ಟಾಗಿ ಕೆಲಸ ಮಾಡಬೇಕೆಂಬುದು ಜನಪ್ರತಿನಿಧಿಗಳ ಆಶಯವಾಗಿತ್ತು. ಸಂಘಟನಾ ಪರ್ವದಲ್ಲಿ ನಡೆಯುತ್ತಿರುವ ಸದಸ್ಯತ್ವ ಅಭಿಯಾನ, ಮಂಡಲ ಅಧ್ಯಕ್ಷರು, ಜಿಲ್ಲಾ ಅಧ್ಯಕ್ಷರ ನಿಯುಕ್ತಿಗೆ ಆಗುತ್ತಿರುವ ಎಲ್ಲ ಕ್ರಮಗಳು ಅಚ್ಚುಕಟ್ಟಾಗಿ ಆಗುತ್ತಿವೆ ಎಂದು ಹೇಳಿದರು.

### ಅಂಬರ್‌ಗ್ರೀಸ್ ವಶ; ಬಂಧನ

ಅನುಮಾನದ ಆಧಾರದ ಮೇಲೆ ಬಂಧಿಸಿದೆ ಎಂದು ಹಿರಿಯ ಪೊಲೀಸ್ ಇನ್ಸ್‌ಪೆಕ್ಟರ್ ಸಚಿನ್ ಗಾಯಕ್ವಾಡ್ ತಿಳಿಸಿದ್ದಾರೆ. ಪುಟ 2

ಆತನ ಬಳಿಯಿದ್ದ 5 ಕೋಟಿ ಮೌಲ್ಯದ 5.48 ಕೆಜಿ ಅಂಬರ್‌ಗ್ರೀಸ್ ಅನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ ಎಂದು ಅಧಿಕಾರಿ ತಿಳಿಸಿದ್ದಾರೆ. ಆರೋಪಿಯನ್ನು ಪುಣೆ ಮೂಲದ ನಿತೀನ್ ಮುತ್ತಣ್ಣ ಮೋರೆಲು ಎಂದು ಗುರುತಿಸಲಾಗಿದ್ದು, ವನ್ಯಜೀವಿ (ರಕ್ಷಣೆ) ಕಾಯಿದೆಯಡಿಯಲ್ಲಿ ಬಂಧಿಸಿ ಪ್ರಕರಣ ದಾಖಲಿಸಲಾಗಿದೆ ಎಂದು ಅವರು ಹೇಳಿದರು.

ಆರೋಪಿಗಳು ಅಕ್ರಮ ವಸ್ತುಗಳನ್ನು ಎಲ್ಲಿಂದ ಪಡೆದರು ಮತ್ತು ಯಾರಿಗೆ ಮಾರಾಟ ಮಾಡಲು ಯೋಜಿಸಿದ್ದರು ಎಂಬುದನ್ನು ಪತ್ತೆ ಹಚ್ಚಲು ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

### ವಿಸ್ತರಣೆ

ಮೇಲ್ಮನವಿಯ ವಿಷಯವಾಗಿದೆ (ಹಿಂದೂ ದಾವೆದಾರರು ಸಲ್ಲಿಸಿದ ಮೊಕದ್ದಮೆಗಳ ಕ್ರೋಢೀಕರಣದ ವಿರುದ್ಧ), ಇನ್ನೊಂದು ಕಾಯ್ದೆ (ಪೂಜಾ ಸ್ಥಳಗಳ (ವಿಶೇಷ ನಿಬಂಧನೆಗಳು) ಕಾಯ್ದೆ, 1991 ರ ಸವಾಲು) ಎಂದು ಸಿಜೆಐ ಹೇಳಿದರು.

ಈ ಮಧ್ಯೆ, ಶಾಹಿ ಈದ್ಗಾ ಮಸೀದಿ ಸಂಕೀರ್ಣದಲ್ಲಿ ನ್ಯಾಯಾಲಯದ ಮೇಲ್ವಿಚಾರಣೆಯಲ್ಲಿ ನಡೆದ ಸಮೀಕ್ಷೆಗೆ ತಡೆ ನೀಡಿದ ಅಲಹಾಬಾದ್ ಹೈಕೋರ್ಟ್‌ನ ಮಧ್ಯಂತರ ಆದೇಶವು ಮುಂದುವರಿಯಲಿದೆ ಎಂದು ಪೀಠ ಹೇಳಿದೆ. ಕಳೆದ ವರ್ಷ ಜನವರಿ 16 ರಂದು, ಸುಪ್ರೀಂ ಕೋರ್ಟ್, ಡಿಸೆಂಬರ್ 14, 2023 ರಂದು ಹೈಕೋರ್ಟ್‌ನ ಆದೇಶದ ಕಾರ್ಯಾಚರಣೆಗೆ ತಡೆ ನೀಡಿತ್ತು. ಶಾಹಿ ಈದ್ಗಾ ಮಸೀದಿ ಸಂಕೀರ್ಣದ ನ್ಯಾಯಾಲಯದ ಮೇಲ್ವಿಚಾರಣೆಯಲ್ಲಿ ಸಮೀಕ್ಷೆ ನಡೆಸಲು ಹೈಕೋರ್ಟ್ ಅನುಮತಿ ನೀಡಿತ್ತು. ಅದರ ಮೇಲ್ವಿಚಾರಣೆಗೆ ನ್ಯಾಯಾಲಯ ಆಯುಕ್ತರ ನೇಮಕಕ್ಕೆ ಒಪ್ಪಿಕೊಂಡಿತ್ತು.

ಹಿಂದೂ ಧರ್ಮದ ಕಡೆಯವರು ಸಂಕೀರ್ಣದಲ್ಲಿ ಒಂದು ಕಾಲದಲ್ಲಿ ದೇವಾಲಯವಿತ್ತು ಎಂದು ಸೂಚಿಸುವ ಫಲಕಗಳಿವೆ ಎಂದು ವಾದಿಸುತ್ತಿದ್ದಾರೆ. ಹಿಂದೂಗಳ ಪರವಾಗಿ ವಾದ ಮಂಡಿಸುತ್ತಿರುವ ವಕೀಲ ವಿಷ್ಣು ಶಂಕರ್ ಜೈನ್, ಡಿಸೆಂಬರ್ 14, 2023 ರಂದು ಹೈಕೋರ್ಟ್‌ನ ಆದೇಶದ ವಿರುದ್ಧ ಮಸೀದಿ ಸಮಿತಿ ಸಲ್ಲಿಸಿದ ಮೇಲ್ಮನವಿ ಮತ್ತು ಈ ವಿಷಯದಲ್ಲಿ ಸಂಬಂಧಿಸಿದ ಆದೇಶಗಳು ಅನಪೇಕ್ಷಿತವಾಗಿವೆ. ಹೈಕೋರ್ಟ್ ನಂತರ ತನ್ನ ಆದೇಶವನ್ನು ಪ್ರಕಟಿಸಿರುವುದರಿಂದ ಈ ಎಲ್ಲಾ ಅರ್ಜಿಗಳು ನಿಷ್ಪ್ರಯೋಜಕವಾಗಿವೆ" ಎಂದು ಹೇಳಿದರು.

ಮಥುರಾದಲ್ಲಿ ಕೃಷ್ಣ ಜನ್ಮಭೂಮಿ–ಶಾಹಿ ಈದ್ಗಾ ವಿವಾದಕ್ಕೆ ಸಂಬಂಧಿಸಿದ 18 ಪ್ರಕರಣಗಳ ನಿರ್ವಹಣೆಯನ್ನು ಪ್ರಶ್ನಿಸಿ ಮುಸ್ಲಿಂ ಪಕ್ಷಗಳು ಸಲ್ಲಿಸಿದ್ದ ಅರ್ಜಿಯನ್ನು ತಿರಸ್ಕರಿಸಿದ ಹೈಕೋರ್ಟ್‌ನ ನಂತರದ ಆದೇಶವನ್ನು ವಕೀಲ ಜೈನ್ ಉಲ್ಲೇಖಿಸಿದರು ಮತ್ತು ಮಸೀದಿಯ ಧಾರ್ಮಿಕ ಸ್ವರೂಪವನ್ನು ನಿರ್ಧರಿಸಬೇಕಾಗಿದೆ ಎಂದು ತೀರ್ಪು ನೀಡಿದರು.

ಕೃಷ್ಣ ಜನ್ಮಭೂಮಿ ದೇವಸ್ಥಾನ ಮತ್ತು ಪಕ್ಕದ ಮಸೀದಿಯ ವಿವಾದಕ್ಕೆ ಸಂಬಂಧಿಸಿದಂತೆ ಹಿಂದೂ ದಾವೆದಾರರು ಸಲ್ಲಿಸಿದ ಮೊಕದ್ದಮೆಗಳು 1991 ರ ಪೂಜಾ ಸ್ಥಳಗಳ (ವಿಶೇಷ ನಿಬಂಧನೆಗಳು) ಕಾಯ್ದೆಯನ್ನು ಉಲ್ಲಂಘಿಸುತ್ತವೆ ಮತ್ತು ಆದ್ದರಿಂದ ಅವುಗಳನ್ನು ನಿರ್ವಹಿಸಲು ಸಾಧ್ಯವಿಲ್ಲ ಎಂಬ ಮುಸ್ಲಿಂ ಕಡೆಯ ವಾದವನ್ನು ಹೈಕೋರ್ಟ್ ವಜಾಗೊಳಿಸಿತ್ತು.

ಮಥುರಾದಲ್ಲಿ, ಶಾಹಿ ಈದ್ಗಾ ಮಸೀದಿಯನ್ನು ಶ್ರೀ ಕೃಷ್ಣ ಜನ್ಮಭೂಮಿ ಟ್ರಸ್ಟ್‌ನ 13.37 ಎಕರೆ ಭೂಮಿಯ ಒಂದು ಭಾಗದಲ್ಲಿ ನಿರ್ಮಿಸಲಾಗಿದೆ ಎಂದು ಆರೋಪಿಸಿ, ಅದನ್ನು ಸ್ಥಳಾಂತರಿಸಲು ಸಿವಿಲ್ ನ್ಯಾಯಾಧೀಶರ ಹಿರಿಯ ವಿಭಾಗ (ಖಖಖ) ನ್ಯಾಯಾಲಯದಲ್ಲಿ ಮೊಕದ್ದಮೆ ಹೂಡಲಾಯಿತು.

ಬಾಬರಿ ಮಸೀದಿ–ರಾಮ ಜನ್ಮಭೂಮಿ ವಿವಾದದಲ್ಲಿ ಮಾಡಿದಂತೆ ಮೂಲ ವಿಚಾರಣೆಯನ್ನು ನಡೆಸುವಂತೆ ಹಿಂದೂ ಸಮಿತಿ ಕಡೆಯವರು ಹೈಕೋರ್ಟ್ ನ್ನು ಕೋರಿದ್ದರು. ನ್ಯಾಯಾಲಯದ ಮೇಲ್ವಿಚಾರಣೆಯಲ್ಲಿ ಸಮೀಕ್ಷೆ ನಡೆಸಬೇಕೆಂಬ ಮನವಿಯನ್ನು ಅನುಮತಿಸುವಾಗ, ಸಮೀಕ್ಷೆ ಸಮಯದಲ್ಲಿ ಯಾವುದೇ ಹಾನಿ ಮಾಡಬಾರದು ಎಂದು ಹೇಳಿತ್ತು, ಇದನ್ನು ಮೂವರು ಸದಸ್ಯರ ವಕೀಲರ ಆಯೋಗವು ಮೇಲ್ವಿಚಾರಣೆ ಮಾಡಬಹುದು ಎಂದು ಸೂಚಿಸಿತ್ತು.

ಮುಸ್ಸಂಜೆ




# ಮಾನ್ಸಾಂಟೋ ರೀತಿ ಮೈಕ್ರೋ ಫೈನಾನ್ಸ್ ಧ್ವಂಸ: ಪಚ್ಚೆ ನಂಜುಂಡಸ್ವಾಮಿ

**ಕುಕನೂರು:** ರಾಜ್ಯದಲ್ಲಿ ರೈತ ಸಮುದಾಯಕ್ಕೆ ಮೈಕ್ರೋ ಫೈನಾನ್ಸ್‌ಗಳ ಕಿರುಕುಳ ಎಲ್ಲೇ ಮೀರಿದೆ. ಇದಕ್ಕೆ ಸರ್ಕಾರ ಕಡಿವಾಣ ಹಾಕಬೇಕಿದೆ ಎಂದು ರೈತ ಮುಖಂಡ ಪಚ್ಚೆ ನಂಜುಂಡ ಸ್ವಾಮಿ ಹೇಳಿದರು.

ಕೊಪ್ಪಳ ಜಿಲ್ಲೆಯ ಕುಕನೂರು ಪಟ್ಟಣದಲ್ಲಿ ಭಾರತೀಯ ಕ್ರಾಂತಿಕಾರಿ ಕಿಸಾನ್ ಸೇನೆಯ ನೂತನ ಸಂಘಟನೆ ಉದ್ಘಾಟನೆ ಮತ್ತು ರೈತ ಸಮಾವೇಶದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಈ ಹಿಂದೆ ರೈತರಿಗೆ ವಂಚಿಸಿದ,ರೈತರನ್ನು ಸಾಲಗಾರರನ್ನಾಗಿ ಮಾಡಿದ. ಮಾನ್ಸಂಟೋ, ಬಿ ಟಿ ಹತ್ತಿಯಂತಹ ಬಹುರಾಷ್ಟ್ರೀಯ ಕಂಪನಿಗಳನ್ನು ಪ್ರೊ. ನಂಜುಂಡ ಸ್ವಾಮಿಯವರು ಭಾರತದಿಂದ ಓಡ್ದೋಡಿಸಿದ್ದರು. ಅದೇ ರೀತಿಯ ಹೋರಾಟ ಈಗ ಮೈಕ್ರೋ ಫೈನಾನ್ಸ್ ಗಳ ವಿರುದ್ಧ ಆಗಬೇಕಿದೆ. ಗಾಂಧಿ ಮಾರ್ಗದಲ್ಲಿ ಕರ್ನಾಟಕದಲ್ಲಿ ಮೈಕ್ರೋ ಫೈನಾನ್ಸ್ ಗಳನ್ನು ಧ್ವಂಸ ಮಾಡುವ ಅನಿವಾರ್ಯತೆ ಈಗ ಬಂದಿದೆ. ಸೂಕ್ತ ಬೆಲೆ ಸಿಗದೇ ರೈತ ಸಮುದಾಯ ಸಾಲ ಮಾಡಿಕೊಂಡು ಆತ್ಮಹತ್ಯೆ ದಾರಿ ತುಳಿಯುತ್ತಿದೆ. ಇತ್ತೀಚಿಗಂತೂ ಮೈಕ್ರೋ ಫೈನಾನ್ಸ್ ದಾಳಿ ಹೆಚ್ಚಾಗಿದೆ. ರೈತ ಮಹಿಳೆಯರಿಗೆ ಸಾಲ ಕೊಟ್ಟು ಕಿರುಕುಳ ಕೊಡುತ್ತಿವೆ. ಮೈಕ್ರೋ ಫೈನಾನ್ಸ್ ಕಿರುಕುಳಕ್ಕೆ ಬೇಸತ್ತು ರಾಜ್ಯದಲ್ಲಿ ಚಾಮರಾಜನಗರ, ನಂಜೆನಗೂಡು, ಮಂಡ್ಯ ಜಿಲ್ಲೆಯ ಅನೇಕ ಕಡೇ ಗ್ರಾಮ ಗ್ರಾಮಗಳೇ ಖಾಲಿ ಆಗಿವೆ. ಇವುಗಳ ಮಟ್ಟ ಹಾಕುವ ಅನಿವಾರ್ಯತೆ ರೈತರ ಮುಂದೆ ಬಂದಿದೆ ಎಂದು ಅವರು ಹೇಳಿದರು.

ಬೆಳೆ ದಲ್ಲಾಳಿ ಕೈ ಸೇರಿದ ಮೇಲೆ ಸರ್ಕಾರ ಬೆಂಬಲ ಬೆಲೆ ಕೊಟ್ಟರೆ ರೈತರಿಗೆ ಪ್ರಯೋಜನವಿಲ್ಲ, ನಿಗದಿತ ಸಮಯಕ್ಕೆ ಆಗಬೇಕು. ಬಸವಣ್ಣನವರ ಕಾಯಕ ಮತ್ತು ದಾಸೋಹದ ತತ್ವದ ಅಡಿಯಲ್ಲಿ ನಾವೆಲ್ಲ ಜೀವನ ಸಾಗಿಸುತ್ತಿದ್ದೇವೆ. ಕಾಯಕವೇ ಕೃಷಿ, ದಾಸೋಹ ಎಂದರೆ ವಿತರಣೆ ರೈತರು ಬೆಳೆಯುತ್ತಾರೆ ದಾಸೋಹದ ಮೂಲಕ




ನಾಡಿನ ಮಠ ಮಾನ್ಯಗಳ ಸ್ವಾಮೀಜಿಗಳು ಸದ್ವಿನಿಯೋಗ ಮಾಡುತ್ತಾರೆ. ಸ್ಥಳೀಯ ಚಿಟಿಟಿಚಿದಾನಿಶ್ವರ ಮಠದ ಮಹದೇವ್ ಸ್ವಾಮೀಜಿಗಳತವರು ರೈತ ಸಂಘಟನೆಗಳಿಗೆ ಪ್ರೋತ್ಸಾಹ, ಪೋಷಣೆ ಕೊಡಬೇಕು, 12 ನೇ ಶತಮಾನದ ಬಸವ ಚಳುವಳಿ 80 ರ ದಶಕದ ಪ್ರೊ ನಂಜುಂಡಸ್ವಾಮಿಯವರ ರೈತ ಚಳುವಳಿ ಕಾಯಕ, ದಾಸೋಹದಂತೆ ಇನ್ನು ಮುಂದೆಯೂ ನಡೆಯಬೇಕಿದೆ ಎಂದು ಪಚ್ಚೆ ನಂಜುಂಡ ಸ್ವಾಮಿ ಹೇಳಿದರು.

> ಖರ್ಚುಗಳು, ತೊಂದರೆಗಳು ಸಾಮಾನ್ಯ, ಆದರೆ ರೈತರು ಧೃತಿಗೆಡದೇ ಆತ್ಮ ವಿಶ್ವಾಸದಿಂದ ಎದುರಿಸಬೇಕೇ ವಿನಃ ಆತ್ಮಹತ್ಯೆಗೆ ಮುಂದಾಗಬಾರದು. ರೈತರು ಶ್ರಮದಿಂದ ದುಡಿದು ಆರ್ಥಿಕವಾಗಿ ಬಲಿಷ್ಠರಾಗಬೇಕು.
>
> **ಅರವಿಂದ್ ಗೌಡ ಪಾಟೀಲ್**
> **। ಮಾಜಿ ಜಿಲ್ಲಾ ಪಂಚಾಯತ್ ಸದಸ್ಯ**

ರಾಜ್ಯ ಕಬ್ಬು ಬೆಳೆಗಾರರ ಸಂಘದ ಅಧ್ಯಕ್ಷ ಭಾಗ್ಯರಾಜ್ ಮಾತನಾಡಿ, ಸರ್ಕಾರ ರೈತರ ಬೆಳೆಗಳಿಗೆ ಸೂಕ್ತ ಬೆಲೆ ನಿಗದಿ ಮಾಡಲಿ, ಮದ್ಯದ ಬೆಲೆ ಹೆಚ್ಚಿಸಲು ಉತ್ಸುಕತೆ ತೋರುವ ಸರಕಾರ ರೈತರ ಬೆಳೆಗಳ ಬೆಲೆ ಹೆಚ್ಚಿಸಲು ಹಿಂದೇಟು ಹಾಕುತ್ತಿದೆ. ರೈತರು ಬೆಳೆದ ಆಹಾರ ದಾನ್ಯ, ಹಣ್ಣು ಹಂಪಲು, ದವಸ ದಾನ್ಯಗಳಿಗೆ ವೈಜ್ಞಾನಿಕ ಬೆಲೆ, ಮಾರುಕಟ್ಟೆ ನಿರ್ಮಾಣ ಇನ್ನೂ ಕನಸಾಗಿ ಉಳಿದಿದೆ. ಸರ್ಕಾರ ಗಮನಿಸಬೇಕು ಎಂದರು.

ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿದ್ದ ಅನ್ನದಾನೀಶ್ವರ ಶಾಖಾ ಮಠದ ಮಹಾದೇವ ಸ್ವಾಮೀಜಿ ಮಾತನಾಡಿ, ಯಲಬುರ್ಗಾ ಕುಕನೂರು ಅವಳಿ ತಾಲೂಕಿನಲ್ಲಿ ಜಿಂಕೆ ಹಾವಳಿ, ಚಿರತೆ ಹಾವಳಿ ಹೆಚ್ಚಾಗಿದೆ. ಇದನ್ನು ಸಂಬಂದಿಸಿದ ಇಲಾಖೆ ನಿಯಂತ್ರಿಸಬೇಕು. ಇದರ ಜೊತೆಗೆ ವಿಂಡ್ ಪವರ್ ಫ್ಯಾನ್ ಹಾವಳಿಯೂ ಮಿತಿ ಮೀರಿದೆ ಎಂದರು.

> ಕುಕನೂರು ಯಲಬುರ್ಗಾ ಅವಳಿ ತಾಲೂಕಿನಲ್ಲಿ ರೈತರಿಗೆ ಮಾರಕವಾಗಿರುವ ವಿಂಡ್ ಪವರ್ ಕಂಪನಿಗಳು ರೈತರನ್ನು ಹಿಂಡಿ ಹಿಪ್ಪೆ ಮಾಡುತ್ತಿವೆ, ಇವುಗಳಿಂದ ರೈತರ ಕಲ್ಯಾಣ ಆಗುವುದಿಲ್ಲ. ರೈತರ ಜಮೀನು ಬರಡಾಗುತ್ತಿದೆ. ರಾಜಕಾರಣಿಗಳು ಕಮಿಷನ್ ಆಶೆಗೆ ಇಂತಹ ಕಂಪನಿಗಳಿಗೆ ಸಾಥ್ ನೀಡುತ್ತಿರುವುದು ದುರ್ದೈವ.
>
> **ಪೂಜ್ಯ ಮಹಾದೇವ ಸ್ವಾಮೀಜಿ**
> **। ಅನ್ನದಾನೀಶ್ವರಮಠ**

ಕಾರ್ಯಕ್ರಮದಲ್ಲಿ ಭಾರತೀಯ ಕ್ರಾಂತಿಕಾರಿ ಕಿಸಾನ್ ಸೇನೆಯ ಅಧ್ಯಕ್ಷ ಎಂ ಎನ್ ಕುಕನೂರು, ಸುರೇಶ್ ಭೂಮರೆಡ್ಡಿ, ಅಂದಪ್ಪ ಜವಳಿ, ಕಳಕಪ್ಪ ಕಂಬಳಿ, ಅರವಿಂದ್ ಗೌಡ ಪಾಟೀಲ್. ರಾಮಣ್ಣ ಬಜೇಂತ್ರಿ, ದೇವಪ್ಪ ಸೊಬನದ್, ಶರಣಪ್ಪ ದೊಡ್ಡಮನಿ, ಬಿ ಎಂ ಹಳ್ಳಿ, ಕಂಬಣ್ಣ ಬಜೇಂತ್ರಿ, ಅಮ್ಜದ್ ಪಟೇಲ್, ವಿವಿಧ ಜಿಲ್ಲೆ, ತಾಲೂಕಿನ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಕಪ್ಪು ಬಾವುಟ ಪ್ರದರ್ಶಿಸಿ ಪ್ರತಿಭಟನೆ

**ಮಾಲೂರು:** ದಲಿತರ ಮನವಿಗೆ ಸ್ಪಂದಿಸದ ತಾಲ್ಲೂಕು ಆಡಳಿತದ ವಿರುದ್ಧ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಕಪ್ಪು ಬಾವುಟ ಪ್ರದರ್ಶಿಸಿ ಅರೆ ಬೆತ್ತಲೆ ಪ್ರತಿಭಟನೆ ಮಾಡುವ ಮೂಲಕ ಪ್ರತಿರೋದಿಸುತ್ತಿದ್ದೇವೆ ಎಂದು ಕದಸಂಸ ತಾಲ್ಲೂಕು ಸಂಚಾಲಕ ಎಸ್.ಎಂ.ವೆಂಕಟೇಶ್ ಹೇಳಿದರು.

ಪಟ್ಟಣದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘದ ಪತ್ರಕರ್ತರ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು

ಕಳೆದ ಎರಡು ವರ್ಷಗಳಿಂದ ಕರ್ನಾಟಕ ದಲಿತ ಸಂಘರ್ಷ ಸಮಿತಿ ,ಪ್ರೊ.ಕೃಷ್ಣಪ್ಪ ಬಣದಿಂದ ತಾಲೂಕಿನ ಹಲವಾರು ಸಮಸ್ಯೆಗಳ ಬಗ್ಗೆ ಮನವಿ ನೀಡಿದ್ದು, ಸಮಸ್ಯೆಗಳನ್ನು ಬಗೆಹರಿಸುತ್ತೇವೆ ಎಂದು ಮನವಿ ಸ್ವೀಕರಿಸಿದ ಅಧಿಕಾರಿಗಳು ಯಾವುದೇ ಪ್ರತಿಕ್ರಿಯೆ ನೀಡದೆ ಉಳ್ಳವರ ಪರ ಆಡಳಿತ ನೀಡುತ್ತಿದ್ದಾರೆ, ಮಾಸ್ತಿ ಗ್ರಾಮದಲ್ಲಿ ಓರ್ವ ಪ್ರಭಾವಿ ರಾಜಕಾರಣಿ ಸರ್ಕಾರಿ ಗೋಮಾಳದಲ್ಲಿ ನಿವೇಶನಗಳನ್ನು ಮಾಡಿ ಮಾರಾಟ ಮಾಡುತ್ತಿದ್ದು, ಅದಕ್ಕೆ ಗ್ರಾಮ ಪಂಚಾಯಿತಿಯು ಈ ಸ್ವತ್ತು ಮಾಡುವ ಮೂಲಕ ಅಧಿಕಾರಿಗಳು ಪ್ರಭಾವಿ ವ್ಯಕ್ತಿಯ ಕೈಗೊಂಬೆಯಾಗಿದ್ದಾರೆ, ಆದರೆ ಬಂಡೆಯ ಮೇಲೆ ನಿರಾಶ್ರಿತರು ಮನೆ ನಿರ್ಮಾಣ ಮಾಡಿಕೊಂಡಿದ್ದರೆ ಖುದ್ದು ತಹಶೀಲ್ದಾರ್ ಅವರೇ ಸ್ಥಳಕ್ಕೆ ಆಗಮಿಸಿ ಮನೆಗಳನ್ನು ತೆರವು ಮಾಡಿದ್ದಾರೆ, ಇದೇ ಇವರು ನೀಡುತ್ತಿರುವ ದಕ್ಷ ಆಡಳಿತವೇ ಎಂದು ಕೇಳಿದರು.

ಅದೇ ಮಾಸ್ತಿ ಗ್ರಾಮದ ಗುಂಡು ತೋಪು




ಜಮೀನಿನಲ್ಲಿ ಅಕ್ರಮವಾಗಿ ಪೆಟ್ರೋಲ್ ಬಂಕ್ ನಿರ್ಮಾಣ ಮಾಡಿಕೊಂಡಿದ್ದು, ಈ ಎರಡು ಸಮಸ್ಯೆಗಳ ಬಗ್ಗೆ ಮಾಸ್ತಿಯಿಂದ ಮಾಲೂರಿನವರೆಗೂ ಕಾಲ್ನಡಿಗೆ ಜಾಥಾ ಮಾಡಿ ಕಾನೂನು ಕ್ರಮ ಕೈಗೊಳ್ಳುವಂತೆ ಮನವಿ ಮಾಡಲಾಗಿತ್ತು ಆದರೆ ತೆರವು ಮಾಡುವಲ್ಲಿ ತಾಲ್ಲೂಕು ಆಡಳಿತ ವಿಫಲರಾಗಿದ್ದಾರೆ, ರಾಜಕಾಲುವೆಗಳ ರಕ್ಷಣೆ ಬಗ್ಗೆ ಎಷ್ಟೇ ಮನವಿ ನೀಡಿದರೂ ಅತ್ತ ಮುಖ ಮಾಡದ ತಾಲ್ಲೂಕು ಆಡಳಿತ ತನ್ನ ಜಾಣ ಕುರುಡುತನದಿಂದ ಜಾರಿಕೊಳ್ಳುತ್ತಿದ್ದಾರೆ, ಪಟ್ಟಣದ ಅರಳೇರಿ ಮುಖ್ಯ ರಸ್ತೆಯಿಂದ ಇರುವ ರಾಜಕಾಲುವೆ ತೆರವಿಗೆ ಅಂದಿನ ಜಿಲ್ಲಾಧಿಕಾರಿ ಡಿ.ಕೆ.ರವಿ ಆದೇಶ ಮಾಡಿದ್ದರು, ಆ ಆದೇಶದ ವಿರುದ್ಧ ಅಲ್ಲಿನ ನಿವಾಸಿಗಳು ಉಚ್ಚ ನ್ಯಾಯಾಲಯದಲ್ಲಿ ತಡೆಯಾಜ್ಞೆ ತಂದಿದ್ದರು, ಸ್ಥಳ ಪರಿಶೀಲನೆ ಮಾಡಿ ಕಾನೂನು ಕ್ರಮ ಕೈಗೊಳ್ಳುವಂತೆ ತಹಶೀಲ್ದಾರ್ ಅವರಿಗೆ ನ್ಯಾಯಾಲಯ ಸೂಚನೆ ನೀಡಿದ್ದರು

ತಹಶೀಲ್ದಾರ್ ಅತ್ತ ಮುಖ ಮಾಡದೆ ತಮಗೆ ಸಂಬಂಧವೇ ಇಲ್ಲ ಎಂಬಂತೆ ವರ್ತಿಸುತ್ತಿದ್ದು ನಮ್ಮ ಯಾವುದೇ ಮನವಿಗಳಿಗೆ ಸ್ಪಂದಿಸಿಲ್ಲ, ನಾವೇನು ನಮ್ಮ ವೈಯಕ್ತಿಕ ಸಮಸ್ಯೆಗಳಿಗೆ ಯಾವುದೇ ಮನವಿ ನೀಡಿಲ್ಲ, ಸಾರ್ವಜನಿಕ ಸಮಸ್ಯೆಗಳು ಬಗೆಹರಿಸುವಂತೆ ಮನವಿ ನೀಡಿದರೂ ಸ್ಪಂದಿಸದ ಕಾರಣ ಜನವರಿ 26 ರಂದು ತಾಲ್ಲೂಕು ಆಡಳಿತದ ವತಿಯಿಂದ ನಡೆಯಲಿರುವ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಸುಮಾರು 300 ಕಾರ್ಯಕರ್ತರೊಂದಿಗೆ ಕಪ್ಪು ಬಾವುಟ ಪ್ರದರ್ಶಿಸಿ ಅರೆ ಬೆತ್ತಲೆ ಪ್ರತಿಭಟನೆ ಮಾಡುವ ಮೂಲಕ ಪ್ರತಿಭಟನೆ ಮಾಡಲಾಗುವು ಎಂದರು. ಈ ಸಂದರ್ಭದಲ್ಲಿ ಜಿಲ್ಲಾ ಸಂಘಟನಾ ಸಂಚಾಲಕ ಚವ್ವೇನಹಳ್ಳಿ ವಿಜಿ, ಖಜಾಂಚಿ ನೀಲಕಂಠ ಅಗ್ರಹಾರ ಶ್ಯಾಮಣ್ಣ, ತಾಲ್ಲೂಕು ಸಂಘಟನಾ ಸಂಚಾಲಕರಾದ ಡಿ.ಎನ್.ನಾರಾಯಣಸ್ವಾಮಿ, ಮಾಸ್ತಿ ಹೋಬಳಿ ಅಧ್ಯಕ್ಷ ವರದಾಪುರ ನಾರಾಯಣಸ್ವಾಮಿ, ಕಸಬಾ ಹೋಬಳಿ ಸಂಚಾಲಕ ಹುಂಗೇನಹಳ್ಳಿ ಶ್ರೀನಿವಾಸ್,ಅಂಗಶೆಟ್ಟಹಳ್ಳಿ ನಾರಾಯಣ ಸ್ವಾಮಿ, ಯಶವಂತಪುರ ಮುನಿರಾಜು,ಗಾಂಧಿ ವೃತ್ತ ಬಾಬು, ತಿರುಮಲೇಶ್ ಇದ್ದರು.

# ಪ್ಲಾಸ್ಟಿಕ್ ಮುಕ್ತ ಗ್ರಾ.ಪಂ.ಗೆ ಸಹಕಾರ ಅಗತ್ಯ

**ಶಿಡ್ಲಘಟ್ಟ:** ಹಂಡಿಗನಾಳ ಗ್ರಾಮ ಪಂಚಾಯತಿಯನ್ನು ಪ್ಲಾಸ್ಟಿಕ್ ಮುಕ್ತ ಗ್ರಾಪಂಯನ್ನಾಗಿ ಮಾಡುವ ಪಣ ತೊಡಲಾಗಿದೆ, ಅದಕ್ಕಾಗಿ ಪಂಚಾಯಿತಿಯ ಆಡಳಿತ ಮಂಡಳಿ, ಅಧಿಕಾರಿಗಳು ಕಾರ್ಯ ರೂಪಿಸಿದ್ದು ಈ ನಮ್ಮ ಯೋಜನೆಗೆ ಸಾರ್ವಜನಿಕರ ಸಹಕಾರ ಅತಿ ಅಗತ್ಯ ಎಂದು ಹಂಡಿಗನಾಳ ಗ್ರಾಮ ಪಂಚಾಯತಿ ಪಿಡಿಒ ಮಧುಸೂಧನ್ ತಿಳಿಸಿದರು.

ತಾಲ್ಲೂಕಿನ ಹಂಡಿಗನಾಳ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ದಿಢೀರ್ ದಾಳಿ ನಡೆಸಿ ಅಂಗಡಿ ಹೋಟೆಲ್‌ಗಳಲ್ಲಿ ನಿಷೇಧಿತ ಪ್ಲಾಸ್ಟಿಕ್ ಕವರ್‌ಗಳನ್ನು ವಶಪಡಿಸಿಕೊಂಡು ದಂಡ ವಿಧಿಸುವ ಕಾರ್ಯಾಚರಣೆ ವೇಳೆ ಅವರು ಮಾತನಾಡಿದರು.

ಗ್ರಾಮಗಳ ಅಂಗಡಿ ಹೋಟೆಲ್ ಗಳಿಗೆ ದಿಢೀರ್ ಭೇಟಿ ನೀಡಿ, ನಿಷೇಧಿತ ಪ್ಲಾಸ್ಟಿಕ್ ಕವರ್, ಕಪ್ ಮತ್ತಿತರೆ ವಸ್ತುಗಳ ಮಾರಾಟ ಮಾಡುತ್ತಿರುವ ಬಗ್ಗೆ ಪರಿಶೀಲಿಸುತ್ತಿದ್ದು ಮಾರಾಟ ಕಂಡುಬಂದಲ್ಲಿ ದಂಡ ವಿಧಿಸಿ ಪ್ರಕರಣ ದಾಖಲಿಸಲಾಗುವುದು ಎಂದರು.

ಹಂಡಿಗನಾಳ ಗ್ರಾಮ ಪಂಚಾಯತಿಯನ್ನು ಪ್ಲಾಸ್ಟಿಕ್ ಮುಕ್ತ ಗ್ರಾಮ ಪಂಚಾಯತಿಯನ್ನಾಗಿ ಮಾಡುವ ಪಣ ತೊಡಲಾಗಿದೆ, ಅದಕ್ಕಾಗಿ ಪಂಚಾಯಿತಿಯ ಆಡಳಿತ ಮಂಡಳಿ, ಅಧಿಕಾರಿಗಳು ಕಾರ್ಯ ರೂಪಿಸಿದ್ದು ಈ ನಮ್ಮ ಯೋಜನೆಗೆ ಸಾರ್ವಜನಿಕರ ಸಹಕಾರ



ಅತಿ ಅಗತ್ಯ ಎಂದರು.

ಪ್ಲಾಸ್ಟಿಕ್ ಕವರ್‌ಗಳ ಮಾರಾಟ ಮಾಡುವುದು ಹಾಗೂ ಖರೀದಿಸು ವುದು ನಿಷೇಧಿಸಲಾಗಿದೆ ,ಹಾಗಾಗಿ ಈ ಬಗ್ಗೆ ಜನಸಾಮಾನ್ಯರಲ್ಲಿ ಅರಿವು ಮೂಡಿಸಲಾಗುತ್ತಿದೆ ಪ್ಲಾಸ್ಟಿಕ್ ಕವರ್‌ಗಳನ್ನು ಮಾರಾಟ ಮಾಡುತ್ತಿದ್ದರೆ ಅದನ್ನು ವಶಪಡಿಸಿಕೊಳ್ಳಲಾಗುವುದು, ಮೊದಲ ಬಾರಿ ದಂಡ ವಿಧಿಸಲಾಗುವುದು ಮತ್ತು ನಂತರದಲ್ಲಿ ಪ್ಲಾಸ್ಟಿಕ್ ಕವರ್ ಮಾರಾಟ ಮುಂದುವರೆಸಿದರೆ ಕೇಸು ದಾಖಲಿಸಲಾಗುವುದು ಎಂದು ಎಚ್ಚರಿಸಿದರು.

ಹಂಡಿಗನಾಳ, ಹಂಡಿಗನಾಳ ವೃತ್ತ, ಕೇಶವಪುರ, ಲಕ್ಕಹಳ್ಳಿ ಗೇಟ್ ಬಳಿ ಇರುವ ಅಂಗಡಿಗಳಲ್ಲಿ ಪ್ಲಾಸ್ಟಿಕ್ ಕವರ್‌ಗಳನ್ನು ವಶಪಡಿಸಿಕೊಂಡು ಅಂಗಡಿ ಮಾಲೀಕರಿಗೆ ಎಚ್ಚರಿಕೆ ಕೊಟ್ಟು ಮುಂದಿನ ದಿನಗಳಲ್ಲಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಎಲ್ಲಾ ಗ್ರಾಮಗಳಲ್ಲಿ ಪ್ಲಾಸ್ಟಿಕ್ ಬಳಸದಂತೆ ಸೂಚಿಸಲಾಯಿತು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಕಾರ್ಯದರ್ಶಿ ಎಚ್.ಎನ್.ಶ್ರೀನಿವಾಸ್, ಮಾಜಿ ಸದಸ್ಯ ಎ.ಎಂ. ತ್ಯಾಗರಾಜ್, ಜಲಗಾರರಾದ ವೆಂಕಟೇಶ್,ದೇವರಾಜು, ಗ್ರಂಥಪಾಲಕ ಮುನಿರಾಜು, ಎಚ್.ಎನ್. ಮೋಹನ್, ನರಸಿಂಹಪ್ಪ ಮತ್ತು ಮುನಿಯಪ್ಪ ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದರು.

# ಹೇಮಗಿರಿ ಜಾತ್ರೆಗೆ 28ರ ನಂತರ ದನಕರುಗಳನ್ನು ಕರೆತನ್ನಿ; ಮನವಿ

**ಕೆ.ಆರ್.ಪೇಟೆ.:** ನೂರಾರು ವರ್ಷಗಳ ಇತಿಹಾಸ ಹೊಂದಿರುವ ಪ್ರಸಿದ್ಧ ಹೇಮಗಿರಿ ದನಗಳ ಜಾತ್ರೆಗೆ ಬೇಕಾಗಿರುವ ಎಲ್ಲಾ ರೀತಿಯ ಸಿದ್ದತೆಗಳನ್ನು ಕೈಗೊಳ್ಳಲಾಗಿದೆ ಎಂದು ಶಾಸಕ ಹೆಚ್,ಟಿ.ಮಂಜು ತಿಳಿಸಿದರು. ಅವರು ಪಟ್ಟಣದ ಮಿನಿ ವಿಧಾನಸೌಧದಲ್ಲಿ ಇತಿಹಾಸ ಪ್ರಸಿದ್ಧ ಹೇಮಗಿರಿ ಜಾತ್ರೆಯ ಸಂಬಂಧ ಪೂರ್ವಭಾವಿ ಸಭೆಯನ್ನು ಉದ್ದೇಶಿಸಿ ಮಾತನಾಡಿದರು.

ನೂರಾರು ವರ್ಷಗಳ ಇರಿಹಾಸ ಹೊಂದಿರುವ ಹೇಮಗಿರಿ ಜಾತ್ರಾ ಮಹೋತ್ಸವಕ್ಕೆ ದಿನಗಣನೆ ಆರಂಭವಾಗಿದ್ದು ಅದಕ್ಕೆ ಬೇಕಾದ ಎಲ್ಲಾ ರೀತಿಯ ಸಿದ್ದತೆಗಳನ್ನು ತಾಲ್ಲೂಕು ಆಡಳಿತ ನಿರ್ವಹಣೆ ಮಾಡಲಿದೆ. ಸುಗ್ಗಿಯ ನಂತರ ರೈತರು



ತಮ್ಮ ಜಾನುವಾರುಗಳನ್ನು ಉತ್ಸಾಹದಿಂದ ಪೋಷಣೆ ಮಾಡಿ ಅವುಗಳನ್ನು ವಿವಿಧ ಜಾತ್ರೆಗಳಿಗೆ ಕರೆತರುವ ಪರಿಪಾಠ ಹಿಂದಿನಿಂದಲೂ ಬೆಳೆದುಬಂದಿದೆ. ಅದರಂತೆ ಈ ಬಾರಿಯೂ ಸಹ 28 ರಿಂದ ದನಗಳನ್ನು ಜಾತ್ರೆಗೆ ಕರೆತರಬೇಕು. ರೈತರುಗಳು ಅದಕ್ಕೂ ಮುಂಚಿತವಾಗಿ ದನಗಳನ್ನು ಕರೆತರಬಾರದು ಎಂದು ಶಾಸಕರು ಮನವಿ ಮಾಡಿದರು.

ಫೆಬ್ರವರಿ 5 ರಂದು ಹೇಮಗಿರಿ ಶ್ರೀ ಕಲ್ಯಾಣ ವೆಂಕಟರಮಣ ಸ್ವಾಮಿಯ ಬ್ರಹ್ಮರಥೋತ್ಸವವಿದ್ದು ತಾಲ್ಲೂಕಿನ ಸಾರ್ವಜನಿಕರು, ರೈತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಲ್ಯಾಣವೆಂಕಟರಮಣ ಸ್ವಾಮಿಯ ಕೃಪೆಗೆ ಪಾತ್ರರಾಗಬೇಕೆಂದು ಮನವಿ ಮಾಡಿದರು.

ಇದೇ ಸಂದರ್ಭದಲ್ಲಿ ತಹಶೀಲ್ದಾರ್ ಲೆಫ್ಟಿನೆಂಟ್ ಕರ್ನಲ್ ಡಾ. ಎಸ್.ಯು. ಅಶೋಕ್, ಪೊಲಿಸ್ ನಿರೀಕ್ಷಕರಾದ ಆನಂದೇ ಗೌಡ, ಸುಮಾರಾಣಿ, ತಾಲ್ಲೂಕು ಆಸ್ಪತ್ರೆಯ ಆಡಳೀತ ವೈದ್ಯಾಧಿಕಾರಿ ಡಾ.ಶಶಿಧರ್, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಅಜಿತ್ ಸೇರಿದಂತೆ ಹಲವರಿದ್ದರು.

# ಪೌಷ್ಟಿಕತೆ, ಸ್ವಾಸ್ಥ್ಯ, ಶುಚಿತ್ವದ ಕಡೆ ಹೆಚ್ಚಿನ ಗಮನ ಹರಿಸಿ

**ಮುಳಬಾಗಿಲು:** ಇಂದಿನ ಮಕ್ಕಳು ಅತಿ ಮುಖ್ಯವಾಗಿ ಪೌಷ್ಟಿಕತೆ ಸ್ವಾಸ್ಥ್ಯ ಶುಚಿತ್ವದ ಕಡೆ ಹೆಚ್ಚಿನ ಗಮನ ಹರಿಸಬೇಕು, ಸ್ವಾಸ್ಥ್ಯ ಶುಚಿತ್ವ ಎಂದರೆ ಕೇವಲ ದೈಹಿಕವಾಗಿ ಮಾತ್ರ ಅಲ್ಲ,, ಮಾನಸಿಕವಾಗಿಯೂ ಕೂಡ ಹೌದು, ನಮ್ಮ ಮಾನಸಿಕ ಯೋಚನೆ ಭಾವನೆ ಆಲೋಚನೆಗಳು, ಸನ್ಮಾರ್ಗದಲ್ಲೇ ನಡೆಯಬೇಕು ಎಂದು ಸಂಪನ್ಮೂಲ ವ್ಯಕ್ತಿ ಪ್ರೇಮ ಹೇಳಿದ್ದಾರೆ.

ತಾಲೂಕಿನ ಬೈರಕೂರು ವಲಯದ ಬೈರಕೂರು ಬಿ.ಕಾರ್ಯಕ್ಷೇತ್ರದ ಅನುದಾನಿತ ನೆಹರು ಕೆನಡಿ ಪ್ರೌಢಶಾಲೆಯಲ್ಲಿ ಶ್ರೀ ಧರ್ಮಸ್ಥಳ ಸಂಘದ ವತಿಯಿಂದ ಸ್ವಾಸ್ಥ್ಯ ಸಂಕಲ್ಪ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲಲಿ ಮಾತನಾಡಿದ ಅವರು, ಹಿರಿಯರಿಗೆ ಅಪ್ಪ ಅಮ್ಮನಿಗೆ ಹಿರಿಯರಿಗೆ ಗೌರವದಿಂದ ನಡೆದುಕೊಳ್ಳಬೇಕು, ಹಾಗೆಯೇ ನಾವು ದಿನನಿತ್ಯ ಬಳಸುವಂತಹ ಅನೇಕ ರಾಸಾಯನಿಕ ವಸ್ತುಗಳಿಂದ ನಮ್ಮ ಆರೋಗ್ಯದ ಮೇಲೆ ಹೇಗೆ ಕೆಟ್ಟ



ಪರಿಣಾಮ ಬೀರುತ್ತದೆ ಎಂಬುದನ್ನು ಸಹ ಸ ವಿ ಸ್ತಾ ರ ವಾ ಗಿ ತಿಳಿಸಿಕೊಟ್ಟರು, ಹಾಗೆಯೇ ಕಾರ್ಯಕ್ರಮ ವನ್ನು ಕುರಿತು ಸದರಿ ಶಾಲೆಯ ಮುಖ್ಯೋಪಾಧ್ಯಾಯರಾದ ಶ್ರೀ ನಾಗರಾಜ್ ರವರು ಶುಚಿತ್ವದ ಬಗ್ಗೆ ಮಕ್ಕಳಿಗೆ ಮಾಹಿತಿ ಮಾರ್ಗದರ್ಶನ ನೀಡಿದರು.

ಈ ಸಭೆಯಲ್ಲಿ ಅದೇ ಶಾಲೆಯ ಸಹ ಶಿಕ್ಷಕರು, ಮೇಲ್ವಿಚಾರಕರಾದ ಬೈರಕೂರು ಅನಿಲ್ ಕುಮಾರ್, ಸೇವಾಪ್ರತಿನಿಧಿಯಾದ ಪ್ರಸನ್ನ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ದೇಶದ ಮಹಾನ್ ಸಾಧಕರ ಆದರ್ಶ ತತ್ವಸಿದ್ಧಾಂತಗಳನ್ನು ಅಳವಡಿಸಿಕೊಳ್ಳಿ

**ಚಾಮರಾಜನಗರ:** ಅಂಬಿಗರ ಚೌಡಯ್ಯ, ವೇಮನ ಸೇರಿದಂತೆ ದೇಶದ ಎಲ್ಲಾ ಮಹಾನ್ ಸಾಧಕರ ಆದರ್ಶ ತತ್ವಸಿದ್ಧಾಂತಗಳನ್ನು ಪ್ರತಿಯೊಬ್ಬರು ಜೀವನದಲ್ಲಿ ಅಳವಡಿಸಿಕೊಂಡು ಮುನ್ನಡೆಯುವಂತೆ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಮಹಮ್ಮದ್ ಅಸ್ಗರ್ ಮುನ್ನಾ ಅವರು ಸಲಹೆ ಮಾಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಸರಳವಾಗಿ ಆಯೋಜಿಸಲಾಗಿದ್ದ ಶಿವಶರಣ ಅಂಬಿಗರ ಚೌಡಯ್ಯ ಹಾಗೂ ಮಹಾಯೋಗಿ ವೇಮನ ಅವರ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ, ಸಾಧಕರ ಭಾವಚಿತ್ರಗಳಿಗೆ ಪುಷ್ಪಾರ್ಚನೆ ನೆರವೇರಿಸಿ ಅವರು ಮಾತನಾಡಿದರು.

ನಿರಂತರವಾಗಿ ಬದಲಾಗುವ ನೀರಿನ ಅಲೆಗಳ ನಡುವೆ ದೃಢಸಂಕಲ್ಪದಿಂದ ದೋಣಿ ನಡೆಸುವ ಕಾಯಕ ಮಾಡುತ್ತಿದ್ದ ಅಂಬಿಗರ ಚೌಡಯ್ಯ ಅವರು ರಚಿಸಿದ ವಚನಗಳ ಚಿಂತನೆ



ಜನರಿಗೆ ಪ್ರೇರಣಾಶಕ್ತಿಯಾಗಿತ್ತು. ದೋಣಿ ನಡೆಸುತ್ತಲೇ ಜನರಿಗೆ ಕಾಯಕದ ಮಹತ್ವವನ್ನು ತಿಳಿಹೇಳಿದ ಅಂಬಿಗರ ಚೌಡಯ್ಯ ಅವರ ಆದರ್ಶ ಚಿಂತನೆಗಳನ್ನು ಮುಂದಿನ ಪೀಳಿಗೆಗೆ ಪಸರಿಸುವ ಕೆಲಸ ಆಗಬೇಕು. ಅವರ ತತ್ವಸಿದ್ಧಾಂತಗಳಿಗೆ ನಾವೆಲ್ಲರೂ ಬದ್ಧರಾಗಿರಬೇಕು ಎಂದು ಅಸ್ಗರ್ ಮುನ್ನಾ ಅವರು ತಿಳಿಸಿದರು.



ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಮಾತನಾಡಿ, ಕರ್ನಾಟಕದ ಇತಿಹಾಸದಲ್ಲಿ 12ನೇ ಶತಮಾನ ಮಹತ್ವಪೂರ್ಣ ಬದಲಾವಣೆಗೆ ನಾಂದಿ ಹಾಡಿದ ಕಾಲವಾಗಿದೆ. ಅಂಬಿಗರ ಚೌಡಯ್ಯ ಅವರು 12ನೇ ಶತಮಾನದ ಪ್ರಸಿದ್ಧ ವಚನಕಾರರು ಹಾಗೂ ಸಮಾಜ ಸುಧಾರಕರಾಗಿದ್ದರು. ಬಸವಣ್ಣನವರ ಅನುಭವ ಮಂಟಪದಲ್ಲಿದ್ದ ಶಿವಶರಣರ ನಡುವೆ ತನ್ನದೇ ಛಾಪು ಮೂಡಿಸಿರುವ ಚೌಡಯ್ಯ ತಮ್ಮ ವಿವೇಚನಾಶಕ್ತಿ, ಆಳವಾದ ಅನುಭವದಿಂದ 278 ವಚನಗಳನ್ನು ರಚಿಸಿ ವಚನಾಂಕಿತ ಎಂಬ ಬಿರುದು ಪಡೆದಿದ್ದರು ಎಂದರು.

ಶಿವಶರಣರ ವಚನ ಸಂಸ್ಕೃತಿಯು ಆಚಾರ–ವಿಚಾರ, ಸಂಪ್ರದಾಯಗಳಿಂದ ತುಂಬಿಹೋಗಿದ್ದ ಸಮಾಜಕ್ಕೆ ಚಲನಾಶೀಲತೆ ನೀಡಿತು ಎಂದರೆ ತಪ್ಪಾಗಲಾರದು. ವಚನಗಳನ್ನು ರಚಿಸಿ ನುಡಿದಂತೆ ನಡೆದ ಅಂಬಿಗರ ಚೌಡಯ್ಯ ಅವರು ಸಾಮಾಜಿಕ ತಾರತಮ್ಯದ ವಿರುದ್ಧ ಹೋರಾಡಿ ಸದಾಚಾರದ ಹಾದಿಯಲ್ಲಿ ಬೆಳಕು ಚೆಲ್ಲಿದರು. ಅವರ ವಚನಗಳು ತರ್ಕಬದ್ಧ ಹಾಗೂ ಮಾನವ ಸಹಾನುಭೂತಿಯ ಪ್ರತಿಬಿಂಬವಾಗಿವೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತ ಅವರು ಮಾತನಾಡಿ 15ನೇ ಶತಮಾನದಲ್ಲಿ ಜೀವಿಸಿದ್ದ ವೇಮನ ಅವರು ಶ್ರೇಷ್ಠ ವಚನಕಾರರು ಆಗಿದ್ದರು. ಮಹಾಯೋಗಿ ವೇಮನ ಅವರು ಕನ್ನಡದಲ್ಲಿ ಸರ್ವಜ್ಞ ಹಾಗೂ ತಮಿಳಿನ ತಿರುವಳ್ಳೂರ್ ಅವರಂತೆ ತೆಲುಗು ಭಾಷೆಯಲ್ಲಿ ಸಾಮಾನ್ಯ ಜನರಿಗೆ ಅರ್ಥವಾಗುವಂತಹ ಸರಳ ವಚನಗಳನ್ನು ರಚಿಸಿ ಜನರನ್ನು ಜಾಗೃತಗೊಳಿಸಿದರು. ಮಹಾನ್ ಸಮಾಜ ಸುಧಾರಕರಾಗಿ ಮನುಕುಲದ ಏಳಿಗೆಗಾಗಿ ಶ್ರಮಿಸಿದ ವೇಮನ ಅವರ ಮೌಲ್ಯಯುತ ಆದರ್ಶಗಳನ್ನು ನಾವೆಲ್ಲರೂ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದ ಉದಯಕುಮಾರ್, ಕನ್ನಡಪರ ಚಳವಳಿ ಮುಖಂಡರಾದ ಶ್ರೀನಿವಾಸಗೌಡ, ಪಣ್ಯದಹುಂಡಿ ರಾಜು, ಸಮಾಜದ ಜಿಲ್ಲಾಧ್ಯಕ್ಷರಾದ ಪ್ರಕಾಶ್, ಮುಖಂಡರಾದ ಶ್ರೀನಿವಾಸ್, ಶ್ರೀಕಂಠ, ಈಶ್ವರ್, ಶಿವಣ್ಣ, ಜಿಲ್ಲಾಮಟ್ಟದ ಅಧಿಕಾರಿಗಳು, ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಅಭಿವೃದ್ಧಿ ವಿಚಾರ ಸಂಕಿರಣ ಕಾರ್ಯಕ್ರಮ

**ಚಾಮರಾಜನಗರ:** ಮೈಸೂರು ವಿಶ್ವವಿದ್ಯಾನಿಲಯ ಮಾನಸಗಂಗೋತ್ರಿಯ ಆಹಾರ ವಿಜ್ಞಾನ ಮತ್ತು ಪೋಷಣೆ ಅಧ್ಯಯನ ವಿಭಾಗ ಹಾಗೂ ಮಾಳವೀಯ ಮಿಷನ್ ಶಿಕ್ಷಕರ ತರಬೇತಿ ಕೇಂದ್ರ ಸಹಯೋಗದಲ್ಲಿ ರಾಷ್ಟ್ರೀಯ ಉಚ್ಚತರ ಶಿಕ್ಷಾ ಅಭಿಯಾನ ಅನುದಾನದ ಅಡಿ ಇಂದಿನಿಂದ ಆಯೋಜಿಸಿರುವ ಎಸ್.ಪಿ.ಎಸ್.ಎಸ್. ಬಳಸಿ ಅನ್ವಯಿಕ ಬಯೋಸ್ಟಾಟಿಸ್ಟಿಕ್ಸ್ ಮತ್ತು ರಿಸರ್ಚ್ ಅನಾಲಿಟಿಕ್ಸ್ ಕುರಿತ ಎರಡು ದಿನಗಳ ಅಧ್ಯಾಪಕರ ಅಭಿವೃದ್ಧಿ ವಿಚಾರ ಸಂಕಿರಣ ಕಾರ್ಯಕ್ರಮವು ಮಾನಸಗಂಗೋತ್ರಿಯ ಆಹಾರ ವಿಜ್ಞಾನ ಮತ್ತು ಪೋಷಣೆ ಅಧ್ಯಯನ ವಿಭಾಗದಲ್ಲಿಂದು ಉದ್ಘಾಟನೆಗೊಂಡಿತು.

ಕಾರ್ಯಕ್ರಮ ಉದ್ಘಾಟಿಸಿದ ಚಾಮರಾಜನಗರ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಎಂ.ಆರ್. ಗಂಗಾಧರ್ ಅವರು ಮಾತನಾಡಿ ಇಂದಿನ ಶೈಕ್ಷಣಿಕ ಭೂ ದೃಶ್ಯದಲ್ಲಿ, ಸಂಶೋಧನಾ ವಿಶ್ಲೇಷಣೆಗಳು ಮತ್ತು ಸಂಖ್ಯಾಶಾಸ್ತ್ರದ ಉಪಕರಣಗಳು ಅನಿವಾರ್ಯವಾಗಿವೆ. ಅವು ಗುಣಮಟ್ಟದ ಸಂಶೋಧನೆ ಮತ್ತು ನಾವೀನ್ಯತೆಯ ಬೆನ್ನೆಲುಬಾಗಿ ಕಾರ್ಯನಿರ್ವಹಿಸುತ್ತವೆ. ಸೈದ್ಧಾಂತಿಕ ಜ್ಞಾನ ಮತ್ತು ಪ್ರಾಯೋಗಿಕ ಅನ್ವಯದ ನಡುವಿನ ಅಂತರವನ್ನು ಕಡಿಮೆ ಮಾಡುತ್ತವೆ. ಅಲ್ಲದೆ, ದೇಶದ ಉಜ್ವಲ ಭವಿಷ್ಯಕ್ಕಾಗಿ ವಿದ್ಯಾರ್ಥಿ ಕೇಂದ್ರಿತ, ಕೌಶಲ್ಯ ಆಧಾರಿತ ಶಿಕ್ಷಣ ವ್ಯವಸ್ಥೆಯ ಪ್ರಾಮುಖ್ಯತೆಯ ಕುರಿತಾಗಿ ಒತ್ತು ನೀಡಲಿವೆ ಎಂದರು.

ಮುಂದುವರಿದು ಪ್ರಧಾನಮಂತ್ರಿ ಕೌಶಲ ವಿಕಾಸ ಯೋಜನೆಯಂತಹ ಕೇಂದ್ರ ಸರ್ಕಾರದ ಯೋಜನೆಗಳ ಬಗ್ಗೆ ಪ್ರೊ. ಎಂ.ಆರ್. ಗಂಗಾಧರ್ ಅವರು ಫಲಾನುಭವಿಗಳಿಗೆ ಮಾಹಿತಿ ನೀಡಿ, ಇದು ದೇಶದ ಯುವಕರನ್ನು ವಿಶೇಷವಾಗಿ ಗ್ರಾಮೀಣ ಪ್ರದೇಶದಲ್ಲಿನ ಯುವಕರನ್ನು ಸಬಲೀಕರಣಗೊಳಿಸಿ ಹಾಗೂ ಅವರ ಕೆಲಸದ ವಾತಾವರಣದಲ್ಲಿ ಹೆಚ್ಚು ಉದ್ಯೋಗ ಮತ್ತು ಉತ್ಪಾದಕತೆಯನ್ನು ಉಂಟುಮಾಡುತ್ತದೆ ಎಂದು ತಿಳಿಸಿದರು.

ಮಾಳವೀಯ ಮಿಷನ್ ಶಿಕ್ಷಕರ ತರಬೇತಿ ಕೇಂದ್ರದ ನಿರ್ದೇಶಕರಾದ ಪ್ರೊ. ಎಸ್.ಎಸ್. ಮಾಲಿನಿ, ಅವರು ಕಾರ್ಯಕ್ರಮದಲ್ಲಿ ಗೌರವ ಅತಿಥಿಯಾಗಿ ಉಪಸ್ಥಿತರಿದ್ದರು. ವಿಭಾಗದ ಅಧ್ಯಕ್ಷರಾದ ಪ್ರೊ. ಎಂ. ಕೋಮಲ ಸಮಾರಂಭದ ಅಧ್ಯಕ್ಷತೆ ವಹಿಸಿ, ಅಂತರ ಶಿಸ್ತೀಯ ಸಹಕಾರವನ್ನು ಬೆಳೆಸುವಲ್ಲಿ ವಿಚಾರ ಸಂಕಿರಣದ ಮಹತ್ವವನ್ನು ದೃಢಪಡಿಸಿದರು.



# ಗೋವಿಲ್ಲದ ಮನಷ್ಯನ ಜೀವನ ಶೂನ್ಯ; ಹಂತಕರ ಬಂಧಿಸಲು ಒತ್ತಾಯ

**ಚಾಮರಾಜನಗರ:**ಗೋ ಹಂತಕರನ್ನು ಬಂಧಿಸುವಂತೆ ಒತ್ತಾಯಿಸಿ ಗೋ ಸಂರಕ್ಷಣಾ ಸಮಿತಿ ವತಿಯಿಂದ ಮಂಗಳವಾರ ಪ್ರತಿಭಟನೆ ನಡೆಸಲಾಯಿತು.

ಚಾಮರಾಜನಗರದ ಶ್ರೀ ಚಾಮರಾಜೇಶ್ವರ ದೇವಸ್ಥಾನದ ಮುಂಭಾಗ ಜಮಾಯಿಸಿದ ಪ್ರತಿಭಟನಾಕಾ ರರು ಗೋ ಮಾತೆಗೆ ಪೂಜೆ ಸಲ್ಲಿಸಿ ಅಲ್ಲಿಂದ ಭುವನೇಶ್ವರಿ ವೃತ್ತದವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿ, ಮಾನವ ಸರಪಳಿ ನಿರ್ಮಿಸಿ, ಗೋ ಹಂತಕರನ್ನು ಬಂಧಿಸುವಂತೆ ಆಗ್ರಹಿಸಿದರು.

ದೈವತ್ವ ಹೊಂದಿರುವ ಗೋವುಗಳನ್ನ ವಿಕೃತವಾಗಿ ಹಿಂಸಿ ಸುತ್ತಿರುವುದು ಖಂಡನೀಯ. ಇಂತಹ ದುಷ್ಕ ತ್ಯಗಳನ್ನು ಖಂಡಿಸಿ ಪ್ರತಿಭಟಿಸುತ್ತಿಸಲಾಗುತ್ತಿದೆ. ಗೋ ಹಂತಕರನ್ನು ಬಂಧಿಸುವಂತೆ ಒತ್ತಾಯಿಸಿ ನಗರದಲ್ಲಿ ಗೋ ಸಂರಕ್ಷಣಾ ಸಮಿತಿಯಿಂದ ಗೋ ಪೂಜೆ ನಡೆಸುವ ಮೂಲಕ ಆಕ್ರೋಶ ವ್ಯಕ್ತಪಡಿಸಲಾಯಿತು.

ಭಾರತೀಯ ಕಿಸಾನ್ ಸಂಘದ ಜಿಲ್ಲಾಧ್ಯಕ್ಷ ಕೊಡಸೋಗೆ ಶಿವಪ್ರಕಾಶ್ ಮಾತನಾಡಿ, ರೈತ ದೇಶದ ಬೆನ್ನೆಲುಬಾದರೆ ರೈತನ ಬೆನ್ನೆಲುಬು ಗೋವು, ಗೋವಿಲ್ಲದ ಮನಷ್ಯನ ಜೀವನ ಶೂನ್ಯ ಮನುಷ್ಯನ ಹುಟ್ಟಿನಿಂದ ಸಾಯುವ ವರೆಗೂ ಗೋವಿನ ಉತ್ಪನ್ನಗಳು ಮನುಷ್ಯನಿಗೆ ಸಂಜೀವಿನಿ ಇದ್ದಂತೆ ಎಂದರು.

ಹಿಂದೂ ಜಾಗರಣ ವೇದಿಕೆಯ ಕರ್ನಾಟಕ




ದಕ್ಷಿಣ ಪ್ರಾಂತದ ಸಹ ಸಂಯೋಜಕ ಮಹೇಶ್ ಕಡಗದಾಳು ಮಾತನಾಡಿ, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಬಂದಾಗಿನಿಂದ ಹಿಂದೂ ಭಾವನೆಗಳ ಜೊತೆ ಚಲ್ಲಾಟವಾಡುತ್ತಿದೆ.

ಕೆಲವು ದಿನಗಳ ಹಿಂದೆ ಚಾಮರಾಜಪೇಟೆಯ ವಿನಾಯಕನಗರದಲ್ಲಿ 3 ಹಸುಗಳ ಕೆಚ್ಚಲನ್ನು ಕೊಯ್ದು ವಿಕೃತಿ ಮೆರೆದ ರಾಕ್ಷಸಿ ಮನಸ್ಥಿತಿಯ ವ್ಯಕ್ತಿಯನ್ನು ಮಾನಸಿಕ ಅಸ್ವಸ್ಥ ಎಂದು ಹೇಳುವ ಮೂಲಕ ಗೃಹಮಂತ್ರಿ ತಮ್ಮ ಅಸಮರ್ಥತೆಯನ್ನು ಹೊರಹಾಕಿದ್ದಾರೆ ಎಂದರು.

ನಂಜನಗೂಡಿನ ಶ್ರೀ ನಂಜುಂಡೇಶ್ವರ ದೇವಸ್ಥಾನಕ್ಕೆ ಭಕ್ತಾದಿಗಳು ಕಾಣಿಕೆ ರೂಪದಲ್ಲಿ ನೀಡಿದ್ದ ಗೋವಿನ ಬಾಲವನ್ನು ಕತ್ತರಿಸುವ ಸಾಹಸಕ್ಕೆ ಕೈ ಹಾಕಿದ್ದಾರೆ ನಂಜನಗೂಡಿನ ನಂಜುಂಡೇಶ್ವರದೇವಸ್ಥಾನಕ್ಕೆ ಸೇರಿದಜಾಗದಲ್ಲಿ ಗೋಶಾಲೆ ನಿರ್ಮಾಣ ಮಾಡುವ ಮೂಲಕ ಗೋವುಗಳನ್ನು ರಕ್ಷಿಸುವ ಹೊಣೆಯನ್ನು ಸರ್ಕಾರ ತೆಗೆದುಕೊಳ್ಳಬೇಕು ಎಂದು ಒತ್ತಾಯಿಸಿದರು.

ಸಿದ್ದರಾಮಯ್ಯನವರು ಮುಖ್ಯಮಂತ್ರಿಯಾದಾಗ ಅಲ್ಪಸಂಖ್ಯಾತರು ತಮ್ಮ ದುಷ್ಕೃತ್ಯ ಗಳನ್ನು ಹೆಚ್ಚು ಮಾಡುತ್ತಿದ್ದಾರೆ. ವಕ್ಸ್ ಮೂಲಕ ರಾಜ್ಯದಲ್ಲಿ ನೂರಾರು ರೈತರ ಸಹಸ್ರಾರು ಎಕರೆ ಭೂಮಿಗಳನ್ನು ವಶಪಡಿಸಿಕೊಂಡು ಎಲ್ಲ ಜಿಲ್ಲೆಗಳಲ್ಲಿ ಅಲ್ಪಸಂಖ್ಯಾತರನ್ನು ಒಲೈಸಿಕೊಳ್ಳುವ ಮಟ್ಟಕ್ಕೆ ನೀಚ ರಾಜಕಾರಣ ಮಾಡುತ್ತಿದ್ದಾರೆ ಎಂದರು.

ಮೂರು ಹಸುಗಳ ಕೆಚ್ಚಲನ್ನು ಕೊಯ್ದು ರಾಕ್ಷಸಿ ಕೃತ್ಯವನ್ನು ಎಸಗಿದವರು ಮತ್ತು ನಂಜನಗೂಡಿನಲ್ಲಿ ಗೋವಿನ ಬಾಲ ಕತ್ತ ರಿಸಿರುವ ಮೂಲಕ ಮನುಷ್ಯತ್ವವಿಲ್ಲದೆ ವರ್ತಿ ಸಿದ ಹಂತಕರನ್ನು ಕೂಡಲೇ ಬಂಧಿಸಬೇಕು ಎಂದು ಒತ್ತಾಯಿಸಿದರು. ಇಲ್ಲದಿದ್ದರೆ ಮುಂದಿ ನ ದಿನಗಳಲ್ಲಿ ರಾಜ್ಯಾದ್ಯಂತ ಹಂತ ಹಂತವಾಗಿ ಪ್ರತಿಭಟನೆ ಮಾಡಲಾಗುವುದು ಎಂದು ರಾಜ್ಯ ಸರ್ಕಾರಕ್ಕೆ ಎಚ್ಚರಿಕೆ ನಡೆಸಿದರು.

ಪ್ರತಿಭಟನೆಯಲ್ಲಿ ಹಿಂದೂ ಜಾಗರಣ ವೇದಿಕೆಯ ಜಿಲ್ಲಾಕಾರ್ಯಕಾರಿಣಿ ಸದಸ್ಯರಾದ ಸುಂದರ ರಾಜ್, ಚಂದ್ರಶೇಖರ ರಾವ್, ನಾರಾಯಣಸ್ವಾಮಿ, ಚಂದಕವಾಡಿ ಯೋಗೀಶ್, ಮುಖಂಡರಾದ ಪಿ.ಬಿ. ಶಾಂತ ಮೂರ್ತಿ ಕುಲಗಾಣ, ಮಹಾದೇವಸ್ವಾಮಿ ಬೆರಂಬಾಡಿ, ಆರ್.ಸುಂದರ್, ಬಾಲಸುಬ್ರ ಮಣ್ಯ, ಮಮತ, ಸರೋಜಮ್ಮ, ವನಜಾಕ್ಷಿ ಮೂಣಟಜಜಜಟಜಜಕೂಡು ಪ್ರಕಾಶ್, ಹೊನ್ನೂರು ಮಹ ದೇವಸ್ವಾಮಿ, ಜಯಸುಂದರ್, ನಟರಾಜು, ಕಾಡಳ್ಳಿ ಕುಮಾರ್, ರಂಗಸ್ವಾಮಿ ಸುದರ್ಶನ್ ಗೌಡ, ಮಂಜುನಾಥ್, ರಾಘವೇಂದ್ರ, ಚಂದ್ರಶೇಖರ್, ಮನೋಜ್ ಪಟೇಲ್ ಚಂದ್ರ ಶೇಖರ್, ಪ್ರದೀಪ್ ದೀಕ್ಷಿತ್, ವೀರೇಂದ್ರ, ಮಂಜುನಾಥ್, ಪ್ರಭುರಾಮ್, ಮಧು ಮದ್ದೂರು, ವೆಂಕಟೇಶ್, ಶಂಕರ, ಬುಲೆಟ್ ಚಂದ್ರು, ನಾಗೇಂದ್ರಬಾಬು, ಆನಂದ್ ಭಗೀರಥ, ಬಾಲರಾಜು,ಮಹೇಶ್ ಮರಿ ಯಾಲ, ನೂರೊಂದುಶೆಟ್ಟಿ,ರಮೇಶ್ ಆಟೋ ರಮೇಶ್, ದಯಾನಿಧಿ ಚಂದ್ರು, ಸುದ ರ್ಶನ್ ಆಳ್ವಾ, ಪ್ರಕಾಶ್, ನಂದೀಶ್, ಪೃಥ್ವಿ ಕಿರಣ್, ಪ್ರವೀಣ್, ಮಂಜು ಭಾಗವಹಿಸಿದ್ದರು.

# ಡಾ.ಶಿವಕುಮಾರ ಸ್ವಾಮಿಜೀ 6ನೇ ವರ್ಷದ ಪುಣ್ಯಸ್ಮರಣೆ

**ಹನೂರು:** ಪಟ್ಟಣದಲ್ಲಿ ದಿವಂಗತ ಎಚ್. ನಾಗಪ್ಪ ಸರ್ಕಲ್ ಖಾಸಗಿ ಬಸ್ ನಿಲ್ದಾಣ ಹತ್ತಿರ ಸಿದ್ದಗಂಗಾ ಮಠ ಲಿಂಗೈಕ್ಯ ಶ್ರೀ ಶ್ರೀ ಡಾ. ಶಿವಕುಮಾರ ಮಹಾಸ್ವಾಮಿಗಳ 6ನೇ ವರ್ಷದ ಪುಣ್ಯ ಸ್ಮರಣೆ ಅಂಗವಾಗಿ ವೀರಶೈವ ಸಮುದಾಯದ ವತಿಯಿಂದ ಅನ್ನ ಸಂತರ್ಪಣೆ ಮಾಡಲಾಯಿತು.

ಶ್ರೀ ಲಿಂಗೈಕ್ಯ ಡಾ. ಶಿವಕುಮಾರ ಮಹಾಸ್ವಾಮಿಗಳವರ ಭಾವಚಿತ್ರವನ್ನು ಇರಿಸಿ ಪೂಜೆ ಸಲ್ಲಿಸಿದರು ಹಾಗೂ ಪುಷ್ಪಾರ್ಚನೆ ಸಲ್ಲಿಸಿ ಗೌರವ ಸಲ್ಲಿಸಿದರು. ನಂತರ ಅನ್ನಸಂಪರ್ಪಣೆ ನಡೆಯಿತು.

ಇದೇವೇಳೆ ಅಖಿಲ ಭಾರತ ವೀರಶೈವ ಮಹಾಸಭಾ ಹನೂರು ತಾಲೂಕು ಘಟಕದ ಅಧ್ಯಕ್ಷರಾದ ಒಡೆಯರ ಪಾಳ್ಯ ಸೋಮಶೇಖರ್ ರವರು ಮಾತನಾಡಿ ಶ್ರೀ ಶ್ರೀ ಶಿವಕುಮಾರ ಮಹಾಸ್ವಾಮಿಗಳು ದಿನನಿತ್ಯ ಸಹಸ್ರಾರು ಭಕ್ತಾದಿಗಳಿಗೆ ದಾಸೋಹ ವ್ಯವಸ್ಥೆ ಶ್ರೀಮಠದಲ್ಲಿ 15 ಸಾವಿರಕ್ಕೆ ಹೆಚ್ಚು ಮಕ್ಕಳಿಗೆ ಉಚಿತ ಶಿಕ್ಷಣ ದಾಸೋಹವನ್ನು ನೀಡಿದ್ದರು.

ಲಕ್ಷಾಂತರ ಜನರ ದಾರಿದೀಪವಾಗಿ ಬೆಳಕಾಗಿದ್ದಾರೆ. ಶ್ರೀಗಳು ಸರ್ವಧರ್ಮ ಎಲ್ಲಾ ಜನರನ್ನ ಪ್ರೀತಿ ವಿಶ್ವಾಸದಿಂದ ನೋಡಿದಂತವರು ಅವರಿಗೆ ಕರ್ನಾಟಕ ರತ್ನ ಪದ್ಮಭೂಷಣ ಹಾಗೂ ನಡೆದಾಡುವ ದೇವರೇ ಎಂದು ಪ್ರಸಿದ್ಧವಾಗಿರುವ ಶ್ರೀಗಳು ನಮ್ಮನ್ನೆಲ್ಲ ಅಗಲಿ 6 ವರ್ಷಗಳೇ ಕಳೆದಿದ್ದರೂ ಅವರ ಆದರ್ಶಗಳು ಇಂದಿನ ಸಮಾಜಕ್ಕೆ ದಾರಿದೀಪ. ಜತೆಗೆ ಯುವಪೀಳಿಗೆಗೆ ಸ್ಫೂರ್ತಿಯಾಗಿದ್ದಾರೆ ಎಂದು ಹೇಳಿದರು.

ಇದೇ ವೇಳೆ ಅಂತಾರಾಷ್ಟ್ರೀಯ ಖೋ, ಖೋ ಪಂದ್ಯದಲ್ಲಿ ಪಾಲ್ಗೊಂಡಿದ್ದ ತಿ.ನರಸೀಪುರ ತಾಲೂಕಿನ ಕುರುಬೂರು ಗ್ರಾಮದ ಚೈತ್ರಾ ಅವರಿಗೆ ವೀರಶೈವ ಸಮುದಾಯ ಮುಖಂಡರು ಅಭಿನಂದನೆ ಸಲ್ಲಿಸಿ ಶುಭಕೋರಿದರು.

ಈ ಸಂದರ್ಭದಲ್ಲಿ ಹನೂರು ತಾಲೂಕು ವೀರಶೈವ ಮಹಾಸಭಾ ಪ್ರಧಾನ ಕಾರ್ಯದರ್ಶಿ ಕುಮಾರ್, ಸಹಕಾರ್ಯದರ್ಶಿ ನಾಗೇಂದ್ರ, ನಿರ್ದೇಶಕರುಗಳಾದ ವಿನೋದ ಬಾಬು, ಕಣ್ಣೂರು ನಾಗೇಂದ್ರ, ಬಸವರಾಜ್, ಮಾದಪ್ಪ, ವೀರಶೈವ ಮುಖಂಡರಾದ ಮೂರ್ತಿ, ಕೆಂಚಪ್ಪ, ಗುರುಮಲ್ಲಪ್ಪ, ಜಡೆಸ್ವಾಮಿ, ನಾಗೇಶ್, ವಿನೋದ್ ಕುಮಾರ್ ಸೇರಿದಂತೆ ಇನ್ನಿತರರು ಸಮುದಾಯದ ಮುಖಂಡರುಗಳು ಹಾಜರಿದ್ದರು.

# ರಾಜಗೋಪುರ ನಿರ್ಮಾಣಕ್ಕೆ ಪ್ರಸ್ತಾವನೆ ಸಲ್ಲಿಸಲು ಮನವಿ

**ಶಿಡ್ಲಘಟ್ಟ:** ತಾಲ್ಲೂಕಿನ ಸಾದಲಿ ಹೋಬಳಿಯ ಇತಿಹಾಸ ಪ್ರಸಿದ್ಧ ತಲಕಾಯಲಬೆಟ್ಟದ ಶ್ರೀವೆಂಕಟರಮಣಸ್ವಾಮಿ ದೇವಾಲಯದ ಪ್ರವೇಶ ದ್ವಾರದಲ್ಲಿ ರಾಜಗೋಪುರ ನಿರ್ಮಾಣ ಮಾಡಲು ಮುಜರಾಯಿ ಇಲಾಖೆಯ ಸಚಿವರಾದ ರಾಮಲಿಂಗಾರೆಡ್ಡಿ ಅವರು ರಾಜಗೋಪುರ ನಿರ್ಮಾಣಕ್ಕೆ ಕೂಡಲೇ ಅಗತ್ಯ ಪ್ರಸ್ತಾಪನೆ ಸಲ್ಲಿಸಲು ಮುಜರಾಯಿ ಇಲಾಖೆ ಆಯುಕ್ತರಿಗೆ ಸೂಚಿಸಿದ್ದಾರೆ.

ಕೆಪಿಸಿಸಿ ಸಂಯೋಜಕ ರಾಜೀವ್ ಗೌಡ ಅವರು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಅವರನ್ನು ಬೆಂಗಳೂರಿನ ಅವರ ಗೃಹ ಕಚೇರಿಯಲ್ಲಿ ಭೇಟಿ ಮಾಡಿ ದೇವಾಲಯದ ವ್ಯವಸ್ಥಾಪನಾ ಸಮಿತಿ ಕೋರಿಕೆಯಂತೆ ದೇವಾಲಯದ ಪ್ರವೇಶ ದ್ವಾರದಲ್ಲಿ ರಾಜಗೋಪುರ ನಿರ್ಮಾಣಕ್ಕೆ ಅನುಮತಿ ನೀಡುವಂತೆ ಮನವಿ ಮಾಡಿದರು.

ದೇವಾಲಯದ ವ್ಯವಸ್ಥಾಪನಾ ಸಮಿತಿ ಹಾಗೂ ದಾನಿಗಳ ನೆರವಿನಿಂದ ರಾಜಗೋಪುರ ನಿರ್ಮಾಣ ಮಾಡಲು ವ್ಯವಸ್ಥಾಪನಾ ಸಮಿತಿ ಸಭೆಯಲ್ಲಿ ನಿರ್ಣಯ ಕೈಗೊಳ್ಳಲಾಗಿದೆ ಎಂದರು.

ಮುಂದಿನ ಫೆಬ್ರವರಿಯಲ್ಲಿ ಬ್ರಹ್ಮರಥೋತ್ಸವ ನಡೆಯಲಿದ್ದು, ನಾಡಿನ ನಾನಾ ಕಡೆಯಿಂದ ಸಾವಿರಾರು ಭಕ್ತರು ರಥೋತ್ಸವದಲ್ಲಿ ಭಾಗಿಯಾಗಲಿದ್ದಾರೆ, ಅಷ್ಟರೊಳಗೆ ರಾಜಗೋಪುರ ನಿರ್ಮಾಣ ಕಾಮಗಾರಿ ಮಾಡಬೇಕಿದ್ದು, ಅನುಮತಿ



ನೀಡುವಂತೆ ರಾಜೀವ್‌ಗೌಡ ಅವರು ಸಚಿವ ರಾಮಲಿಂಗಾರೆಡ್ಡಿ ಅವರಲ್ಲಿ ಅವರು ಮನವಿ ಮಾಡಿದ್ದಾರೆ.

ಮನವಿಗೆ ಸ್ಪಂದಿಸಿದ ಸಚಿವ ರಾಮಲಿಂಗಾರೆಡ್ಡಿ ಅವರು, ರಾಜಗೋಪುರ ನಿರ್ಮಾಣಕ್ಕೆ ಪ್ರಸ್ತಾವನೆ ಸಲ್ಲಿಸಲು ಆಯುಕ್ತರಿಗೆ ಸೂಚಿಸಿದ್ದಾರಲ್ಲದೆ, ದೇವಾಲಯ ಅಭಿವೃದ್ಧಿಗೆ ಅಗತ್ಯ ನೆರವು, ಸಹಕಾರ ನೀಡುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ದೇವಾಲಯದ ವ್ಯವಸ್ಥಾಪನಾ ಸಮಿತಿ ಅಧ್ಯಕ್ಷಡಿ.ಪಿ.ನಾಗರಾಜ್ ಹಾಗು ನಿರ್ದೇಶಕರು ಹಾಜರಿದ್ದರು.

## ಸಂತ ಶ್ರೇಷ್ಠರ ತತ್ವ ಆದರ್ಶಗಳನ್ನು ಮೈಗೂಡಿಸಿಕೊಳ್ಳಿ

**ಆನೇಕಲ್:** ಮಹಾ ಯೋಗಿ ವೇಮನ ಮತ್ತು ಹೇಮರೆಡ್ಡಿ ಮಲ್ಲಮ್ಮ ಸೇರಿದಂತೆ ವಿವಿಧ ಸಂತ ಶ್ರೇಷ್ಠರ ಜಯೊಂತ್ಯೋತ್ಸವಗಳನ್ನು ಮಾಡಿದರೆ ಸಾಲದು ಬದಲಾಗಿ ಅವರ ತತ್ವ ಆದರ್ಶಗಳನ್ನು ಮೈಗೂಡಿಸಿಕೊಳ್ಳಬೇಕು ಎಂದು ಸಮಾಜ ಸೇವಕರಾದ ಕೆ.ಟಿ ಶ್ರೀನಿವಾಸ್ ರೆಡ್ಡಿ ತಿಳಿಸಿದರು.

ಅವರು ಸರ್ಜಾಪುರ ಸಮೀಪದ ಮುಗಳೂರು ಗ್ರಾ;ಪಂ;ವ್ಯಾಪ್ತಿ ಚಿಕ್ಕನಹಳ್ಳಿ-ಕಾಮನಹಳ್ಳಿ ಗ್ರಾಮದಲ್ಲಿ ರೆಡ್ಡಿ ಸಮಾಜದವರಿಂದ ಹಮ್ಮಿಕೊಂಡಿದ ತತ್ವಜ್ಞಾನಿ, ಮಹಾಯೋಗಿ ಶ್ರೀ ವೇಮನರ ಜಯಂತಿ ಮತ್ತು 2ನೇ ವರ್ಷದ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ವೇಮನ ಪದ್ಯಗಳನ್ನು ಶೇಖರಣೆ ಮಾಡಿ ಅದನ್ನು ಜನರಿಗೆ ತಿಳಿಸುವುವ ಕೆಲಸವನ್ನು ಯುವ ಸಮುದಾಯವು ಮಾಡಬೇಕಾಗಿದೆ. ವೇಮನರ ಕೇವಲ ರೆಡ್ಡಿ ಸಮುದಾಯಕ್ಕೆ ಸೀಮಿತವಲ್ಲ. ವೇಮನರ ತಮ್ಮ ಪದ್ಯಗಲಕ ಮೂಲಕ ಸಮಾಜದಲ್ಲಿರು ಅಂಕು ಡೊಂಕುಗಳನ್ನು ತಿದ್ದಿದರು. ಮನುಕುಲದ ಪ್ರಗತಿಗಾಗಿ ಶ್ರಮಿಸಿದರು ಎಂದರು.

ಯುವ ಮುಖಂಡರಾದ ನವೀನ್ ರೆಡ್ಡಿ ಮಾತನಾಡಿ, ಕಾಮನಗಳ್ಳಿ ಗ್ರಾಮದ ವೃತ್ತದಲ್ಲಿ ಮಹಾಯೋಗಿ ವೇಮನರ ಪ್ರತಿಮೆಯನ್ನು ಪ್ರತಿಷ್ಠಪಿಸಿ ವೇಮನ ವೃತ್ತ ಎಂಬಾ ಹೆಸರನ್ನು ಅಳವಾಡಿಸಿದ್ದು. ನಮ್ಮ ಕಾರ್ಯಗಳಿಗೆ ಸಮುದಾಯದ ನಾಯಕರು ಸದಾ ಬೆನ್ನೆಲುಬಾಗಿ ನಿಂತಿರುವುದು ಸಂತಸದಾಯಕವಾಗಿದೆ. ಮುಂದಿನ ದಿನಗಳಲ್ಲಿ ಇನ್ನಾಷ್ಟು ಜನೋಪಕಾರಿ ಕಾರ್ಯಕ್ರಮಗಳನ್ನು ರೂಪಿಸಿ ವೇಮನರ ಆಶಯಗಳನ್ನು ಇನ್ನಾಷ್ಟು ಪಸರಿಸಲು ಶ್ರಮಿಸುತ್ತೇವೆ ಎಂದರು.

ಸರ್ಜಾಪುರ ಪೋಲಿಸ್ ಠಾಣೆಯ ವೃತ್ತ ನೀರಿಕ್ಷಕರಾದ ಪಿ.ಜಿ ನವೀನ್ ಕುಮಾರ್ ಮತ್ತು ಜೆ.ಪಿ ನಗರ ಪೊಲೀಸ್ ಠಾಣೆಯ ವೃತ್ತ ನೀರಿಕ್ಷರಾದ ಹರೀಶ್ ರೆಡ್ಡಿ ರವರನ್ನು ಕಾಮನಹಳ್ಳಿ ರೆಡ್ಡಿ ಸಮಾಜದ ವತಿಯಿಂದ ಅಭಿನಂದಿಸಲಾಯಿತು.

ಕಾರ್ಯಕ್ರಮದಲ್ಲಿ ಮುಗಳೂರು ಗ್ರಾಮ ಪಂಚಾಯಿತಿ ಉಪಾಧ್ಯಕ್ಷರಾದ ಕೆ.ಪಿ ಮಂಜುನಾಥ್ ರೆಡ್ಡಿ, ಕೆ.ಪಿ ರವೀಂದ್ರ ರೆಡ್ಡಿ, ಕೆ.ಎನ್ ಪ್ರಕಾಶ್ ಬಾಬು, ಹರೀಶ್ ಬಾಬು, ಮುರಳಿ ರೆಡ್ಡಿ, ನವೀನ್ ರೆಡ್ಡಿ, ವೆಂಕಟೇಶ ರೆಡ್ಡಿ, ರವಿ, ಬದ್ರಿ, ಶಶಿಕುಮಾರ್, ನಾಗರಾಜ್ ರೆಡ್ಡಿ, ಜಿಗಳ ಬಾಬು, ಕೆ.ವಿ ಜನಾರ್ಧನ್ ರೆಡ್ಡಿ, ಬಿ.ಟಿ.ಎಂ ಶಶಿ ಕುಮಾರ್, ಸಂಜಯ್ ಹಾಗೂ ಮತ್ತಿತ್ತರರು ಹಾಜರಿದ್ದರು.



# ತಾಲ್ಲೂಕುಮಟ್ಟದ ಗ್ರಾಮೀಣ ಕ್ರೀಡಾಕೂಟ

**ಚಾಮರಾಜನಗರ:**ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಹನೂರು ತಾಲೂಕುಮಟ್ಟದ ಗ್ರಾಮೀಣ ಕ್ರೀಡಾಕೂಟವನ್ನು 23ರ ಬೆಳಿಗ್ಗೆ 10.30 ಗಂಟೆಗೆ ಹನೂರಿನ ಶ್ರೀ ಮಲೆಮಹದೇಶ್ವರ ತಾಲೂಕು ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಶಾಸಕರಾದ ಎಂ.ಆರ್ ಮಂಜುನಾಥ್ ಅವರು ಕಾರ್ಯಕ್ರಮ ಉದ್ಘಾಟಿಸಿ, ಅಧ್ಯಕ್ಷತೆ ವಹಿಸುವರು. ಹನೂರು ಪಟ್ಟಣ ಪಂಚಾಯಿತಿ ಅಧ್ಯಕ್ಷರಾದ ಮುಮ್ತಾಜ್ ಭಾನು, ಉಪಾಧ್ಯಕ್ಷರಾದ ಆರ್. ಆನಂದಕುಮಾರ್, ಸದಸ್ಯರಾದ ಪವಿತ್ರ ಪ್ರಸನ್ನಕುಮಾರ್, ತಹಶೀಲ್ದಾರ್ ಗುರುಪ್ರಸಾದ್, ಕ್ಷೇತ್ರ ಶಿಕ್ಷಣಾಧಿಕಾರಿ ಎನ್. ಗುರುಲಿಂಗಯ್ಯ, ತಾಲೂಕು ದೈಹಿಕ ಶಿಕ್ಷಣ ಪರಿವೀಕ್ಷಕರಾದ ಎಂ. ಮಹದೇವ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

# ಮಲೆ ಮಹದೇಶ್ವರಸ್ವಾಮಿ ದೇವಸ್ಥಾನದ ಹಣ ಎಣಿಕೆ

**ಚಾಮರಾಜನಗರ:** ಮಲೆ ಮಹದೇಶ್ವರ ಬೆಟ್ಟದ ಮಲೆ ಮಹದೇಶ್ವರಸ್ವಾಮಿ ದೇವಸ್ಥಾನದ ಗೋಲಕಗಳ ಎಣಿಕೆ ಕಾರ್ಯವನ್ನು ಬೆಟ್ಟದ ಬಸ್ ನಿಲ್ದಾಣದಲ್ಲಿರುವ ವಾಣಿಜ್ಯ ಸಂಕೀರ್ಣ ಕಟ್ಟಡದ ಮೊದಲ ಮಹಡಿಯ ವಿಶ್ರಾಂತಿ ಗೃಹದಲ್ಲಿ ಜನವರಿ 23ರಂದು ಬೆಳಿಗ್ಗೆ ಸೂಕ್ತ ಪೊಲೀಸ್ ಬಂದೋಬಸ್ತೊಂದಿಗೆ ನಡೆಸಲಾಗುವುದು ಎಂದು ಮಲೈ ಮಹದೇಶ್ವರಸ್ವಾಮಿ ಕ್ಷೇತ್ರಾಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದೇಶಿ ವ್ಯಾಸಂಗ ವೇತನಕ್ಕಾಗಿ ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

**ಚಾಮರಾಜನಗರ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಡಿ. ದೇವರಾಜ ಅರಸು ವಿದೇಶಿ ವ್ಯಾಸಂಗ ವೇತನಕ್ಕಾಗಿ 2024-25ನೇ ಸಾಲಿನ ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಸ್ನಾತಕೋತ್ತರ ಪದವಿ ಹಾಗೂ ಪಿಹೆಚ್‌ಡಿ ಮಾಡಲು ಹಿಂದುಳಿದ ವರ್ಗಗಳ ಪ್ರವರ್ಗ 1, 2ಎ, 3ಎ ಹಾಗೂ 3ಬಿ ವರ್ಗಗಳಿಗೆ ಸೇರಿದ ಅರ್ಹ ವಿದ್ಯಾರ್ಥಿಗಳು ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸುವ ಅವಧಿಯನ್ನು ಫೆಬ್ರವರಿ 5ರವರೆಗೆ ವಿಸ್ತರಿಸಲಾಗಿದೆ.

ಹೆಚ್ಚಿನ ವಿವರಗಳಿಗೆ ಇಲಾಖೆಯ ವೆಬ್ ಸೈಟ್ http://bcwd.karnataka.gov.in/ ವೀಕ್ಷಿಸಬಹುದಾಗಿದೆ ಅಥವಾ ಮೊ.ಸಂ 8050770004 ಸಂಪರ್ಕಿಸುವಂತೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಾಶ್ವತ ಕಲಿಕೆಗೆ ಶೈಕ್ಷಣಿಕ ಪ್ರವಾಸಗಳು ಸಹಕಾರಿ: ನರೇಂದ್ರ

**ಶಿಡ್ಲಘಟ್ಟ:** ಶಾಶ್ವತವಾದ ಕಲಿಕೆ ಉಂಟುಮಾಡಲು ಶೈಕ್ಷಣಿಕ ಪ್ರವಾಸಗಳು ಸಹಕಾರಿಯಾಗಲಿದ್ದು ವಿದ್ಯಾರ್ಥಿಗಳು ಸದುಪಯೋಗಪಡಿಸಬೇಕು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಎ.ನರೇಂದ್ರಕುಮಾರ್ ತಿಳಿಸಿದ್ದಾರೆ

ನಗರದ ತಾಲ್ಲೂಕು ಕಚೇರಿ ಮುಂಭಾಗದಲ್ಲಿ ಶಾಲಾಶಿಕ್ಷಣ ಇಲಾಖೆಯು ಕರ್ನಾಟಕ ಪ್ರವಾಸೋದ್ಯಮ ಇಲಾಖೆಯ ಸಹಯೋಗದಲ್ಲಿ ಪ್ರೌಢಶಾಲಾ ಎಸ್.ಸಿ.,ಎಸ್.ಟಿ. ವಿದ್ಯಾರ್ಥಿಗಳಿಗಾಗಿ ಹಮ್ಮಿಕೊಳ್ಳಲಾಗಿದ್ದ ಐದು ದಿನಗಳ ಕರ್ನಾಟಕದರ್ಶನ ಶೈಕ್ಷಣಿಕ ಪ್ರವಾಸ ಕಾರ್ಯಕ್ರಮಕ್ಕೆ ಹಸಿರು ನಿಶಾನೆ ತೋರಿಸಿ ಅವರು ಮಾತನಾಡಿದರು.

ವಾಸ್ತವ ಮತ್ತು ತಾತ್ವಿಕಾಂಶಗಳನ್ನು ಖುದ್ದು ವೀಕ್ಷಿಸುವ ಮೂಲಕ ಒರೆಗಚ್ಚುವ ಅವಕಾಶ ಲಭ್ಯವಾಗುವುದು ಆ ಮೂಲಕ ಸಾದೃಶ್ಯವಾಗಿ ಪಠ್ಯ ವಿಷಯಗಳನ್ನು ಸ್ಥಳ ವೀಕ್ಷಣೆಯೊಂದಿಗೆ ಹೋಲಿಕೆಮಾಡುವ ಕಲಿಕಾ ಚಟುವಟಿಕೆಯಂತೆ ಪ್ರವಾಸವು ಪ್ರಮುಖ ಪಾತ್ರವಹಿಸುತ್ತದೆ ಎಂದು ಹೇಳಿದರು.

ಪರಿಸರ ಪ್ರೇಮ, ಇತಿಹಾಸ, ವಾಸ್ತುಶಿಲ್ಪಗಳು, ಪ್ರಕೃತಿಯಲ್ಲಿನ ವಿಸ್ಮಯಗಳು, ವೈವಿಧ್ಯಮಯ ಜನ ಮತ್ತು ಸಂಸ್ಕೃತಿಗಳು, ಪರಂಪರೆ, ಪ್ರಾಣಿಪಕ್ಷಿಗಳಲ್ಲಿನ ವೈವಿಧ್ಯತೆಯನ್ನು ಅನುಭವಾತ್ಮಕವಾಗಿ ವಿದ್ಯಾರ್ಥಿಗಳು




ಪಡೆದು ಜ್ಞಾನವಿಕಾಸ ಪಡೆದುಕೊಳ್ಳಬಹುದಾಗಿದೆ ಎಂದರು. ನಗರಸಭ ಅಧ್ಯಕ್ಷ ವೆಂಕಟಸ್ವಾಮಿ ಮಾತನಾಡಿ,ಸರ್ಕಾರಿ ಶಾಲೆಗಳಲ್ಲಿ ಅನೇಕ ಸೌಲಭ್ಯಗಳನ್ನು ಕಲ್ಪಿಸಿದ್ದು ಗ್ರಾಮೀಣ ಬಡಮಕ್ಕಳ ಕಲಿಕೆ ಮತ್ತು ಜ್ಞಾನ ಗಳಿಕೆಗೆ ಶೈಕ್ಷಣಿಕ ಪ್ರವಾಸವು ಒಂದಾಗಿದೆ ಸರ್ಕಾರದ ಸವಲತ್ತುಗಳನ್ನು ಉತ್ತಮವಾಗಿ ಬಳಸಿಕೊಳ್ಳಬೇಕು ಎಂದರು.

ತಾಲ್ಲೂಕು ಪ್ರೌಢಶಾಲಾ ಸಹಶಿಕ್ಷಕರ ಸಂಘದ ಅಧ್ಯಕ್ಷ ಎಲ್.ವಿ.ವೆಂಕಟರೆಡ್ಡಿ ಮಾತನಾಡಿ, ಪ್ರವಾಸಗಳ ಮೂಲಕ ಮಕ್ಕಳು ಸಹಬಾಳ್ವೆ, ಪರಸ್ಪರಸ್ನೇಹ, ಪ್ರೀತಿ, ಸಹಕಾರ, ಸವರ್ುನ್ಯಯುತನಡವಳಿಕೆಗಳು, ಜವಾಬ್ದಾರಿನಿರ್ವಹಣೆ, ನಾಯಕತ್ವ ಗುಣಗಳನ್ನು ಬೆಳೆಸಿಕೊಳ್ಳಬಹುದಾಗಿದೆ ಎಂದರು.

ಪ್ರೌಢಶಾಲಾ ಸಹಶಿಕ್ಷಕರ ಸಂಘದ ಕಾರ್ಯದರ್ಶಿ ಎಚ್.ಎಸ್.ರುದ್ರೇಶಮೂರ್ತಿ ಮಾತನಾಡಿ,ಪಠ್ಯ ಮತ್ತು ಪಠ್ಯೇತರ ಅನೇಕ ಅಂಶಗಳ ಪರಿಕಲ್ಪನೆಗಳನ್ನು ನೋಡಿ ತಿಳಿದು ಸ್ಪಷ್ಟವಾಗಿ ಕಲಿಯುವುದರಿಂದ ಶಾಶ್ವತ ಕಲಿಕೆಯಾಗುತ್ತದೆ ಎಂದರು. ಶಿಕ್ಷಣ ಸಂಯೋಜಕ ಯು.ವೈ.ಮಂಜುನಾಥ್ ಮಾತನಾಡಿ

ತಾಲ್ಲೂಕಿನ ವಿವಿಧ ಸರ್ಕಾರಿ ಉನ್ನತೀಕರಿಸಿದ ಹಿರಿಯ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿನ ಸುಮಾರು 100 ವಿದ್ಯಾರ್ಥಿಗಳನ್ನು ಪ್ರವಾಸೋದ್ಯಮ ಇಲಾಖೆಯ ಸಹಯೋಗದಲ್ಲಿ ಎರಡು ಕೆಎಸ್‌ಆರ್‌ಟಿಸಿ ಬಸ್‌ಗಳಲ್ಲಿ ಚಿತ್ರದುರ್ಗ, ಹಂಪಿ, ಬಿಜಾಪುರ, ಬಾದಾಮಿ, ಐಹೊಳೆ, ಪಟ್ಟದಕಲ್ಲು ಮತ್ತಿತರ ಸ್ಥಳಗಳಿಗೆ ಪ್ರವಾಸ ಕರೆದುಕೊಂಡು ಹೋಗಲಾಗುತ್ತಿದೆ ಪ್ರವಾಸದಲ್ಲಿ 6 ಮಂದಿ ಗೈಡ್ ಶಿಕ್ಷಕರು ಪಾಲ್ಗೊಳ್ಳಲಿದ್ದಾರೆ ಎಂದು ವಿವರಿಸಿದರು.

ಈ ವೇಳೆ ಪ್ರವಾಸಕ್ಕೆ ತೆರಳುವ ವಿದ್ಯಾರ್ಥಿಗಳಿಗೆ ಟೀ ಶರ್ಟ್, ಕ್ಯಾಪ್,ನಿತ್ಯ ಬಳಕೆಯ ವಸ್ತುಗಳು, ರೂಟ್ ಮ್ಯಾಪ್, ಲೇಖನ ಸಾಮಗ್ರಿಗಳನ್ನು ಒಳಗೊಂಡ ಕಿಟ್‌ಗಳನ್ನು ವಿತರಿಸಲಾಯಿತು. ಈ ಸಂದರ್ಭದಲ್ಲಿ ನವೀನ್, ನಂದಕಿಶೋರ್, ಬಿಆರ್‌ಸಿ ಸಮನ್ವಯಾಧಿಕಾರಿ ಲಕ್ಷ್ಮೀನಾರಾಯಣ್, ಪ್ರವಾಸೋದ್ಯಮ ಇಲಾಖೆಯ ಜಿಲ್ಲಾ ಉಸ್ತುವಾರಿ ಪ್ರವಾಸಿ ಮಾರ್ಗದರ್ಶಿ ಆರ್.ವೆಂಕಟೇಶ್, ಎನ್.ಪಿ.ಎಸ್. ನೌಕರರ ಸಂಘದ ಗಜೇಂದ್ರ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಸರಸ್ವತಮ್ಮ, ಸಿಆರ್‌ಪಿ ಬಾಬು ಮತ್ತಿತರರು ಹಾಜರಿದ್ದರು.

## ನೂತನ ಜಿಲ್ಲಾಧಿಕಾರಿಗಳಿಗೆ ಸನ್ಮಾನ



**ಮಾಲೂರು:** ಕೋಲಾರ ಜಿಲ್ಲೆಯ ನೂತನ ಜಿಲ್ಲಾಧಿಕಾರಿಗಳಾದ ಎಂ.ಆರ್.ರವಿ ಅವರಿಗೆ ನಮ್ಮ ಕರ್ನಾಟಕ ಸೇನೆ ರಾಜ್ಯ ಪ್ರಧಾನ ಕಾರ್ಯದರ್ಶಿ ಚಾಕನಹಳ್ಳಿ ನಾಗರಾಜ್ ರವರ ನೇತೃತ್ವದಲ್ಲಿ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ರಾಜ್ಯ ಉಪಾಧ್ಯಕ್ಷರು ಶ್ರೀನಿವಾಸ್, ರಾಜ್ಯ ಸಂಚಾಲಕ ಕೋಡೂರು ಗೋಪಲ್, ಜಿಲ್ಲಾಧ್ಯಕ್ಷ ಎಸ್ ಎಂ ರಾಜು, ಜಿಲ್ಲಾ ಮಹಿಳಾ ಅಧ್ಯಕ್ಷೆ ಶ್ರೀಮತಿ ಕುಮಾರಿ, ರಾಜ್ಯ ಕಾರ್ಯದರ್ಶಿ ಶಾಂತಮ್ಮ, ಕೋಲಾರ ತಾಲ್ಲೂಕು ಅಧ್ಯಕ್ಷರು ನವೀನ್, ಜಿಲ್ಲಾ ಯುವ ಘಟಕ ಅಂಜಿ ಕನ್ನಡಿಗ, ಶಾಮ್, ಸುನೀಲ್, ಅವಿನಾಶ್, ಇನ್ನೂ ಮುಂತಾದವರು ಭಾಗವಹಿಸಿದ್ದರು.

# ನೂತನ ಪದಾಧಿಕಾರಿಗಳ ಅಭಿನಂದನಾ ಸಮಾರಂಭ

**ಕೋಲಾರ:**ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಎಸ್‌ಸಿ-ಎಸ್‌ಟಿ ಶಿಕ್ಷಕರ ಸಂಘ ಜಿಲ್ಲಾ ಶಾಖೆ, ಕೋಲಾರ ವತಿಯಿಂದ ಕೃಷಿ ಇಲಾಖೆ ಸಭಾಂಗಣದಲ್ಲಿ ಜರುಗಿದ ಕೋಲಾರ ಜಿಲ್ಲಾ ಸರ್ಕಾರಿ ನೌಕರರ ಸಂಘದ ನೂತನ ಪದಾಧಿಕಾರಿಗಳ ಅಭಿನಂದನಾ ಸಮಾರಂಭವನ್ನು ಸಂಘದ ರಾಜ್ಯಾಧ್ಯಕ್ಷರಾದ ಟಿ. ಸೊಣ್ಣಪ್ಪ ರವರು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಇಲಾಖೆಯಲ್ಲಿ ಹಲವು ಸಮಸ್ಯೆಗಳಿವೆ ಮುಖ್ಯ ಶಿಕ್ಷಕರು ಪ್ರತಿನಿತ್ಯ ಒತ್ತಡದಲ್ಲಿ ಕರ್ತವ್ಯವನ್ನು ನಿರ್ವಹಿಸುತ್ತಿದ್ದಾರೆ. ಸರ್ಕಾರಿ ನೌಕರರ ಸಂಘ ಮಾತ್ರ ಸಂಘವಾಗಿದೆ. ಪ್ರಾಥಮಿಕ ಶಾಲಾ ಶಿಕ್ಷಕರ ಕುಂದು ಕೊರತೆಗಳಿಗೆ ಜಿಲ್ಲಾ ಮತ್ತು ರಾಜ್ಯ ಸರ್ಕಾರಿ ನೌಕರರ ಸಂಘ ನೆರವಿಗೆ ಬರಬೇಕು. ಬಡ್ತಿ, ವರ್ಗಾವಣೆ, ನಿವೃತ್ತಿ, ನಿಯೋಜನೆ, ಸಿ ಅಂಡ್ ಆರ್ ರೂಲ್ಸ್ ಸಮಸ್ಯೆಗಳು, ಪಿ.ಎಸ್.ಟಿ ಮತ್ತು ಜಿ.ಪಿ.ಟಿ. ಶಿಕ್ಷಕರ ಸಮಸ್ಯೆಗಳಿಗೆ ರಾಜ್ಯ ಸರ್ಕಾರಿ ನೌಕರರ ಸಂಘ ಸರ್ಕಾರದ ಜೊತೆ ಒತ್ತಡ ತಂದು ಸಮಸ್ಯೆಗಳನ್ನು ಪರಿಹರಿಸಲು ಸಹಕರಿಸಬೇಕು. ಎಸ್.ಸಿ. /ಎಸ್.ಟಿ. ಶಿಕ್ಷಕರ ಸಂಘ ಅಧಿಕೃತ ಮಾನ್ಯತೆ ಪಡೆದ ಸಂಘಟನೆಯಾಗಿದೆ. ಕೋಲಾರ ಜಿಲ್ಲೆಯಲ್ಲಿ ಪರಿಶಿಷ್ಠ ಜಾತಿ ವರ್ಗದ




ಶಿಕ್ಷಕರು ಹೆಚ್ಚಿನ ಸಂಖ್ಯೆಯಲ್ಲಿ ಇದ್ದು, ಸರ್ಕಾರಿ ನೌಕರರ ಸಂಘದ ಎಲ್ಲಾ ಕಾರ್ಯಕ್ರಮಗಳಲ್ಲಿ ನಮ್ಮ ಸಂಘದ ಪದಾಧಿಕಾರಿಗಳನ್ನು ಮಾನ್ಯತೆ ಮಾಡಿ ಪರಿಗಣಿಸಬೇಕು ಎಂದರು.

ಮುಖ್ಯ ಶಿಕ್ಷಕರು ಪ್ರತಿ ದಿನ ಅಕ್ಷರ ದಾಸೋಹ ನಿರ್ವಹಣೆ, ಮೊಟ್ಟೆ ವಿತರಣೆ, ಆನ್ ಲೈನ್ ಕಾರ್ಯ, ಇಲಾಖಾ ಮಾಹಿತಿಗಳ ನಿರ್ವಹಣೆ, ತರಬೇತಿಗಳು ಶಾಲಾ ಆಡಳಿತ ಕಾರ್ಯಗಳ ನಿರ್ವಹಣೆ, ದಾಖಲೀಕರಣ, ಇದರ ಜೊತೆಯಲ್ಲಿ ಪಾಠ ಪ್ರವಚನಗಳನ್ನು ಮಾಡುವುದು ತುಂಬಾ ಕಷ್ಟಕರವಾಗಿದೆ. ಸರ್ಕಾರಿ ಶಾಲೆಗಳ ಉಳಿವಿಗೆ ಮುಖ್ಯ ಶಿಕ್ಷಕರ ಕಾರ್ಯದ ಒತ್ತಡವನ್ನು ರಾಜ್ಯ ಸರ್ಕಾರಿ ನೌಕರರ ಸಂಘ ಮತ್ತು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಜೊತೆಗೂಡಿ ಸರ್ಕಾರದ ಮೇಲೆ ಒತ್ತಡ ತಂದು ಕಾರ್ಯಭಾರವನ್ನು ಕಡಿಮೆ ಮಾಡಬೇಕು ಎಂದರು.

ಕೋಲಾರ ಜಿಲ್ಲೆಯ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಪರಿಶಿಷ್ಠ ಜಾತಿ ಸಮುದಾಯದ ಅಜಯ್ ಕುಮಾರ್.ಎ. ರವರನ್ನು ಜಿಲ್ಲಾಧ್ಯಕ್ಷರಾಗಿ ಎಲ್ಲಾ ಚುನಾಯಿತ ಪ್ರತಿನಿಧಿಗಳು ಬಹುಮತದಿಂದ ಆಯ್ಕೆ ಮಾಡಿದ್ದು, ಎಲ್ಲಾ ನೂತನ ಪ್ರತಿನಿಧಿಗಳಿಗೆ ಎಸ್. । ಎಸ್.ಟಿ. ಶಿಕ್ಷಕರ ಸಂಘದ ವತಿಯಿಂದ ತುಂಬು ಹೃದಯದ ಅಭಿನಂದನೆಗಳನ್ನು ಸಲ್ಲಿಸಿದರು. ನೌಕರರ ಸಂಘದ ಪದಾಧಿಕಾರಿಗಳು ಎಸ್.ಸಿ/ ಎಸ್.ಟಿ. ಶಿಕ್ಷಕರ ಸಮಸ್ಯೆಗಳಿಗೆ ಉತ್ತಮ ರೀತಿಯಲ್ಲಿ ಸ್ಪಂದಿಸಿ ಎಲ್ಲಾ ರೀತಿಯ ಸಹಕಾರ ನೀಡಬೇಕೆಂದು ಶುಭ ಹಾರೈಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕೋಲಾರ ಜಿಲ್ಲಾಧ್ಯಕ್ಷ ಎನ್. ಮುನಿಯಪ್ಪ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಸರ್ಕಾರಿ ನೌಕರರ ಸಂಘದ ನೂತನ ಜಿಲ್ಲಾ ಅಧ್ಯಕ್ಷ ಎ.ಅಜಯ್ ಕುಮಾರ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸತೀಶ್ ಕುಮಾರ್, ಜಿಲ್ಲಾ ಖಜಾಂಚಿ ಮುರಳಿ ಮೋಹನ್, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ನಿಕಟ ಪೂರ್ವ ಜಿಲ್ಲಾಧ್ಯಕ್ಷರು ಹಾಲಿ ನೌಕರರ ಸಂಘದ ಸದಸ್ಯರು ಆದ ಆರ್.ಅನಿಲ್ ಕುಮಾರ್, ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಕೆ.ಟಿ. ನಾಗರಾಜ, ತಾಲ್ಲೂಕು ಅಕ್ಷರ ದಾಸೋಹ ಸಹಾಯಕ ನಿರ್ದೇಶಕರಾದ ಸುಬ್ರಮಣಿ, ಎನ್.ಜಿ.ಓ. ನಿರ್ದೇಶಕರಾದ ಹೇಮಂತ್ ಕುಮಾರ್, ಮಾಲೂರು ತಾಲ್ಲೂಕು ಬಿ.ಆರ್.ಸಿ. ಸಮನ್ವಯಾಧಿಕಾರಿ ಟಿ.ವೆಂಕಟಸ್ವಾಮಿ, ಕಂದಾಯ ಇಲಾಖೆ ನೌಕರರ ಜಿಲ್ಲಾಧ್ಯಕ್ಷ ರಾಜೇಂದ್ರ ಪ್ರಸಾದ್ ಉಪಸ್ಥಿತರಿದ್ದರು.

# ಉಪ್ಪಿನ ಸತ್ಯಾಗ್ರಹವನ್ನೇ ತಿರುಚಿದ ಕಾಂಗ್ರೆಸ್; ಸಚಿವರ ನೇರ ಆರೋಪ

**ನವದೆಹಲಿ:** ನಕಲಿ ಗಾಂಧಿಗಳ ಪಕ್ಷ ಈಗ ಬೆಳಗಾವಿಯಲ್ಲಿ ಅಸಲಿ ಗಾಂಧಿಯವರ ಹಾಡಿನಲ್ಲಿ ಪುಕ್ಕಟೆ ಪ್ರಚಾರ ಪಡೆಯುತ್ತಿದೆ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಲೇವಡಿ ಮಾಡಿದರು.

ನವದೆಹಲಿಯಲ್ಲಿ ಮಾಧ್ಯಮಗಳು ಕೇಳಿದ ಪ್ರಶ್ನೆಗಳಿಗೆ ಉತ್ತರಿಸಿದ ಸಚಿವರು; ರಾಜ್ಯದಲ್ಲಿ ಅತ್ಯಾಚಾರ, ದರೋಡೆಗಳು ನಡೆಯುತ್ತಿವೆ. ಅಪರಾಧಿ ಚಟುವಟಿಕೆಗಳು ಮಿತಿ ಮೀರಿವೆ. ಕಾನೂನು ಸುವ್ಯವಸ್ಥೆ ಹದಗೆಟ್ಟು ಜನರಿಗೆ ಭದ್ರತೆ ಇಲ್ಲದಾಗಿದೆ ಎಂದು ಆರೋಪಿಸಿದರು. ಸರಕಾರದಲ್ಲಿ ಒಬ್ಬ ತಹಶಿಲ್ದಾರ್, ಉಪ ವಿಭಾಗಾಧಿಕಾರಿಯನ್ನು ನಿಯಂತ್ರಣ ಮಾಡುವುದು ಇವರಿಗೆ ಆಗುತ್ತಿಲ್ಲ. ಕಾನೂನು ಸುವ್ಯವಸ್ಥೆ ಮೇಲೆ ನಿಯಂತ್ರಣ ಇಲ್ಲ. ಕಾಂಗ್ರೆಸ್ಸಿನವರು ಕರ್ನಾಟಕವನ್ನು ಸಂಪೂರ್ಣ ಮುಗಿಸಲಿಕ್ಕೇ ಬಂದಿದ್ದಾರೆ. ಇದೇನಾ ಗಾಂಧಿ ತತ್ವದ ಆಡಳಿತ ಸಿದ್ದರಾಮಯ್ಯನವರೇ..? ಎಂದು ಕೇಂದ್ರ ಸಚಿವರು ಗುಡುಗಿದರು.

ರಾಜ್ಯದಲ್ಲಿ ಗರ್ಭಿಣಿಯರ ಸಾರಾಣಿ ಸಾವಿನ ಪ್ರಕರಣಗಳ ವಾಸ್ತವಾಂಶವನ್ನು ಜನರ ಮುಂದೆ ಇಟ್ಟಿಲ್ಲ, ಯಾಕೆ ಯಾಕೆ ಅಷ್ಟು ಜನ ತಾಯಂದಿರು, ನವಜಾತ ಶಿಶುಗಳು ಬಲಿಯಾದದ್ದು? ಇಲ್ಲಿಯೂ 40% ಕಮೀಶನ್ ಎನ್ನುವ ಮಾತು ಕೇಳಿ ಬರುತ್ತಿದೆ. ರಾಜ್ಯದ ಜನರ ತೆರಿಗೆ ಹಣವನ್ನು ಯಾವ ರೀತಿ ಬಳಕೆ ಮಾಡುತ್ತಿದ್ದೀರಿ ನಿಮಗೆ ಆತ್ಮಸಾಕ್ಷಿ ಎನ್ನುವುದು ಇದೆಯಾ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

ಇ– ಖಾತಾ ಹೆಸರಲ್ಲೂ ಸರಕಾರ ಲೂಟಿ ಹೊಡೆಯುತ್ತಿದೆ. ರೇರಾ ಬಗ್ಗೆಯೂ ಜನ ಅನುಮಾನದಿಂದ ಮಾತಾಡುತ್ತಿದ್ದಾರೆ. ಈಗಿನ ಕಾಂಗ್ರೆಸ್ ಪಕ್ಷಕ್ಕೆ ಮಹಾತ್ಮ ಗಾಂಧೀಜಿ ಅವರ ಹೆಸರು ಹೇಜುವ ಯೋಗ್ಯತೆ ಇಲ್ಲ. ಈಗಿನ ಕಾಂಗ್ರೆಸ್ಸಿಗೂ ಸ್ವಾತಂತ್ರ್ಯಪೂರ್ವ ಕಾಂಗ್ರೆಸ್ಸಿಗರು ಪೂರ್ವ ಕಾಂಗ್ರೆಸ್ ಬೇರೆ ಇದೆ. ಇವರು ಮೊನ್ನೆ ಬೆಳಗಾವಿಯಲ್ಲಿ ನಡೆದು ಅರ್ಧಕ್ಕೆ ಅಂತ್ಯವಾಗಿದ್ದ ಅಧಿವೇಶನದ ಜಾಹೀರಾತಿನಲ್ಲಿ ಭಾರತದ ಕಳಸವಾದ



ಜಮ್ಮು– ಕಾಶ್ಮೀರದ ಭೂಪಟವೇ ಇರಲಿಲ್ಲ. ಇಂಥ ಇವರು ದೇಶ ಜೋಡಿಸುವವರಾ? ಕಾಂಗ್ರೆಸ್ ಪಕ್ಷಕ್ಕೆ ಅಂತಿಮವಾದ ಚರಮಗೀತೆ ಕರ್ನಾಟಕದಲ್ಲಿ ಆಗುತ್ತದೆ, ನೋಡುತ್ತೀರಿ ಎಂದು ಸಚಿವರು ಕಿಡಿಕಾರಿದರು.

ಹಿಂದಿನ ಸರಕಾರದ ಅವಧಿಯಲ್ಲಿ ಅತ್ಯಾಚಾರ ಪ್ರಕರಣಗಳು ಆಗಿಯೇ ಇರಲಿಲ್ಲವಾ ಎಂದು ಸಿಎಂ ಸಿದ್ದರಾಮಯ್ಯ ಅವರು ನೀಡಿರುವ ಹೇಳಿಕೆ ಹೊಣೆಗೇಡಿತನದಿಂದ ಕೂಡಿದೆ. ಹಿಂದೆ ಅತ್ಯಾಚಾರ ಪ್ರಕರಣಗಳು ನಡೆದಿವೆ, ಈಗಲೂ ನಡೆಯಲಿ ಎನ್ನುವುದೇ ಅವರ ಭಾವನೆಯೇ? ಹಿಂದೆ ಆಗಿರುವ ಕೆಟ್ಟದ್ದನ್ನು ಸರಿಪಡಿಸುವುದು ಮುಖ್ಯವೇ ಹೊರತು ತಮ್ಮ ವೈಫಲ್ಯ ಮುಚ್ಚಿಕೊಳ್ಳುವುದಲ್ಲ. ಸಿಎಂ ಅಪರಾಧ ನಿಯಂತ್ರಣ ಮಾಡುವುದು ಬಿಟ್ಟು ಸಬೂಬು ಹೇಳುತ್ತಿದ್ದಾರೆ. ಇವರು ಎರಡನೇ ಬಾರಿ ಸಿಎಂ ಆಗಿದ್ದಾರೆ. ಗ್ಯಾಂಗ್ ರೇಪ್ ಪ್ರಕರಣಗಳ ಜತೆಗೆ ಕಾನೂನು ಸುವ್ಯವಸ್ಥೆ ಏನಾಗಿದೆ? ಆಡಳಿತ ಎಷ್ಟರ ಮಟ್ಟಿಗೆ ಕುಸಿದಿದೆ ಎಂದು ಹೇಳಲು ಸಾಧ್ಯವೇ ಇಲ್ಲ ಎಂದು ಅವರು ಬೇಸರ ವ್ಯಕ್ತಪಡಿಸಿದರು.

ಗಾಂಧಿ ಹೆಸರು ಹೈಜಾಕ್ ಮಾಡಿದ್ದಾರೆ

ಬೆಳಗಾವಿ ಕಾಂಗ್ರೆಸ್ ಸಮಾವೇಶ ವಿಚಾರಕ್ಕೆ ಮಾತನಾಡಿದ ಕೇಂದ್ರ ಸಚಿವರು; ಬಾಪು, ಸಂವಿಧಾನ, ಅಂಬೇಡ್ಕರ್ ಬಗ್ಗೆ ಕಾಂಗ್ರೆಸ್ ಈಗ ನೆನಪು ಮಾಡಿಕೊಳ್ಳುತ್ತಿರುವುದು ಹಾಸ್ಯಾಸ್ಪದ. ಇವರು ಏನು ಸಾಧನೆ ಮಾಡಿದ್ದಾರೆ ಗಾಂಧಿ ಅವರ ಹೆಸರು ಹೈಜಾಕ್ ಮಾಡಿದ್ದಾರೆ. ಗಾಂಧಿ ಕುಟುಂಬ ಎಂದರೆ ಮಹಾತ್ಮಾ ಗಾಂಧಿ ಕುಟುಂಬ ಅಲ್ಲ, ಇಂದಿರಾ ಗಾಂಧಿ ಅವರು ಬಂದ ಮೇಲೆ ಗಾಂಧಿ ಹೆಸರನ್ನು ಹೈಜಾಕ್ ಮಾಡಿದ್ದಾರೆ. ಈಗ ಇರುವವರು ಯಾರೂ ಗಾಂಧಿಗಳು ಅಲ್ಲ ಎಂದು ಸಚಿವರು ಕಿಡಿಕಾರಿದರು.

ದೇಶಕ್ಕೆ ಪ್ರಧಾನಿ ಮೋದಿ ಅವರ ಕೊಡುಗೆ ದೊಡ್ಡದು

ನಮ್ಮ ಸಂವಿಧಾನಕ್ಕೆ ಯಾರಿಂದ ಅಪಚಾರ ಆಗಿದೆ ಎನ್ನುವುದು ದೇಶಕ್ಕೆ ಗೊತ್ತಿದೆ. ಅಂಬೇಡ್ಕರ್ ಅವರಿಗೆ ಕಾಂಗ್ರೆಸ್ ಎಷ್ಟು ಹಿಂದೆ ಕೊಟ್ಟಿದೆ ಎನ್ನುವುದಕ್ಕೆ ಸುದೀರ್ಘ ಇತಿಹಾಸವಿದೆ. ಇವತ್ತು ನರೇಂದ್ರ ಮೋದಿ ಅವರ ಸರಕಾರ ಅಂಬೇಡ್ಕರ್ ಅವರ ಹೆಸರು ಚಿರಸ್ಥಾಯಿ ಆಗುವ ರೀತಿಯಲ್ಲಿ ಕೆಲಸ ಮಾಡುತ್ತಿದೆ ಎಂದು ಅವರು ಹೇಳಿದರು.

**ಗಾಂಧೀಜಿಗೆ ಜಾಹೀರಾತು ಮೂಲಕ ಅಪಚಾರ:** ಕಾಂಗ್ರೆಸ್ ಪಕ್ಷ ಮಹಾತ್ಮ ಗಾಂಧೀಜಿ ಮತ್ತು ಅವರ ನೇತೃತ್ವದಲ್ಲಿ ನಡೆದ ಐತಿಹಾಸಿಕ ಉಪ್ಪಿನ ಸತ್ಯಾಗ್ರಹಕ್ಕೆ ಅಪಚಾರ ಎಸಗಿದೆ. ಸತ್ಯಾಗ್ರಹದಲ್ಲಿ ಮಹಾತ್ಮರನ್ನು ಹಿಂಬಾಲಿಸಿದ್ದ ಮಹಾನ್ ಸ್ವಾತಂತ್ರ್ಯ ಹೋರಾಟಗಾರ ಚಿತ್ರಗಳನ್ನು ತೆಗೆದು, ಆ ಚಿತ್ರವನ್ನು ತಿರುಚಿದೆ. ಮಹಾತ್ಮರ ಹಿಂದೆ ಸಿಎಂ, ಡಿಸಿಎಂ ಅವರು ಸತ್ಯಾಗ್ರಹದಲ್ಲಿ ಭಾಗಿ ಆಗಿದ್ದರು ಎನ್ನುವಂತೆ ತಿರುಚಿ ಪತ್ರಿಕೆಗಳಿಗೆ ಜಾಹೀರಾತು ನೀಡಲಾಗಿದೆ. ಇತಿಹಾಸವನ್ನು ಕಾಂಗ್ರೆಸ್ ಹೇಗೆ ತಿರುಚಿದೆ ಎನ್ನುವುದಕ್ಕೆ ಇದೇ ಸಾಕ್ಷಿ ಎಂದು ಕುಮಾರಸ್ವಾಮಿ ಅವರು ಆಕ್ರೋಶ ವ್ಯಕ್ತಪಡಿಸಿದರು.

ಇವರು ಕೊಟ್ಟಿರುವ ಜಾಹೀರಾತಿನಂತೆ ಕಾಂಗ್ರೆಸ್ ನವರು ಯಾವ ಗಾಂಧಿ ತತ್ವ ಅನುಸರಿಸುತ್ತಿದ್ದಾರೆ ಯಾವ, ಯಾರ ಆದರ್ಶ ಪಾಲನೆ ಮಾಡಲಾಗುತ್ತಿದ್ದಾರೆ ಯಾವ ಗಾಂಧಿ ತತ್ವದ ಮೇಲೆ ಕರ್ನಾಟಕದಲ್ಲಿ ಆಡಳಿತ ನಡೆಯುತ್ತಿದೆ ರಾಜ್ಯದಲ್ಲಿ ಆಡಳಿತವೇ ಕುಸಿದಿದೆ. ವಾಲ್ಮೀಕಿ ನಿಗಮ ಹಗರಣ, ಮೂಡಾ ಹಗರಣ.. ಎಷ್ಟು ಹಗರಣಗಳ ಪಟ್ಟಿ ಬೇಕು ಇದಾ ಆಡಳಿತ ಎಂದು ಅವರು ಆರೋಪಿಸಿದರು.


## ವಿದೇಶಾಂಗ ಮಂತ್ರಿಗಳ ಜೊತೆ ಜೈಶಂಕರ್ ಮಾತುಕತೆ

**ವಾಷಿಂಗ್ಟನ್:** ಅಮೆರಿಕದ ನೂತನ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಪದಗ್ರಹಣ ಕಾರ್ಯಕ್ರಮಕ್ಕೆ ತೆರಳಿರುವ ಭಾರತದ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅವರು ಕ್ವಾಡ್ ಸಭೆಯಲ್ಲಿ ಭಾಗಿಯಾದರು. ಇದು ಟ್ರಂಪ್ ಅಧ್ಯಕ್ಷರಾದ ಬಳಿಕದ ಮೊದಲ ಸಭೆಯಾಗಿದೆ.

ಸಭೆಯಲ್ಲಿ ಭಾರತದ ಜೊತೆಗೆ ಆಸ್ಟ್ರೇಲಿಯಾ, ಜಪಾನ್ ಮತ್ತು ಅಮೆರಿಕದ ವಿದೇಶಾಂಗ ಸಚಿವರು ಭಾಗಿಯಾಗಿದ್ದರು. ಇದಾದ ಬಳಿಕ ಹೊಸದಾಗಿ ನೇಮಕಗೊಂಡ ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೊ ಮತ್ತು ರಾಷ್ಟ್ರೀಯ ಭದ್ರತಾ ಸಲಹೆಗಾರ ಮೈಕ್ ವಾಲ್ಟ್ಜ ಅವರೊಂದಿಗೆ ಪ್ರತ್ಯೇಕ ಸಭೆ ನಡೆಸಿದರು.

ಕ್ವಾಡ್, ಇಂಡೋ–ಪೆಸಿಫಿಕ್ ಪ್ರದೇಶದಲ್ಲಿ ಶಾಂತಿ, ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡುವ ಗುರಿಯನ್ನು ಹೊಂದಿರುವ ನಾಲ್ಕು ದೇಶಗಳ ಗುಂಪಾಗಿದೆ.

ಟ್ರಂಪ್ ಅಧಿಕಾರ ವಹಿಸಿಕೊಂಡ ಕೆಲವೇ ಗಂಟೆಗಳಲ್ಲಿ ಕ್ವಾಡ್‌ನ ವಿದೇಶಾಂಗ ಸಚಿವರ ಸಭೆ ನಡೆದಿರುವುದು ಗಮನಾರ್ಹ. ಸಭೆಯ ಬಳಿಕ ಮಾತನಾಡಿದ ಅಮೆರಿಕದ ವಿದೇಶಾಂಗ ಸಚಿವ ಮಾರ್ಕೊ ರೊಬಿಯೊ, ಈ ಸಭೆಯು ಕ್ವಾಡ್ ಸದಸ್ಯ ರಾಷ್ಟ್ರಗಳ ವಿದೇಶಾಂಗ ನೀತಿಗೆ ಹೆಚ್ಚಿನ ಆದ್ಯತೆ ನೀಡುತ್ತದೆ. ಮುಕ್ತ,



ಸ್ಥಿರ ಮತ್ತು ಸಮೃದ್ಧ ಇಂಡೋ– ಪೆಸಿಫಿಕ್ ರಾಷ್ಟ್ರಗಳ ನಿರ್ಮಾಣ ಮತ್ತು ಮಿತ್ರ ರಾಷ್ಟ್ರಗಳ ಜೊತೆಗೆ ಉತ್ತಮ ಬಾಂಧವ್ಯದ ಕುರಿತು ಚರ್ಚಿಸಲಾಯಿತು ಎಂದರು.

ರಾಷ್ಟ್ರಗಳ ನಡುವಿನ ದೂರದೃಷ್ಟಿ, ಕಾರ್ಯಸೂಚಿ, ಪರಸ್ಪರ ಸಹಯೋಗದ ಬಗ್ಗೆ ಮಾತುಕತೆ ನಡೆಸಲಾಯಿತು. ಕ್ವಾಡ್ ಜಾಗತಿಕ ಒಳಿತಿಗಾಗಿ ಒಂದು ಶಕ್ತಿಯಾಗಿ ಮುಂದುವರಿಯಲಿದೆ ಎಂಬ ಸ್ಪಷ್ಟ ಸಂದೇಶವನ್ನು ರವಾನಿಸುತ್ತದೆ ಎಂದರು.

ಇನ್ನು, ಕ್ವಾಡ್ ವಿದೇಶಾಂಗ ಸಚಿವರ ಜೊತೆಗಿನ ಸಭೆಯ ಕುರಿತ ಚಿತ್ರಗಳನ್ನು ಭಾರತದ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರು ತಮ್ಮ ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿದ್ದಾರೆ. ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ರುಬಿಯೊ ಮತ್ತು ಜೈಶಂಕರ್ ಅವರು ಸಭೆಯ ನಂತರದ ಫೋಟೋ ಸೆಷನ್‌ನಲ್ಲಿ ಕೈಕುಲುಕುತ್ತಾ ನಗುತ್ತಿದ್ದರು.

"ಟ್ರಂಪ್ ಆಡಳಿತದಲ್ಲಿ ವಿದೇಶಾಂಗ ಕಾರ್ಯದರ್ಶಿಯಾಗಿ ಅಧಿಕಾರ ವಹಿಸಿಕೊಂಡ ನಂತರ ಮೊದಲ ದ್ವಿಪಕ್ಷೀಯ ಸಭೆಯಲ್ಲಿ ರುಬಿಯೊ ಅವರ ಜೊತೆ ಮಾತುಕತೆ ನಡೆಸಿದ್ದು ಸಂತೋಷ ತಂದಿದೆ. ಅಮೆರಿಕ ಮತ್ತು ಭಾರತದ ದ್ವಿಪಕ್ಷೀಯ ಸಂಬಂಧಗಳನ್ನು ಮತ್ತಷ್ಟು ಉತ್ತಮಪಡಿಸುವ ಬಗ್ಗೆ ಚರ್ಚಿಸಲಾಗಿದೆ ಎಂದು ಅವರು ಬರೆದುಕೊಂಡಿದ್ದಾರೆ.

## ಪೊಲೀಸರ ಕಣ್ಗಾವಲಿನಲ್ಲಿ ದಲಿತ ವರನ ಮೆರವಣಿಗೆ

ಜೈಪುರ: ರಾಜಸ್ಥಾನದ ಅಜ್ಮೇರ್ ಜಿಲ್ಲೆಯಲ್ಲಿ ದಲಿತ ಕುಟುಂಬದ ವರನೊಬ್ಬ 200 ಜನ ಪೊಲೀಸ್ ಸಿಬ್ಬಂದಿಯ ಕಣ್ಗಾವಲಿನಲ್ಲಿ ಕುದುರೆ ಸವಾರಿ ಮೆರವಣಿಗೆ ಮಾಡಿಕೊಂಡ ಕುತೂಹಲಕಾರಿ ಘಟನೆ ರಾಜಸ್ಥಾನದಲ್ಲಿ ಮಂಗಳವಾರ ನಡೆದಿದೆ.

ವಿವಾಹ ಕಾರ್ಯಕ್ರಮಕ್ಕೂ ಮುನ್ನ ವರನನ್ನು ಮೆರವಣಿಗೆ ನಡೆಸುವ 'ಬಿಂದೋಲಿ' ಪದ್ಧತಿ ರಾಜಸ್ಥಾನದಲ್ಲಿದೆ. ಅದರಂತೆ ದಲಿತ ಕುಟುಂಬದ ಯುವಕ ತಾನೂ ಬರಾತ್ ಮೆರವಣಿಗೆ ನಡೆಸಲು ಬಯಸಿದ್ದ. ಆದರೆ, ಊರಿನ ಮೇಲ್ವರ್ಗದ ಜನರು ಇದಕ್ಕೆ ವಿರೋಧಿಸುವ ಭಯದಲ್ಲಿ ಪೊಲೀಸರ ರಕ್ಷಣೆ ಪಡೆದಿದ್ದಾನೆ.

ಮೆರವಣಿಗೆಗೆ ಭದ್ರತೆ ನೀಡಿದ ಪೊಲೀಸರು ಏನಿದು ವಿಶೇಷ ಬರಾತ್ ಇಲ್ಲಿನ ಖೋರ್ವಾಲ್‌ನ ಲಾವೆರಾ ಗ್ರಾಮದ ಅರುಣಾ ಎಂಬ ಯುವತಿಯನ್ನು ವಿಜಯ್ ರೇಗರ್ ಎಂಬುವರ ಜೊತೆ ವಿವಾಹ ನಡೆದಿದೆ. ಇದಕ್ಕೂ ಮೊದಲು ವರ, ವಧುವಿನ ಊರಿಗೆ ಕುದುರೆ ಸವಾರಿಯಲ್ಲಿ ತೆರಳುವ ಬಿಂದೋಲಿ ನಡೆಸಲು ಇಚ್ಛಿಸಿದ್ದ. ಆದರೆ, ಗ್ರಾಮದ ಮೇಲ್ಜಾತಿಯವರಿಂದ ಸಂಭಾವ್ಯ ವಿರೋಧ ನಿರೀಕ್ಷಿಸಿ ಕುಟುಂಬಸ್ಥರು ಪೊಲೀಸರನ್ನು ಸಂಪರ್ಕಿಸಿದ್ದರು.

ಅದರಂತೆ ದಲಿತ ಯುವಕನ ವಿವಾಹ



ಕಾರ್ಯಗಳಿಗೆ ಪೊಲೀಸ್ ಇಲಾಖೆಯು 200 ಸಿಬ್ಬಂದಿಯನ್ನು ನಿಯೋಜಿಸಿತ್ತು. ಭದ್ರತೆ ಒದಗಿಸಲು ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗಕ್ಕೆ ಪತ್ರ ಕೂಡ ಬರೆಯಲಾಗಿತ್ತು.

ಮೇಲ್ವರ್ಗದ ವಿರೋಧ ಶಂಕೆ: ಈ ಬಗ್ಗೆ ಮಾಹಿತಿ ನೀಡಿರುವ ಅಜ್ಮೇರ್ ಪೊಲೀಸ್ ವರಿಷ್ಠಾಧಿಕಾರಿ ವಂದಿತಾ ರಾಣಾ, ದಲಿತ ಕುಟುಂಬದ ಯುವಕ ಮದುವೆ ಮೆರವಣಿಗೆ ನಡೆಸಲು ಬಯಸಿದ್ದ. ಗ್ರಾಮದ ಇತರ ವರ್ಗಗಳಿಂದ ವಿರೋಧ ವ್ಯಕ್ತವಾಗುವ ಶಂಕೆಯಲ್ಲಿ ಆತ, ಮಾನವ ಹಕ್ಕುಗಳ ಆಯೋಗಕ್ಕೆ ಪತ್ರ ಬರೆದು ಭದ್ರತೆ ಕೋರಿದ್ದ. ಆಯೋಗದ ಸೂಚನೆ ಮೇರೆಗೆ 200 ಸಿಬ್ಬಂದಿಯನ್ನು ಬರಾತ್‌ಗೆ ನಿಯೋಜಿಸಲಾಗಿದೆ ಎಂದರು.

ಈ ಕುರಿತು ಗ್ರಾಮಸ್ಥರ ಜೊತೆಗೂ ಚರ್ಚೆ ನಡೆಸಲಾಗಿದೆ. ಜನರು ಕೂಡ ಸಹಕರಿಸುವ ಭರವಸೆ ನೀಡಿದ್ದರು. ವರನ ಮೆರವಣಿಗೆಯನ್ನು ಪೊಲೀಸ್ ರಕ್ಷಣೆಯಲ್ಲಿ ನಡೆಸಲಾಗಿದೆ. ಯಾವುದೇ ಸಮಸ್ಯೆ ಉಂಟಾಗಿಲ್ಲ ಎಂದು ಹೇಳಿದರು.

ವರನ ತಂದೆ ನಾರಾಯಣ್ ಮಾತನಾಡಿ, ಈ ಹಿಂದೆ ನಮ್ಮ ಸಮುದಾಯದ ಯುವಕರ ವಿವಾಹ ಮೆರವಣಿಗೆಗಳಲ್ಲಿ ಅಹಿತಕರ ಘಟನೆಗಳು ನಡೆದಿದ್ದವು. ಆದ್ದರಿಂದ ಪೊಲೀಸರು ಮತ್ತು ಸಾಮಾಜಿಕ ಕಾರ್ಯಕರ್ತರ ಸಹಾಯ ಕೋರಿದ್ದೆವು. ನಮ್ಮದು ವಿದ್ಯಾವಂತ ಕುಟುಂಬ ಎಂದು ತಿಳಿಸಿದರು. ಯುವಕನ ವಿವಾಹ ಬರಾತ್‌ನಲ್ಲಿ ಕುಟುಂಬಸ್ಥರು ಸದ್ದು ಮಾಡುವ ಡಿಜೆ ಮತ್ತು ಪಟಾಕಿಗಳನ್ನು ಬಳಸದೆ, ಪರಿಸರ ಸ್ನೇಹಿ ಕಾರ್ಯಕ್ರಮ ಜರುಗಿಸಿದೆ.

## ಕೇಂದ್ರದ ಮುಂದೆ 7 ಬೇಡಿಕೆಗಳನ್ನಿಟ್ಟ ಕೇಜ್ರಿವಾಲ್

**ನವದೆಹಲಿ:** ದಿಲ್ಲಿಯ ಮಧ್ಯಮ ವರ್ಗದ ಜನರ ಪರಿಸ್ಥಿತಿಯ ಬಗ್ಗೆ ಕಳವಳ ವ್ಯಕ್ತಪಡಿಸಿರುವ ಆಮ್ ಆದ್ಮಿ ಪಕ್ಷದ (ಎಎಪಿ) ರಾಷ್ಟ್ರೀಯ ಸಂಚಾಲಕ ಅರವಿಂದ್ ಕೇಜ್ರಿವಾಲ್, ಇತರ ಪಕ್ಷಗಳು ಸೃಷ್ಟಿಸಿರುವ ನೋಟ್ ಬ್ಯಾಂಕ್ ಮತ್ತು ವೋಟ್ ಬ್ಯಾಂಕ್ ನಡುವೆ ಮಧ್ಯಮ ವರ್ಗದವರು ಎಲ್ಲಿಯೂ ಕಾಣುತ್ತಿಲ್ಲ ಎಂದು ಹೇಳಿದ್ದಾರೆ.

ಸಂಸತ್ತಿನಲ್ಲಿ ಬಜೆಟ್ ಅಧಿವೇಶನಕ್ಕೆ ಮುಂಚಿತವಾಗಿ ಕೇಂದ್ರ ಸರ್ಕಾರದ ಮುಂದೆ ಏಳು ಬೇಡಿಕೆಗಳನ್ನು ಪಟ್ಟಿ ಮಾಡಿದ ಅವರು, ಮಧ್ಯಮ ವರ್ಗವು ತೆರಿಗೆ ಭಯೋತ್ಪಾದನೆಗೆ ಬಲಿಯಾಗಿದೆ ಎಂದು ಪ್ರತಿಪಾದಿಸಿದರು.

"ಕೆಲವು ಪಕ್ಷಗಳು ಧರ್ಮ ಮತ್ತು ಜಾತಿಯ ಹೆಸರಿನಲ್ಲಿ ತಮ್ಮ ವೋಟ್ ಬ್ಯಾಂಕ್ ಅನ್ನು ಸೃಷ್ಟಿಸಿಕೊಂಡಿವೆ ಮತ್ತು ಇನ್ನು ಕೆಲ ಪಕ್ಷಗಳು ಕೈಗಾರಿಕೋದ್ಯಮಿಗಳಿಗಾಗಿ ಕೆಲಸ



ಮಾಡುತ್ತ ಅವರಿಂದ ದೇಣಿಗೆಗಳನ್ನು ಪಡೆಯುತ್ತವೆ. ಆದರೆ ಈ ನೋಟ್ ಬ್ಯಾಂಕ್ (ಕೈಗಾರಿಕೋದ್ಯಮಿಗಳು) ಮತ್ತು ವೋಟ್ ಬ್ಯಾಂಕ್ (ಇತರರು) ನಡುವೆ ಮಧ್ಯಮ ವರ್ಗ ಕಾಣಿಸುತ್ತಿಲ್ಲ. ಇವುಗಳ ಮಧ್ಯೆ ಮಧ್ಯಮ ವರ್ಗವು ತುಳಿತಕ್ಕೊಳಗಾಗಿದೆ. ಭಾರತದ ಮಧ್ಯಮ ವರ್ಗವು ಸರ್ಕಾರದ ಎಟಿಎಂ ಆಗಿ ಮಾರ್ಪಟ್ಟಿದೆ. ಭಾರತೀಯ ಮಧ್ಯಮ ವರ್ಗವು ತೆರಿಗೆ ಭಯೋತ್ಪಾದನೆಗೆ ಬಲಿಯಾಗಿದೆ ಎಂಬುದು ಸತ್ಯ" ಎಂದು ಕೇಜ್ರಿವಾಲ್ ವೀಡಿಯೊ ಸಂದೇಶದಲ್ಲಿ ತಿಳಿಸಿದ್ದಾರೆ.

"ಇದೇ ಕಾರಣದಿಂದಾಗಿ ಅನೇಕರು ದೇಶವನ್ನೇ ತೊರೆಯುತ್ತಿದ್ದಾರೆ. 2023 ರಲ್ಲಿಯೇ 2.16 ಲಕ್ಷ ಜನರು ದೇಶವನ್ನು ತೊರೆದಿದ್ದಾರೆ" ಎಂದು ಕೇಜ್ರಿವಾಲ್ ಹೇಳಿದರು. "ನಾವು ಮಧ್ಯಮ ವರ್ಗದ ಶಿಕ್ಷಣ ಬಜೆಟ್ ಅನ್ನು ಹೆಚ್ಚಿಸಿದ್ದೇವೆ, ವಿದ್ಯುತ್ ಮತ್ತು ನೀರಿನ ಬಿಲ್‌ಗಳನ್ನು ಕಡಿಮೆ ಮಾಡಿದ್ದೇವೆ, ಚುನಾವಣೆಯ ನಂತರ ನಾವು ವೃದ್ಧರಿಗೆ ಉಚಿತ ಚಿಕಿತ್ಸೆಗಾಗಿ ಸಂಜೀವಿನಿ ಯೋಜನೆಯನ್ನು ಜಾರಿಗೆ ತರುತ್ತೇವೆ" ಎಂದು ಅವರು ತಿಳಿಸಿದರು.

ಎಎಪಿ ಮಧ್ಯಮ ವರ್ಗದ ಧ್ವನಿಯಾಗಲಿದೆ ಎಂದು ಭರವಸೆ ನೀಡಿದ ಕೇಜ್ರಿವಾಲ್, ಎರಡು ವಾರಗಳ ನಂತರ ನಡೆಯಲಿರುವ ಸಂಸತ್ತಿನ ಮುಂಬರುವ ಬಜೆಟ್ ಅಧಿವೇಶನದಲ್ಲಿ ತಮ್ಮ ಪಕ್ಷವು ಮಧ್ಯಮ ವರ್ಗಕ್ಕೆ ಸಂಬಂಧಿಸಿದ ಸಮಸ್ಯೆಗಳನ್ನು ಎತ್ತಲಿದೆ ಎಂದು ಹೇಳಿದರು. ಬಜೆಟ್ ಅಧಿವೇಶನಕ್ಕೆ ಮುಂಚಿತವಾಗಿ ಕೇಂದ್ರ ಸರ್ಕಾರದ ಮುಂದೆ ಏಳು ಬೇಡಿಕೆಗಳನ್ನು ಇಟ್ಟಿರುವ ಕೇಜ್ರಿವಾಲ್, ಮುಂದಿನ ಬಜೆಟ್ ಅಧಿವೇಶನವನ್ನು ಮಧ್ಯಮ ವರ್ಗದವರ ಚರ್ಚೆಗಾಗಿಯೇ ಮೀಸಲಿಡಬೇಕು ಎಂದು ಒತ್ತಾಯಿಸಿದರು.

"ದೇಶದ ಮುಂದಿನ ಬಜೆಟ್ ಅನ್ನು ಮಧ್ಯಮ ವರ್ಗಕ್ಕೆ ಮೀಸಲಿಡಬೇಕೆಂದು ನಾವು ಒತ್ತಾಯಿಸುತ್ತೇವೆ. ಇಂದು ನಾನು ಕೇಂದ್ರ ಸರ್ಕಾರದ ಮುಂದೆ ಏಳು ಬೇಡಿಕೆಗಳನ್ನು ಇಡುತ್ತಿದ್ದೇನೆ. ಕೇಂದ್ರವು ಶಿಕ್ಷಣ ಬಜೆಟ್ ಅನ್ನು ಶೇಕಡಾ 2 ರಿಂದ 10 ಕ್ಕೆ ಹೆಚ್ಚಿಸಬೇಕು. ಖಾಸಗಿ ಶಾಲೆಗಳಲ್ಲಿನ ಶುಲ್ಕವನ್ನು ನಿಯಂತ್ರಿಸಬೇಕು. ಉನ್ನತ ಶಿಕ್ಷಣಕ್ಕಾಗಿ ಸಬ್ಸಿಡಿ ಮತ್ತು ವಿದ್ಯಾರ್ಥಿವೇತನಗಳನ್ನು ಒದಗಿಸಬೇಕು" ಎಂದು ಅವರು ಹೇಳಿದರು.

## ಮಹಾಕುಂಭ ಮೇಳಕ್ಕೆ ಭೇಟಿ ನೀಡಿ ತ್ರಿವೇಣಿ ಸಂಗಮದಲ್ಲಿ ಮಿಂದೆದ್ದ ಸುಧಾಮೂರ್ತಿ

**ಪ್ರಯಾಗ್‌ರಾಜ್:** ರಾಜ್ಯಸಭಾ ಸಂಸದೆ, ಇನ್ಫೋಸಿಸ್ ಫೌಂಡೇಶನ್ ಸಹ ಸಂಸ್ಥಾಪಕಿ ಸುಧಾಮೂರ್ತಿ ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಮಹಾಕುಂಭ ಮೇಳಕ್ಕೆ ಭೇಟಿ ನೀಡಿ, ತ್ರಿವೇಣಿ ಸಂಗಮದಲ್ಲಿ ಮಿಂದೆದ್ದಿದ್ದಾರೆ. ದೇಶ ವಿದೇಶಗಳಿಂದ ಕೋಟ್ಯಂತರ ಭಕ್ತರು ಪ್ರಯಾಗ್?ರಾಜ್ ಮಹಾಕುಂಭಕ್ಕೆ ಆಗಮಿಸಿ ಸಂಗಮದಲ್ಲಿ ಸ್ನಾನ ಮಾಡುತ್ತಿದ್ದಾರೆ. ಮೂರು ದಿನಗಳ ಕಾಲ ಪವಿತ್ರ ತ್ರಿವೇಣಿ ಸಂಗಮದಲ್ಲಿ ಸ್ನಾನ ಮಾಡಿ ಪೂರ್ವಜರಿಗೆ ತರ್ಪಣ ನೀಡುವುದಾಗಿ ಸುಧಾಮೂರ್ತಿ ತಿಳಿಸಿದರು.

ಈ ವೇಳೆ ಮಹಾಕುಂಭದ ವ್ಯವಸ್ಥೆ ಕಂಡು ಸಂತಸ ವ್ಯಕ್ತಪಡಿಸಿದ ಅವರು ಸಿಎಂ ಯೋಗಿ ಅವರಿಗೆ ದೀರ್ಘಾಯುಷ್ಯ ನೀಡಲಿ ಎಂದು ಹಾರೈಸಿದರು. ಈ ವೇಳೆ ಮಾಧ್ಯಮದವರೊಂದಿಗೆ ಮಾತನಾಡಿದ ಸುಧಾ ಮೂರ್ತಿ, ನಾನು ಮೂರು ದಿನ ಪ್ರತಿಜ್ಞೆ ಮಾಡಿದ್ದೇನೆ. ನಮ್ಮ ತಾಯಿಯ ಅಜ್ಜ, ಅಜ್ಜಿ ಮತ್ತು ಅಜ್ಜ ಇಲ್ಲಿಗೆ ಬರಲು ಸಾಧ್ಯವಾಗಲಿಲ್ಲ.

ನಾವು ಕರ್ನಾಟಕದಿಂದ ಬಂದಿದ್ದೇವೆ. ಆ ಸಮಯದಲ್ಲಿ ಅವರಿಗೆ ಅದು ಸಾಧ್ಯವಾಗಲಿಲ್ಲ. ಅವರ ಹೆಸರಿನಲ್ಲಿ ನಾನು ತರ್ಪಣವನ್ನು ಅರ್ಪಿಸಬೇಕು. ಅದಕ್ಕಾಗಿಯೇ ಮೂರು ದಿನ ಸ್ನಾನ ಮಾಡಿ ತರ್ಪಣ ನೀಡುತ್ತೇನೆ ಎಂದು ಮೂರು ದಿನ ಉಪವಾಸ ಕೈಗೊಂಡಿದ್ದೇನೆ ಎಂದರು.

ದೇವರು ಮತ್ತು ಗಂಗಾಮಾತೆಯ ಆಶೀರ್ವಾದದಿಂದ ಮಹಾಕುಂಭದಲ್ಲಿ ಭಾಗವಹಿಸುವ ಅವಕಾಶ ಸಿಕ್ಕಿದೆ. ಇಲ್ಲಿ ಬಹಳ ಒಳ್ಳೆಯ ವ್ಯವಸ್ಥೆ ಇದೆ. ಸಿಎಂ ಯೋಗಿ ನೇತೃತ್ವದಲ್ಲಿ ಪೊಲೀಸರು ಜನರಿಗೆ ತುಂಬಾ ಒಳ್ಳೆಯ ಕೆಲಸ ಮಾಡಿದ್ದಾರೆ. ಸಿಎಂ ಯೋಗಿಗೆ ದೇವರು ದೀರ್ಘಾಯುಷ್ಯ ನೀಡಲಿ ಎಂದರು.

ಕೋಟ್ಯಂತರ ಭಕ್ತರು ಸ್ನಾನ ಮಾಡಿದ್ದಾರೆ ಜನವರಿ 13 ರಿಂದ ಪ್ರಾರಂಭವಾದ ಪ್ರಯಾಗರಾಜ್




ಮಹಾಕುಂಭದಲ್ಲಿ ಇಲ್ಲಿಯವರೆಗೆ, ಕೋಟ್ಯಂತರ ಭಕ್ತರು ಸಂಗಮದಲ್ಲಿ ಸ್ನಾನ ಮಾಡಿದ್ದಾರೆ. ಈ ಮಹಾಕುಂಭವನ್ನು ಆಯೋಜಿಸಲು ಯೋಗಿ ಸರ್ಕಾರವು ಭದ್ರತಾ ವ್ಯವಸ್ಥೆಯನ್ನು ಹೆಚ್ಚು ಬಲಪಡಿಸಿದೆ. ಸಾವಿರಾರು ಭದ್ರತಾ ಸಿಬ್ಬಂದಿ ಮತ್ತು ಅರೆಸೇನಾ ಪಡೆಗಳನ್ನು ನಿಯೋಜಿಸಲಾಗಿದೆ. ಮಹಾಕುಂಭದ ವೇಳೆ ಯಾವುದೇ ಅಹಿತಕರ ಘಟನೆ ನಡೆಯದಂತೆ ಡ್ರೋನ್ ಮೂಲಕ ನಿಗಾ ಇರಿಸಲಾಗಿದೆ. ಈ ಮಹಾಕುಂಭಮೇಳ ಫೆಬ್ರವರಿ 26ರವರೆಗೆ ನಡೆಯಲಿದೆ.

ಸುಧಾಮೂರ್ತಿಯವರು ತಮ್ಮ ಸರಳತೆಯಿಂದಲೇ ಹೆಚ್ಚು ಪ್ರಸಿದ್ಧರಾಗಿದ್ದಾರೆ. ಸಾಮಾಜಿಕ ಕಾರ್ಯ ಕ್ಷೇತ್ರಕ್ಕೆ ನೀಡಿದ ಕೊಡುಗೆಗಾಗಿ 2023 ರಲ್ಲಿ ಪದ್ಮಭೂಷಣ ಮತ್ತು 2006 ರಲ್ಲಿ ಪದ್ಮಶ್ರೀ ಪ್ರಶಸ್ತಿಯನ್ನು ನೀಡಲಾಯಿತು.

ಉತ್ತರ ಪ್ರದೇಶ ಪೊಲೀಸರು ಕಾರ್ಯಕ್ರಮದ ಭದ್ರತೆಗಾಗಿ ಸ್ಥಳೀಯ ಪೊಲೀಸರು ಮತ್ತು ಅರೆಸೇನಾ ಪಡೆಗಳು ಸೇರಿದಂತೆ 10,000 ಸಿಬ್ಬಂದಿಯನ್ನು ನಿಯೋಜಿಸಿದ್ದಾರೆ. ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ (ಎನ್‌ಡಿಆರ್‌ಎಫ್) ಭಕ್ತಾದಿಗಳ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಸಂಗಮ್‌ನಲ್ಲಿ 'ವಾಟರ್ ಆಂಬ್ಯುಲೆನ್ಸ್'ನ್ನು ನಿಯೋಜಿಸಿದೆ.

## ಅಮೆರಿಕ ಹೊರಬಿದ್ದ ಬೆನ್ನಲ್ಲೇ ಡಬ್ಲ್ಯೂಎಚ್‌ಒಗೆ ಚೀನಾ ಬೆಂಬಲ

ಬೀಜಿಂಗ್: ವಿಶ್ವಸಂಸ್ಥೆಯ ಆರೋಗ್ಯ ಸಂಸ್ಥೆಯಿಂದ ಅಮೆರಿಕ ಹಿಂದೆ ಸರಿಯುವುದಾಗಿ ನೂತನ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಿಸಿದ ಬೆನ್ನಲ್ಲೇ, ಚೀನಾವು ತನ್ನ ಬೆಂಬಲವನ್ನು ಪ್ರಕಟಿಸಿದೆ.

ಅಮೆರಿಕದ ಅಧ್ಯಕ್ಷರಾಗಿ ಟ್ರಂಪ್ ಪ್ರಮಾಣವಚನ ಸ್ವೀಕರಿಸಿದ ಕೂಡಲೇ, ಅಮೆರಿಕವು ಡಬ್ಲ್ಯುಎಚ್‌ಒನಿಂದ ಹೊರಬರುವ ಕಾರ್ಯಕಾರಿ ಆದೇಶಕ್ಕೆ ಸಹಿ ಹಾಕಿದರು. ಇದು ಐದು ವರ್ಷಗಳ ಅಂತರದಲ್ಲಿ ಅಮೆರಿಕವು ಎರಡನೇ ಬಾರಿಗೆ ಡಬ್ಲ್ಯುಎಚ್‌ಒದಿಂದ ಹಿಂದೆ ಸರಿದಂತಾಗಿದೆ.

ಟ್ರಂಪ್ ಅವರ ಈ ನಿರ್ಧಾರ ಹೊರಬಿದ್ದ ಬಳಿಕ, ಚೀನಾವು ತನ್ನ ಬೆಂಬಲವನ್ನು ದೃಢಪಡಿಸಿದೆ. ಚೀನಾದ ವಿದೇಶಾಂಗ ಸಚಿವಾಲಯದ ವಕ್ತಾರ ಗುವೊ ಜಿಯಾಕುನ್ ಮಾತನಾಡಿ, ವಿಶ್ವ ಆರೋಗ್ಯ ಸಂಸ್ಥೆಗೆ ತಮ್ಮ ಬೆಂಬಲವನ್ನು ಮುಂದುವರಿಸಲಾಗುವುದು ಎಂದು ಹೇಳಿದರು. ಜಾಗತಿಕ ಸಾರ್ವಜನಿಕ ಆರೋಗ್ಯ ಕ್ಷೇತ್ರದಲ್ಲಿ ಡಬ್ಲ್ಯುಎಚ್‌ಒ ಅಧಿಕೃತ ಅಂತಾರಾಷ್ಟ್ರೀಯ ಸಂಸ್ಥೆಯಾಗಿದೆ. ಅದರ ಪ್ರಾಮುಖ್ಯತೆಯನ್ನು ಹೆಚ್ಚಿಸಬೇಕೇ ಹೊರತು, ಅದನ್ನು ದುರ್ಬಲಗೊಳಿಸಬಾರದು ಎಂದು ಗುವೊ ತಿಳಿಸಿದ್ದಾರೆ.

ಟ್ರಂಪ್ ಹಿಂದಿನಿಂದಲೂ ಘಊಔ ಅನ್ನು ಟೀಕಿಸುತ್ತಿದ್ದಾರೆ. ತಮ್ಮ ಮೊದಲ ಅವಧಿಯ ಆಡಳಿತದಲ್ಲಿ ವಿಶ್ವ ಆರೋಗ್ಯ ಸಂಸ್ಥೆಯಿಂದ ಅಮೆರಿಕವನ್ನು ಹಿಂತೆಗೆದುಕೊಂಡಿದ್ದರು. ಬಳಿಕ ಬಂದ ಜೋ ಬೈಡನ್ ಟ್ರಂಪ್ ಅವರ



ನಿರ್ಧಾರವನ್ನು ರದ್ದುಗೊಳಿಸಿದ್ದರು.

ಕೋವಿಡ್–19 ಸಾಂಕ್ರಾಮಿಕ ಸೇರಿ ಇತರ ಅಂತಾರಾಷ್ಟ್ರೀಯ ಆರೋಗ್ಯ ಬಿಕ್ಕಟ್ಟುಗಳ ನಿರ್ವಹಣೆಯಲ್ಲಿ ಡಬ್ಲ್ಯುಎಚ್‌ಒ ವಿಫಲವಾಗಿದೆ. ಈ ಕಾರಣಕ್ಕಾಗಿ ಅಮೆರಿಕವು ವಿಶ್ವ ಆರೋಗ್ಯ ಸಂಸ್ಥೆಯಿಂದ ಅಧಿಕೃತವಾಗಿ ನಿರ್ಗಮಿಸುತ್ತದೆ ಎಂದು ಟ್ರಂಪ್ ಹೇಳಿದ್ದರು.

ಅಮೆರಿಕವು ಡಬ್ಲ್ಯುಎಚ್‌ಒದ ಅರಿದೊಡ್ಡ ಆರ್ಥಿಕ ಶಕ್ತಿಯಾಗಿತ್ತು. ಅದರ ಒಟ್ಟು ನಿಧಿಯ ಶೇ.18 ರಷ್ಟು ಕೊಡುಗೆಯನ್ನು ಅಮೆರಿಕ ನೀಡುತ್ತಿತ್ತು. ನೂತನ ಅಧ್ಯಕ್ಷರ ಹಿಂತೆಗೆತವು, ಕ್ಷಯ, ಎಚ್‌ಐವಿ ಅಥವಾ ಏಡ್ಸ್ ಸೇರಿ ಇತರ ಆರೋಗ್ಯ ತುರ್ತುಸ್ಥಿತಿಗಳನ್ನು ನಿರ್ವಹಿಸುವಲ್ಲಿ ವಿಶ್ವ ಆರೋಗ್ಯ ಸಂಸ್ಥೆಗೆ ಸಮಸ್ಯೆಯಾಗಲಿದೆ ಎಂದು ವಿಶ್ಲೇಷಿಸಲಾಗಿದೆ.

## ಟರ್ಕಿಯ ಸ್ಕೀ ರೆಸಾರ್ಟ್‌ನಲ್ಲಿ ಅಗ್ನಿ ಅವಘಡ: 66 ಜನ ಸಾವು

**ಟರ್ಕಿ:** ಟರ್ಕಿಯಲ್ಲಿ ಭಾರಿ ಬೆಂಕಿ ಅವಘಡ ಸಂಭವಿಸಿದೆ. ಜನರು ಬೆಂಕಿ ಹರಡುತ್ತಿರುವುದನ್ನು ಗಮನಿಸಿದ ನಂತರ ಮುನ್ನೆಚ್ಚರಿಕೆಯಾಗಿ ರೆಸಾರ್ಟ್‌ನಲ್ಲಿರುವ ಇತರ ಹೋಟೆಲ್‌ಗಳ ಜನರನ್ನು ಸ್ಥಳಾಂತರಿಸಲಾಯಿತು. ಟರ್ಕಿಯ ಬೋಲು ಪ್ರಾಂತ್ಯದ ಸುತ್ತಮುತ್ತಲಿನ ಹೋಟೆಲ್‌ಗಳಲ್ಲಿ ಅತಿಥಿಗಳನ್ನು ಇರಿಸಲಾಯಿತು. ಇಂದು ವಾಯುವ್ಯ ಟರ್ಕಿಯಲ್ಲಿರುವ ಸ್ಕೀ ರೆಸಾರ್ಟ್‌ನ ಹೋಟೆಲ್‌ನಲ್ಲಿ ಸಂಭವಿಸಿದ ಭಾರಿ ಬೆಂಕಿ ಅವಘಡದಲ್ಲಿ ಕನಿಷ್ಠ 66 ಜನರು ಸಾವನ್ನಪ್ಪಿದ್ದಾರೆ. ಸುಮಾರು 32 ಮಂದಿ ಗಾಯಗೊಂಡಿದ್ದಾರೆ.

ಬೋಲು ಪ್ರಾಂತ್ಯದ ಕಾರ್ಟಲ್ಕಾಯಾ ರೆಸಾರ್ಟ್‌ನಲ್ಲಿರುವ 12 ಅಂತಸ್ತಿನ ಗ್ರ್ಯಾಂಡ್ ಕಾರ್ತಾಲ್ ಹೋಟೆಲ್‌ನ ರೆಸ್ಟೋರೆಂಟ್‌ನಲ್ಲಿ ಬೆಳಗಿನ ಜಾವ 3.30ರ ಸುಮಾರಿಗೆ ಹೋಟೆಲ್ ಬೆಂಕಿಗೆ ಆಹುತಿಯಾಯಿತು. ಬೆಂಕಿಯ ಕಾರಣ ಇನ್ನೂ ತಿಳಿದುಬಂದಿಲ್ಲ.

ರೆಸಾರ್ಟ್‌ನಲ್ಲಿದ್ದ ಇಬ್ಬರು ಭಯಭೀತರಾಗಿ ಕಟ್ಟಡದಿಂದ ಹಾರಿ ಸಾವನ್ನಪ್ಪಿದ್ದಾರೆ. ಕೆಲವು ಜನರು ಬೆಡ್?ರೂಂನ ಬೆಡ್?ಶೀಟ್?ಗಳನ್ನು ಬಳಸಿ ತಮ್ಮ ಕೋಣೆಗಳಿಂದ ಕೆಳಗೆ ಇಳಿಯಲು ಪ್ರಯತ್ನಿಸಿದ್ದಾರೆ. ಹೋಟೆಲ್‌ನಲ್ಲಿ 234 ಅತಿಥಿಗಳು ತಂಗಿದ್ದರು ಎಂದು ಸ್ಥಳೀಯ ಮಾಧ್ಯಮಗಳು ಹೇಳಿವೆ. ಬದುಕುಳಿದವರು ತಮ್ಮ ಭಯಾನಕ ಅನುಭವಗಳನ್ನು ಹಂಚಿಕೊಂಡಿದ್ದಾರೆ.

ಬೆಂಕಿಯಿಂದ ಹೋಟೆಲ್ ಹೊಗೆಯಿಂದ ಆವೃತವಾಗಿತ್ತು, ಅತಿಥಿಗಳು ಬೆಂಕಿಯಿಂದ ತಪ್ಪಿಸಿಕೊಳ್ಳುವ ಸ್ಥಳವನ್ನು ಹುಡುಕಾಡುತ್ತಿದ್ದರು. ಕಾರ್ತಲ್ಕಯಾ ಇಸ್ತಾನ್‌ಬುಲ್‌ನಿಂದ ಪೂರ್ವಕ್ಕೆ ಸುಮಾರು 300 ಕಿಲೋಮೀಟರ್ ದೂರದಲ್ಲಿರುವ ಪರ್ವತದಲ್ಲಿರುವ ಜನಪ್ರಿಯ ಸ್ಕೀ ರೆಸಾರ್ಟ್ ಆಗಿದೆ. ಬೆಂಕಿ ಅವಘಡ ಸಂಭವಿಸಿದ ಸಮಯದಲ್ಲಿ ಈ ಪ್ರದೇಶದಲ್ಲಿ ಹೋಟೆಲ್‌ಗಳು ಜನರಿಂದ ತುಂಬಿದ್ದವು. 30 ಅಗ್ನಿಶಾಮಕ ವಾಹನಗಳು ಮತ್ತು 28 ಆಂಬ್ಯುಲೆನ್ಸ್‌ಗಳನ್ನು ಸ್ಥಳಕ್ಕೆ ಕಳುಹಿಸಲಾಗಿದೆ.

## ಉನ್ನತ ಮಟ್ಟದ ಕೆಲಸಗಾರರು ಅಮೆರಿಕಕ್ಕೆ ಬರಬೇಕು, ಎಚ್‌1ಬಿ ವೀಸಾ ಬೇಕು: ಟ್ರಂಪ್

**ವಾಷಿಂಗ್ಟನ್:** ನೂತನ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಎಚ್‌1ಬಿ ವೀಸಾ ನಿಯಮವನ್ನು ಕಠಿಣಗೊಳಿಸಬಹುದು ಎನ್ನುವ ಸುದ್ದಿ ಕೇವಲ ವದಂತಿ ಆಗಿರುವಂತಿದೆ. ಡೊನಾಲ್ಡ್ ಟ್ರಂಪ್ ಅವರು ಎಚ್‌1ಬಿ ವೀಸಾ ಪರ ಒಲವು ವ್ಯಕ್ತಪಡಿಸಿದ್ದಾರೆ. ಪದಗ್ರಹಣದ ಬಳಿಕ ವಿಶ್ವದ ಕೆಲ ಪ್ರಮುಖ ಉದ್ಯಮಿಗಳೊಂದಿಗೆ ಶ್ವೇತಭವನದಲ್ಲಿ ಜಂಟಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡುತ್ತಿದ್ದ ಅವರು, ಎಚ್‌1ಬಿ ವೀಸಾ ಯೋಜನೆಯಿಂದ ದೇಶಕ್ಕೆ ಗುಣಮಟ್ಟದ ಕೆಲಸಗಾರರು ಬರಲು ಸಾಧ್ಯವಾಗುತ್ತೆ ಎಂದು ಹೇಳಿದ್ದಾರೆ.

ಅಮೆರಿಕಕ್ಕೆ ಉತ್ಕೃಷ್ಟ ಎಂಜಿನಿಯರುಗಳು ಮಾತ್ರವಲ್ಲ, ಎಲ್ಲಾ ಸ್ತರಗಳಿಂದಲೂ ಗುಣಮಟ್ಟದ ಕೆಲಸಗಾರರು ಬರುವಂತಾಗಬೇಕು ಎಂಬುದು ಅವರ ಅನಿಸಿಕೆ. 'ನನಗೆ ಎರಡೂ ಕಡೆಯ ವಾದದಲ್ಲಿ ಒಪ್ಪಿಗೆ ಇದೆ. ಆದರೆ, ನಮ್ಮ ದೇಶಕ್ಕೆ ಸ್ಪರ್ಧಾತ್ಮಕ ಜನರು ಬರಬೇಕೆಂದು ಬಯಸುತ್ತೇನೆ. ಇತರ ಜನರಿಗೆ ಅವರು ಬಂದು ತರಬೇತಿ ಕೊಡುತ್ತಾರೆಂದೂ ಸರಿ. ನನಗೆ ಇದನ್ನು (ಎಚ್‌1ಬಿ ವೀಸಾ) ನಿಲ್ಲಿಸುವುದು ಬೇಕಿಲ್ಲ. ಎಂಜಿನಿಯರುಗಳಿಗೆ ಮಾತ್ರವೇ ಈ ವಲಸೆ ಸೀಮಿತವಾಗದೆ, ಎಲ್ಲಾ ಮಟ್ಟದ ವ್ಯಕ್ತಿಗಳೂ ಬರುವಂತಾಗಬೇಕು' ಎಂದು ಅಮೆರಿಕದಲ್ಲಿ ಎರಡನೇ ಬಾರಿ ಅಧ್ಯಕ್ಷರಾಗಿರುವ ಅವರು ಅಭಿಪ್ರಾಯಪಟ್ಟಿದ್ದಾರೆ.

'ನನಗೆ ಎಚ್‌1ಬಿ ವೀಸಾ ಯೋಜನೆ ಬಗ್ಗೆ ಚೆನ್ನಾಗಿ ಗೊತ್ತಿದೆ. ನಾನೂ ಕೂಡ ಇದನ್ನು ಬಳಸುತ್ತೇನೆ. ವೈನ್ ಎಕ್ಸ್‌ಪರ್ಟ್ಸ್, ಒಳ್ಳೆಯ ವೇಟರ್ಸ್ ಹೀಗೆ ಅತ್ಯುತ್ತಮ ಕೆಲಸಗಾರರನ್ನು ಕರೆಸಬಹುದು. ಲ್ಯಾರಿಯಂತಹ ಜನರಿಗೆ ಉತ್ತಮ ಎಂಜಿನಿಯರುಗಳ ಅಗತ್ಯ ಇದೆ,' ಎಂದು ಟ್ರಂಪ್ ಈ ಸುದ್ದಿಗೋಷ್ಠಿಯಲ್ಲಿ ಹೇಳಿದ್ದಾರೆ.

ಡೊನಾಲ್ಡ್ ಟ್ರಂಪ್ ಅವರ ಜೊತೆ ಜಂಟಿ ಸುದ್ದಿಗೋಷ್ಠಿಯಲ್ಲಿ ಒರೇಕಲ್ ಸಿಟಿಒ ಲ್ಯಾರಿ ಎಲಿಸನ್, ಸಾಫ್ಟ್‌ಬ್ಯಾಂಕ್ ಸಿಇಒ ಮಸಾಯೋಶಿ ಸೋನ್, ಓಪನ್ ಎಐ ಸಿಇಒ ಸ್ಯಾಮ್ ಆಲ್ಟ್‌ಮ್ಯಾನ್ ಅವರೂ ಇದ್ದರು.

# ಯಾವ ಪಾತ್ರಕ್ಕೂ 'ಸೈ'




ಬಾಲಿವುಡ್ ಬಹುಬೇಡಿಕೆ ನಟ ವಿಕ್ಕಿ ಕೌಶಲ್ ಹಾಗೂ ಬಹುಭಾಷಾ ನಟಿ ರಶ್ಮಿಕಾ ಮಂದಣ್ಣ ಅಭಿನಯದ ಪೀರಿಯಾಡಿಕಲ್ ಡ್ರಾಮಾ 'ಛಾವಾ'ದ ಬಿಡುಗಡೆ ದಿನಾಂಕ ಸಮೀಪಿಸುತ್ತಿದೆ. ಚಿತ್ರದಿಂದ ವಿಕ್ಕಿ ಕೌಶಲ್ ಅವರ ಮೋಷನ್ ಪೋಸ್ಟರ್ ಅನಾವರಣಗೊಳಿಸಲಾಗಿತ್ತು. ವಿವಿಧ ನೋಟಗಳಲ್ಲಿ ನಾಯಕ ನಟನ ದರ್ಶನವಾಗಿತ್ತು. ಇದೀಗ ಚಿತ್ರದಿಂದ ರಶ್ಮಿಕಾ ಮಂದಣ್ಣ ಅವರ ಫಸ್ಟ್ ಲುಕ್ ಅನ್ನು ಬಿಡುಗಡೆಗೊಳಿಸಲಾಗಿದೆ.

'ಛಾವಾ' ಚಿತ್ರದ ಹಿಂದಿರುವ 'ಮ್ಯಾಡಾಕ್ ಫಿಲ್ಮ್ಸ್' ಇಂದು ನಾಯಕ ನಟಿ ರಶ್ಮಿಕಾ ಮಂದಣ್ಣ ಅವರ ಫಸ್ಟ್ ಲುಕ್ ಪೋಸ್ಟರ್ ಅನ್ನು ಸಾಮಾಜಿಕ ಮಾಧ್ಯಮದಲ್ಲಿ ಹಂಚಿಕೊಂಡಿದೆ. ಎರಡು ಪೋಸ್ಟರ್‌ಗಳನ್ನು ಶೇರ್ ಮಾಡಲಾಗಿದ್ದು, ಇದರಲ್ಲಿ ರಶ್ಮಿಕಾ 'ಯೇಸುಬಾಯಿ ಭೋಸಲೆ' ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ.

'ಛಾವಾ' ಚಿತ್ರದ ಟ್ರೇಲರ್ ನಾಳೆ ರಿಲೀಸ್ ಆಗಲಿದೆ. ಅದಕ್ಕೂ ಮುನ್ನ ಹಿಸ್ಟಾರಿಕಲ್ ಆಕ್ಷನ್ ಸಿನಿಮಾದಿಂದ 'ರಶ್ಮಿಕಾ ಮಂದಣ್ಣ' ಅವರ ನೋಟ ಅನಾವರಣಗೊಳಿಸಿ ಸಿನಿಮಾ ಸುತ್ತಲಿನ ಕ್ರೇಜ್ ಹೆಚ್ಚಿಸಿದ್ದಾರೆ ನಿರ್ಮಾಪಕರು. ಮಹಾರಾಣಿ ಯೇಸುಬಾಯಿ ಪಾತ್ರಕ್ಕೆ ರಶ್ಮಿಕಾ ಸಂಪೂರ್ಣವಾಗಿ ಜೀವ ತುಂಬಿದ್ದಾರೆ ಅನ್ನೋದು ಈ ಪೋಸ್ಟರ್‌ಗಳಲ್ಲಿ ಗೊತ್ತಾಗುತ್ತಿದೆ. ಸಿನಿಮಾ ಫೆಬ್ರವರಿ 14, 2025ರಂದು ಚಿತ್ರಮಂದಿರಗಳಲ್ಲಿ ಅದ್ಧೂರಿಯಾಗಿ ಬಿಡುಗಡೆಯಾಗಲಿದೆ.

ಪೋಸ್ಟರ್ ಹಂಚಿಕೊಂಡ ನಿರ್ಮಾಪಕರು, "ಪ್ರತೀ ಮಹಾನ್ ರಾಜನ ಹಿಂದೆ, ಅಪ್ರತಿಮ ಶಕ್ತಿಯುಳ್ಳ ರಾಣಿ ನಿಂತಿರುತ್ತಾಳೆ. ರಶ್ಮಿಕಾ ಮಂದಣ್ಣ ಅವರನ್ನು ಸ್ವರಾಜ್ಯದ ಹೆಮ್ಮೆ, ಮಹಾರಾಣಿ ಯೇಸುಬಾಯಿಯಾಗಿ ಪರಿಚಯಿಸಲಾಗುತ್ತಿದೆ" ಎಂದು ಬರೆದುಕೊಂಡಿದ್ದಾರೆ. ಪೋಸ್ಟರ್‌ಗಳಲ್ಲಿ, ನ್ಯಾಷನಲ್ ಕ್ರಶ್ ಸೀರೆ ಧರಿಸಿ, ಅಲೌಕಿಕ ಸೌಂದರ್ಯ ಬೀರಿದ್ದಾರೆ.

ಮೊದಲ ಪೋಸ್ಟರ್‌ನಲ್ಲಿ, ರಶ್ಮಿಕಾ ಹಸಿರು ಸೀರೆ ಉಟ್ಟು, ಆಭರಣಗಳನ್ನು ತೊಟ್ಟು ನಗುಮೊಗದಲ್ಲಿ ಮಹಾರಾಣಿಯ ನೋಟ ಬೀರಿದ್ದಾರೆ. ಮತ್ತೊಂದು ಪೋಸ್ಟರ್‌ನಲ್ಲಿ, ನಟಿಯ ಗಂಭೀರ ಮುಖಭಾವವನ್ನು ಕಾಣಬಹುದು. ಪೋಸ್ಟರ್‌ಗಳಿಗೆ ಪ್ರತಿಕ್ರಿಯಿಸುತ್ತಾ, ಸಾಮಾಜಿಕ ಮಾಧ್ಯಮ ಬಳಕೆದಾರರೋರ್ವರು, "ರಶ್ಮಿಕಾ ಅವರ ಮತ್ತೊಂದು ಬ್ಲಾಕ್‌ಬಸ್ಟರ್ ಬರುತ್ತಿದೆ" ಎಂದು ತಿಳಿಸಿದ್ದಾರೆ.

ರಶ್ಮಿಕಾ ಅವರ ನೋಟವನ್ನು ಹೊಗಳುತ್ತಾ, "ರಶ್ಮಿಕಾ ಮಂದಣ್ಣ ಯೇಸುಬಾಯಿ ನೋಟದಲ್ಲಿ ಅದ್ಭುತವಾಗಿ ಕಾಣಿಸುತ್ತಿದ್ದಾರೆ. ಅವರ ರಾಜಮನೆತನದ ಮತ್ತು ಆಕರ್ಷಕ ನೋಟವು ನಿಜವಾಗಿಯೂ ಐತಿಹಾಸಿಕ ಪಾತ್ರದ ಸಾರವನ್ನು ಸೆರೆಹಿಡಿಯುತ್ತಿದೆ. ಅವರು ಪ್ರಬಲ ಪಾತ್ರವನ್ನು ನಿರ್ವಹಿಸುವುದನ್ನು ನೋಡುವುದು ಅದ್ಭುತ" ಎಂದು ತಿಳಿಸಿದ್ದಾರೆ. ಚಿತ್ರದಲ್ಲಿ ವಿಕ್ಕಿ ಕೌಶಲ್ ಮರಾಠಾ ರಾಜ ಛತ್ರಪತಿ ಸಂಭಾಜಿ ಮಹಾರಾಜ್ ಪಾತ್ರದಲ್ಲಿ ನಟಿಸಿದ್ದಾರೆ. ಶಿವಾಜಿ ಸಾವಂತ್ ಬರೆದ ಮರಾಠಿ ಕಾದಂಬರಿ "ಛಾವಾ"ದ ಕಥೆಯನ್ನು ಆಧರಿಸಿದೆ. ಈ ಬಹುನಿರೀಕ್ಷಿತ ಚಿತ್ರವನ್ನು ಲಕ್ಷ್ಮಣ್ ಉಟೇಕರ್ ನಿರ್ದೇಶಿಸಿದ್ದಾರೆ. ಸಿನಿಮಾಗೆ ಮ್ಯಾಡಾಕ್ ಫಿಲ್ಮ್ಸ್‌ನ ದಿನೇಶ್ ವಿಜನ್ ಬಂಡವಾಳ ಹೂಡಿದ್ದಾರೆ.

ವಿಕ್ಕಿ, ರಶ್ಮಿಕಾ ಜೊತೆಗೆ ಅಕ್ಷಯ್ ಖನ್ನಾ ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ.



# 'ಲ್ಯಾಂಡ್ ಲಾರ್ಡ್' ಸಿನಿಮಾದಲ್ಲಿ ದುನಿಯಾ ವಿಜಯ್

ನಟ ದುನಿಯಾ ವಿಜಯ್ ಅವರು 'ಲ್ಯಾಂಡ್ ಲಾರ್ಡ್' ಸಿನಿಮಾದಲ್ಲಿ ನಟಿಸುತ್ತಿದ್ದಾರೆ. ಈ ಸಿನಿಮಾಗೆ ಕೆ.ವಿ. ಸತ್ಯಪ್ರಕಾಶ್ ಬಂಡವಾಳ ಹೂಡುತ್ತಿದ್ದಾರೆ. ಅವರಿಗೆ ಪುತ್ರ ಸೂರಜ್ ಗೌಡ ಕೂಡ ಸಾಥ್ ನೀಡಿದ್ದಾರೆ. ಜಡೇಶ ಕೆ. ಹಂಪಿ ಅವರ ನಿರ್ದೇಶನದಲ್ಲಿ ಈ ಸಿನಿಮಾ ಮೂಡಿಬರುತ್ತಿದೆ. ಇತ್ತೀಚೆಗೆ ಸಿನಿಮಾದ ಸುದ್ದಿಗೋಷ್ಠಿ ನಡೆಯಿತು.



ಈ ವೇಳೆ ಚಿತ್ರತಂಡದವರು ಒಂದಷ್ಟು ಇಂಟರೆಸ್ಟಿಂಗ್ ಮಾಹಿತಿ ಹಂಚಿಕೊಂಡರು. ಈ ಸಿನಿಮಾದಲ್ಲಿ ರೆಟ್ರೋ ಕಾಲದ ಕಥೆ ಇರಲಿದೆ ಎಂಬುದು ವಿಶೇಷ. ದುನಿಯಾ ವಿಜಯ್ ಅವರ ಗೆಟಪ್ ಸಹ ಭಿನ್ನವಾಗಿದೆ.

ನಿರ್ದೇಶಕ ಜಡೇಶ್ ಕೆ. ಹಂಪಿ ಮಾತನಾಡಿ 'ಇದೊಂದು ಗ್ರಾಮೀಣ ಸೊಗಡಿನ ಕಥೆ ಇರುವ ಸಿನಿಮಾ. 1980ರ ಕಾಲಘಟ್ಟದಲ್ಲಿ ನಡೆಯುವ ಕಥೆ. ಆಳಿದವರ ಕಥೆಯಲ್ಲ, ಅಳಿದು ಉಳಿದವರ ಕಥೆ ಎನ್ನುವ ಟ್ಯಾಗ್ ಲೈನ್ ಇದೆ. ಈ ಕಥೆಗೆ ವಿಜಯ್ ಅವರೇ ಸೂಕ್ತ ಆಯ್ಕೆ. ರಚಿತಾ ರಾಮ್ ಅವರು ನಾಯಕಿಯಾಗಿ ನಟಿಸುತ್ತಿದ್ದಾರೆ. ವಿಜಯ್ ಅವರ ಪುತ್ರಿ ರಿತನ್ಯ ಕೂಡ ಈ ಸಿನಿಮಾದ ಪ್ರಮುಖ ಪಾತ್ರದಲ್ಲಿ ಇರಲಿದ್ದಾರೆ' ಎಂದರು.

ಸ್ವಾಮಿ ಗೌಡ ಅವರು ಛಾಯಾಗ್ರಹಣ ಮಾಡುತ್ತಿದ್ದಾರೆ. ಅಜನೀಶ್ ಲೋಕನಾಥ್ ಅವರು ಸಂಗೀತ ನೀಡುತ್ತಿದ್ದಾರೆ. ಕೆ.ಎಂ. ಪ್ರಕಾಶ್ ಅವರು ಸಂಕಲನದ ಜವಾಬ್ದಾರಿ ನಿಭಾಯಿಸುತ್ತಿದ್ದಾರೆ. ಮಾಸ್ತಿ ಮತ್ತು ಶ್ರೀಕಾಂತ್ ಅವರು ಸಂಭಾಷಣೆ ಬರೆದಿದ್ದಾರೆ. 'ಸತ್ಯಪ್ರಕಾಶ್ ಮತ್ತು ಸೂರಜ್ ಗೌಡ ಅವರು ಯಾವುದೇ ಕೊರತೆ ಇಲ್ಲದಂತೆ ನಿರ್ಮಾಣ ಮಾಡುತ್ತಿದ್ದಾರೆ. ಉತ್ತಮವಾದ ತಂಡದ ಜತೆಗೆ ಕೆಲಸ ಮಾಡುತ್ತಿರುವುದಕ್ಕೆ ಖುಷಿ ಇದೆ' ಎಂದು ದುನಿಯಾ ವಿಜಯ್ ಹೇಳಿದ್ದಾರೆ.

'ಜಡೇಶ್ ಅವರು ಗ್ರಾಮೀಣ ಸೊಗಡಿನ ಒಳ್ಳೆಯ ಕಥೆ ಮಾಡಿಕೊಂಡಿದ್ದಾರೆ. ನಾವು ಚಿಕ್ಕವರಿದ್ದಾಗ ನಮ್ಮ ಹಳ್ಳಿಯಲ್ಲಿ ವಿದ್ಯುತ್ ದೀಪಗಳು ಹೆಚ್ಚು ಇರಲಿಲ್ಲ. ನಾನು ಈ ಚಿತ್ರದಲ್ಲಿ ಕಾಣಿಸಿಕೊಳ್ಳುತ್ತಿರುವ ಗೆಟಪ್ ರೀತಿ ನಮ್ಮ ಹಳ್ಳಿಯ ಹಿರಿಯರು ಇರುತ್ತಿದ್ದರು. ಜಾತಿ, ಮತ ಎಂಬ ಭೇದಭಾವ ಇರಲಿಲ್ಲ. ಇದ್ದದ್ದು ಎರಡೇ. ಒಂದು ಬಡವ. ಮತ್ತೊಂದು ಶ್ರೀಮಂತ. ಈ ಸಿನಿಮಾದಲ್ಲಿ ನಾನು ಬಡವರ ಪ್ರತಿನಿಧಿಯಾಗಿ ನಟಿಸುತ್ತಿದ್ದೇನೆ' ಎಂದಿದ್ದಾರೆ ದುನಿಯಾ ವಿಜಯ್.'ಜಡೇಶ್ ಅವರ ಕಥೆ ನನಗೆ ಇಷ್ಟ ಆಯಿತು. ಕಥೆ ಕೇಳಿದ ಕೆಲವೇ ದಿನಗಳಲ್ಲಿ ಈ ಸಿನಿಮಾ ಆರಂಭವಾಯಿತು' ಎಂದರು ನಿರ್ಮಾಪಕ ಸತ್ಯಪ್ರಕಾಶ್. 'ಈಗಾಗಲೇ 2 ಹಂತಗಳ ಶೂಟಿಂಗ್ ಮುಕ್ತಾಯ ಆಗಿದೆ. ಈಗ 3ನೇ ಹಂತದ ಶೂಟಿಂಗ್ ನಡೆಯುತ್ತಿದೆ. ಮಾರ್ಚ್ ವೇಳೆಗೆ ಚಿತ್ರೀಕರಣ ಪೂರ್ಣಗೊಳಿಸುವ ಪ್ಲಾನ್ ಇದೆ' ಎಂದು ಸಹ ನಿರ್ಮಾಪಕ ಸೂರಜ್ ಗೌಡ ಹೇಳಿದ್ದಾರೆ.



# ಕಂಬ್ಯಾಕ್ ಸುಳಿವು ನೀಡಿದ ಎಬಿಡಿ

ಸಿಡಿಲಬ್ಬರದ ಸಿಡಿಲಮರಿ ಎಬಿ ಡಿವಿಲಿಯರ್ಸ್ ಕ್ರಿಕೆಟ್ ಅಂಗಳಕ್ಕೆ ಮರಳುವ ಸೂಚನೆ ನೀಡಿದ್ದಾರೆ. 2021 ರಲ್ಲಿ ಎಲ್ಲಾ ಮಾದರಿಯ ಕ್ರಿಕೆಟ್‌ಗೆ ವಿದಾಯ ಹೇಳಿರುವ ಎಬಿಡಿ ಇದೀಗ ಮತ್ತೆ ಕ್ರಿಕೆಟ್ ಆಡಬೇಕೆಂಬ ಬಯಕೆಯನ್ನು ವ್ಯಕ್ತಪಡಿಸಿದ್ದಾರೆ. ಅಲ್ಲದೆ ಮತ್ತೆ ಕ್ರಿಕೆಟ್ ಅಂಗಳಕ್ಕೆ ಮರಳುವ ಸೂಚನೆಯನ್ನು ಸಹ ನೀಡಿದ್ದಾರೆ.

ರನ್ನಿಂಗ್ ಬಿಟ್ವೀನ್ ದಿ ವಿಕೆಟ್ಸ್‌ನ ಸಂದರ್ಶನದಲ್ಲಿ ಮಾತನಾಡಿದ ಡಿವಿಲಿಯರ್ಸ್, ನಾನು ಮತ್ತೆ ಕ್ರಿಕೆಟ್ ಅಂಗಳಕ್ಕೆ ಮರಳಬಹುದು. ಏಕೆಂದರೆ ನನ್ನ ಮಕ್ಕಳು ನಾನು ಆಡಬೇಕೆಂದು ಒತ್ತಡ ಹೇರುತ್ತಿರುತ್ತಾರೆ. ಅವರಿಗಾಗಿ ನಾನು ಮತ್ತೆ ಕ್ರಿಕೆಟ್ ಆಡಬೇಕೆಂದಿರುವೆ ಎಂದು ತಿಳಿಸಿದ್ದಾರೆ.

ಈ ಹಿಂದೆ ಎಬಿಡಿ ಡಿವಿಲಿಯರ್ಸ್ ಕಣ್ಣು ದೃಷ್ಟಿ ಸಮಸ್ಯೆಯ ಕಾರಣ ದಿಢೀರ್ ನಿವೃತ್ತಿ ಘೋಷಿಸಿದ್ದರು. ಈ ಬಗ್ಗೆ ಮಾತನಾಡಿದ ಎಬಿಡಿ, ನನ್ನ ಎಡಗಣ್ಣು ಸ್ವಲ್ಪ ಮಸುಕಾಗಿದ್ದರೂ, ಈಗ ಬಲಗಣ್ಣು ಪ್ರಬಲವಾಗಿದೆ. ಹೀಗಾಗಿ ಚೆಂಡನ್ನು ಚೆನ್ನಾಗಿ ಗುರುತಿಸಬಲ್ಲೆ ಎಂದು ತಿಳಿಸಿದ್ದಾರೆ.

ಇದೇ ವೇಳೆ ಸ್ಪರ್ಧಾತ್ಮಕ ಕ್ರಿಕೆಟ್‌ಗೆ ಮರಳುವುದಿಲ್ಲ ಎಂಬುದನ್ನು ಸಹ ಎಬಿ ಡಿವಿಲಿಯರ್ಸ್ ಖಚಿತಪಡಿಸಿದ್ದಾರೆ. ನಾನು ಮತ್ತೆ ಅಂಗಳಕ್ಕೆ ಇಳಿಯಲು ಇಚ್ಚಿಸಿದರೂ, ಐಪಿಎಲ್ ಅಥವಾ ಸೌತ್ ಆಫ್ರಿಕಾ ಟಿ20 ಲೀಗ್‌ಗಳಲ್ಲಿ ಕಾಣಿಸಿಕೊಳ್ಳಲು ಬಯಸುತ್ತಿಲ್ಲ. ಆದರೆ ಭವಿಷ್ಯದಲ್ಲಿ ಏನಾಗಲಿದೆ ಎಂಬುದನ್ನು ಕಾದು ನೋಡೋಣ ಎಂದು ಎಬಿ ಡಿವಿಲಿಯರ್ಸ್ ಹೇಳಿದ್ದಾರೆ.

ಎಬಿಡಿ ಅವರ ಈ ಹೇಳಿಕೆಯ ಬೆನ್ನಲ್ಲೇ ಅವರು ಮತ್ತೆ ಅಂಗಳಕ್ಕೆ ಇಳಿಯುವುದು ಬಹುತೇಕ ಖಚಿತ ಎನ್ನಬಹುದು. ಅಲ್ಲದೆ ಮುಂಬರುವ ದಿನಗಳಲ್ಲಿ ಎಲ್ಲವೂ ಅಂದುಕೊಂಡಂತೆ ನಡೆದರೆ ಅವರು ಸೌತ್ ಆಫ್ರಿಕಾ ಟಿ20 ಲೀಗ್ ಅಥವಾ ಐಪಿಎಲ್‌ನಲ್ಲಿ ಕಾಣಿಸಿಕೊಂಡರೂ ಅಚ್ಚರಿ ಪಡಬೇಕಿಲ್ಲ. ಆರ್‌ಸಿಬಿ ತಂಡದ ಆಪತ್ಬಾಂಧವರಾಗಿದ್ದ ಎಬಿ ಡಿವಿಲಿಯರ್ಸ್ ರಾಯಲ್ ಚಾಲೆಂಜರ್ಸ್ ಬೆಂಗಳೂರು ಪರ 157 ಪಂದ್ಯಗಳಾಡಿದ್ದಾರೆ.

ಈ ವೇಳೆ ಒಟ್ಟು 4522 ರನ್‌ಗಳನ್ನು ಕಲೆಹಾಕಿದ್ದರು. ಅಷ್ಟೇ ಅಲ್ಲದೆ ಆರ್‌ಸಿಬಿ ಪರ ಅತೀ ಹೆಚ್ಚು ರನ್ ಬಾರಿಸಿದ ವಿದೇಶಿ ಬ್ಯಾಟರ್ ಎಂಬ ದಾಖಲೆಯನ್ನೂ ಕೂಡ ಹೊಂದಿದ್ದಾರೆ. ಇನ್ನು ವಿರಾಟ್ ಕೊಹ್ಲಿ ಬಳಿಕ ಆರ್‌ಸಿಬಿ ಪರ ಅತಿ ಹೆಚ್ಚು ರನ್ ಗಳಿಸಿದ ಎರಡನೇ ಬ್ಯಾಟರ್ ಎಂಬ ದಾಖಲೆ ಕೂಡ ಎಬಿಡಿ ಹೆಸರಿನಲ್ಲಿದೆ.




# 'ಬೆಡ್ ಶೇರ್'; ನಟಿ ಟಬು ಕೆಂಡಾಮಂಡಲ

ಹದಿ ಹರೆಯದ ಹೆಂಗಳೆಯರಿಗಿಂತ ನಾನೇನೂ ಕಡಿಮೆ ಇಲ್ಲ ಎಂದು ಮಿಂಚುತ್ತಿರುವ 53ನೇ ವರ್ಷದ ನಟಿ ಟಬು ಸೈಲೆಂಟ್‌ಎಂದುಕೊಂಡವರೀಗ ಬಾಯಿ ಮೇಲೆ ಬೆರಳಿಟ್ಟು ಬೆರಗಾಗಿದ್ದಾರೆ. ಹೌದು, ನಟಿ ಟಬುಇಷ್ಟೊಂದು ವೈಲೆಂಟ್ ಯಾಕ್ ಆದ್ರೂ ಏನ್ ಅಪ್ಪ ಕತೆ ಅಂತೀರಾ.. 53 ವರ್ಷದ ಟಬು ಒಬ್ಬ ವ್ಯಕ್ತಿಯೊಂದಿಗೆ ಹಾಸಿಗೆ ಹಂಚಿಕೊಳ್ಳಲು ಬಯಸುತ್ತಿದ್ದಾರೆ ಎಂದು ಕೆಲವು ಮಾಧ್ಯಮ ವರದಿಗಳು ಹೇಳಿಕೊಂಡಿವೆ. ಈ ವರದಿಗಳನ್ನು ತೀವ್ರವಾಗಿ ಖಂಡಿಸಿರುವ ನಟಿ, ಇದನ್ನು ಅಲ್ಲಗಳೆದಿದ್ದಾರೆ. ಮಾಧ್ಯಮಗಳು ತಮ್ಮ ಬಗ್ಗೆ ತಪ್ಪು ಮಾಹಿತಿ ಹರಡುತ್ತಿವೆ ಎಂದು ಆರೋಪಿಸಿರುವ ನಟಿ, ಮಾಧ್ಯಮಗಳಿಂದ ಕ್ಷಮೆಯಾಚನೆ ಕೂಡ ಕೇಳಿದ್ದಾರೆ. ಹೇಳಿಕೆ ಬಿಡುಗಡೆ ಮಾಡಿರುವ ಅವರ ಆಪ್ತ ವಲಯ, "ಸ್ಟಾಪ್ ಪ್ರೆಸ್! ಟಬು ಬಗ್ಗೆ ತಪ್ಪು ಹೇಳಿಕೆಗಳನ್ನು ನೀಡಿರುವ ಹಲವು ವೆಬ್‌ಸೈಟ್‌ಗಳು ಮತ್ತು ಸಾಮಾಜಿಕ ಮಾಧ್ಯಮ ಖಾತೆಗಳಿವೆ. ಅವರು ಎಂದಿಗೂ ಅಂತಹ ಹೇಳಿಕೆ ನೀಡಿಲ್ಲ ಎಂದು ನಾವು ಸ್ಪಷ್ಟಪಡಿಸಲು ಬಯಸುತ್ತೇವೆ.

ಇದು ಪ್ರೇಕ್ಷಕರನ್ನು ದಾರಿ ತಪ್ಪಿಸುವ ನೈತಿಕತೆಯ ಗಂಭೀರ ಉಲ್ಲಂಘನೆಯಾಗಿದೆ. ಈ ವೆಬ್‌ಸೈಟ್‌ಗಳು ಸುಳ್ಳು ಹೇಳಿಕೆಯನ್ನು ತೆಗೆದುಹಾಕಲು ಮತ್ತು ಅವರ ತಪ್ಪಿಗೆ ಔಪಚಾರಿಕವಾಗಿ ಕ್ಷಮೆಯಾಚಿಸಲು ನಾವು ಒತ್ತಾಯಿಸುತ್ತೇವೆ." ಕೆಲವು ಮಾಧ್ಯಮ ವರದಿಗಳ ಪ್ರಕಾರ, 2024 ರಲ್ಲಿ ಟಬು ತಮ್ಮ 'ಕ್ರೂ' ಚಿತ್ರದ ಪ್ರಚಾರದ ಸಂದರ್ಭದಲ್ಲಿ, ಅವರ ಮದುವೆಯ ಯೋಜನೆಯ ಬಗ್ಗೆ ಕೇಳಿದಾಗ, ಅವರು ಮದುವೆಯಲ್ಲಿ ಆಸಕ್ತಿ ಇಲ್ಲ ಎಂದು ಹೇಳಿದ್ದಾರೆ. ಆದರೆ ಅವರು ಹಾಸಿಗೆ ಹಂಚಿ ಕೊಳ್ಳಬಹುದಾದ ವ್ಯಕ್ತಿಯನ್ನು ಬಯಸುತ್ತಾರೆ ಎಂದು ಹೇಳಿದ್ದಾರೆ. ಆದಾಗ್ಯೂ, ಟಬು ಮತ್ತು ಅವರ ತಂಡದ ಪ್ರಕಾರ, ನಟಿ ಎಂದಿಗೂ ಅಂತಹ ಹೇಳಿಕೆ ನೀಡಿಲ್ಲ.

ಪ್ರಕಾಶಕ– ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು–560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು–562123 ಇಲ್ಲಿ ಮುದ್ರಿಸಲ್ಪಟ್ಟಿದೆ. RNI.KAR/KAN/2009/31934, ದೂರವಾಣಿ: 9448074878
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
RNI.KAR/KAN/2009/31934.VOLUME-16/ISSUE-56 Email-mussanje2010@gmail.com, Phone: 9448074878